
VOLUME: 16 | 03 APRIL 2026 | ಶುಕ್ರವಾರ | RS: 2 | PAGE: 06 ISSUE: 64 ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಬಹುಭಾಷಾ ನಟಿ ಅನುಪಮಾ ಪರಮೇಶ್ವರನ್ ಅವರು ಸಾಮಾಜಿಕ ಜಾಲತಾಣಗಳಲ್ಲಿ ಅಪ್‌ಲೋಡ್ ಮಾಡಿರುವ ನೂತನ ಫೋಟೋಗಳಿಗೆ ಅಭಿಮಾನಿಗಳ ವಲಯದಲ್ಲಿ ಭಾರೀ ಮೆಚ್ಚುಗೆ ವ್ಯಕ್ತವಾಗಿದೆ. ವಿಭಿನ್ನ ರೀತಿಯ ಬಟ್ಟೆಗಳನ್ನು ಧರಿಸಿ ಹಂಚಿಕೊಂಡಿರುವ ಇವರ ಚಿತ್ರಗಳು ಎಲ್ಲೆಡೆ ಟ್ರೆಂಡಿಂಗ್ ಆಗ ತೊಡಗಿವೆ.



BHARATHA SARATHI
KANNADA DAILY NEWS PAPER
CALL 9740160669

# ಭಾರತ ಸಾರಥಿ

RNI KARKAN2011/44806
ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



ಅರಣ್ಯೇತರ ಭೂಮಿಯನ್ನು ರಾಜ್ಯ ಅರಣ್ಯ ಇಲಾಖೆಯ ಹೆಸರಿಗೆ ವರ್ಗಾವಣೆ ಮತ್ತು ಮ್ಯುಟೇಷನ್ ಮಾಡಿದ ನಂತರ, ರಾಜ್ಯ ಸರ್ಕಾರವು ಅದನ್ನು ಭಾರತೀಯ ಅರಣ್ಯ ಕಾಯಿದೆ 1927ರ ಸೆಕ್ಷನ್ 29 ಅಡಿಯಲ್ಲಿ ಅಥವಾ ಸ್ಥಳೀಯ ಅರಣ್ಯ ಕಾಯಿದೆಯ ಅಡಿಯಲ್ಲಿ ಸಂರಕ್ಷಿತ ಅರಣ್ಯ ಎಂದು ಅಧಿಸೂಚಿಸಬೇಕು. ನಂತರವೇ ಅರಣ್ಯ ಭೂಮಿಯನ್ನು ಬಳಕೆದಾರ ಏಜೆನ್ಸಿಗೆ ಹಸ್ತಾಂತರಿಸಬೇಕು.ಬಳಕೆದಾರ ಏಜೆನ್ಸಿ ಪರಿಹಾರ ಅರಣ್ಯೀಕರಣವನ್ನು ಬೆಳೆಸುವ ಮತ್ತು ನಿರ್ವಹಿಸುವ ವೆಚ್ಚವನ್ನು ಅರಣ್ಯೇತರ ಭೂಮಿಯ ಸಮಾನ ಪ್ರಮಾಣಕ್ಕೆ ಪ್ರಸ್ತುತ ದಿನಗೂಲಿ ದರದಲ್ಲಿ ಖಾತೆಗೆ ಆನ್‌ಲೈನ್‌ನಲ್ಲಿ ಜಮಾ ಮಾಡಬೇಕು.

# ಎತ್ತಿನಹೊಳೆ ಯೋಜನೆಗೆ ಅನುಮತಿ

ನವದೆಹಲಿ: ಎತ್ತಿನಹೊಳೆ ಯೋಜನೆಗೆ ಹಾಸನ ಹಾಗೂ ತುಮಕೂರು ಜಿಲ್ಲೆಗಳ 277 ಎಕರೆ ಅರಣ್ಯ ಬಳಸಲು ಕೇಂದ್ರ ಪರಿಸರ ಸಚಿವಾಲಯದ ಅರಣ್ಯ ಸಲಹಾ ಸಮಿತಿ ಷರತ್ತುಬದ್ಧ ಅನುಮತಿ ನೀಡಿದ ಬೆನ್ನಲ್ಲೇ ಕೇಂದ್ರ ಸರ್ಕಾರವು ತಾತ್ವಿಕ ಅನುಮೋದನೆ ನೀಡಿದೆ.

ಈ ಬಗ್ಗೆ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವಾಲಯ (ಅರಣ್ಯ ಸಂರಕ್ಷಣಾ ವಿಭಾಗ) ಮಾಹಿತಿ ನೀಡಿದ್ದು, ಯೋಜನೆ ಮುಂದುವರಿಸಲು 34 ಷರತ್ತುಗಳನ್ನು ವಿಧಿಸಿದೆ. ಈ ಬೆಳವಣಿಗೆ ಬಳಿಕ ಸಚಿವಾಲಯದ ತಕರಾರಿನ ಕಾರಣದಿಂದ ವರ್ಷದಿಂದ ಸ್ಥಗಿತಗೊಂಡಿದ್ದ ಎತ್ತಿನಹೊಳೆ ಯೋಜನೆ ಕಾಮಗಾರಿಗೆ ಮತ್ತೆ ಚಾಲನೆ ಸಿಗಲಿದೆ.

ಈಗಾಗಲೇ ಅರಣ್ಯ ಪ್ರದೇಶದಲ್ಲಿ ಒಪ್ಪಿಗೆ ಇಲ್ಲದೇ ಕಾಮಗಾರಿ ನಡೆಸಿದ ಅಧಿಕಾರಿಗಳ ವಿರುದ್ಧ ಶಿಸ್ತು ಕ್ರಮ ತೆಗೆದುಕೊಳ್ಳಬೇಕು. ಕಾಮಗಾರಿ ನಡೆಸಿದ ಸ್ಥಳದ ಮೌಲ್ಯದ ಆರು ಪಟ್ಟು ಮೌಲ್ಯವನ್ನು ದಂಡದ ರೂಪದಲ್ಲಿ ಪಾವತಿಸಬೇಕು. ಪರಿಸರ ಸಂರಕ್ಷಣೆ ಗಮನದಲ್ಲಿಟ್ಟುಕೊಂಡು ಕಾಮಗಾರಿ ನಡೆಸಬೇಕು ಎಂದು ಕೇಂದ್ರ ಹೇಳಿದೆ.

ಅರಣ್ಯ ಭೂಮಿಯ ಪ್ರಮಾಣಕ್ಕೆ ಸಮನಾಗಿ ಅರಣ್ಯೇತರ ಭೂಮಿಯಲ್ಲಿ ಬೆಳೆಸಬೇಕು. ಪರಿಹಾರ ಅರಣ್ಯೀಕರಣಕ್ಕಾಗಿ ಗುರುತಿಸಲಾದ ಅರಣ್ಯೇತರ ಭೂಮಿಯನ್ನು ರಾಜ್ಯ ಅರಣ್ಯ ಇಲಾಖೆಯ ಹೆಸರಿಗೆ ವರ್ಗಾವಣೆ ಮತ್ತು ಮ್ಯುಟೇಷನ್ ಮಾಡಬೇಕು, ಅದರ ವಿವರಗಳನ್ನು ಸಲ್ಲಿಸಬೇಕು.

ಅರಣ್ಯೇತರ ಭೂಮಿಯನ್ನು ರಾಜ್ಯ ಅರಣ್ಯ ಇಲಾಖೆಯ ಹೆಸರಿಗೆ ವರ್ಗಾವಣೆ ಮತ್ತು ಮ್ಯುಟೇಷನ್ ಮಾಡಿದ ನಂತರ, ರಾಜ್ಯ ಸರ್ಕಾರವು ಅದನ್ನು ಭಾರತೀಯ ಅರಣ್ಯ ಕಾಯಿದೆ 1927ರ ಸೆಕ್ಷನ್ 29 ಅಡಿಯಲ್ಲಿ ಅಥವಾ ಸ್ಥಳೀಯ ಅರಣ್ಯ ಕಾಯಿದೆಯ ಅಡಿಯಲ್ಲಿ ಸಂರಕ್ಷಿತ ಅರಣ್ಯ



ಎಂದು ಅಧಿಸೂಚಿಸಬೇಕು. ನಂತರವೇ ಅರಣ್ಯ ಭೂಮಿಯನ್ನು ಬಳಕೆದಾರ ಏಜೆನ್ಸಿಗೆ ಹಸ್ತಾಂತರಿಸಬೇಕು.

ಬಳಕೆದಾರ ಏಜೆನ್ಸಿ ಪರಿಹಾರ ಅರಣ್ಯೀಕರಣವನ್ನು ಬೆಳೆಸುವ ಮತ್ತು ನಿರ್ವಹಿಸುವ ವೆಚ್ಚವನ್ನು ಅರಣ್ಯೇತರ ಭೂಮಿಯ ಸಮಾನ ಪ್ರಮಾಣಕ್ಕೆ ಪ್ರಸ್ತುತ ದಿನಗೂಲಿ ದರದಲ್ಲಿ ಖಾತೆಗೆ ಆನ್‌ಲೈನ್‌ನಲ್ಲಿ ಜಮಾ ಮಾಡಬೇಕು. ಈ ಯೋಜನೆಯಲ್ಲಿ ಪ್ರದೇಶದ ಗಡಿ ನಿರ್ಧಾರ, ಬೇಲಿ, ನೀರುಣಿಸುವ ವ್ಯವಸ್ಥೆ, ಖಚಿಅ ಕೆಲಸಗಳು ಮತ್ತು ಮುಂದಿನ ವರ್ಷಗಳ ವೆಚ್ಚ ಏರಿಕೆಗೆ ಸೂಕ್ತ ಬದುಕುಳಿಕೆಯ ವೆಚ್ಚವನ್ನು ಸೇರಿಸಬೇಕು, ಇದನ್ನು 10 ವರ್ಷಗಳವರೆಗೆ ನಿರ್ವಹಿಸಬೇಕು.

ಮರಗಳನ್ನು ಕಡಿಯುವ ವೆಚ್ಚವನ್ನು ಬಳಕೆದಾರ ಏಜೆನ್ಸಿಯು ರಾಜ್ಯ ಅರಣ್ಯ ಇಲಾಖೆಗೆ ಜಮಾ ಮಾಡಬೇಕು. ಅರಣ್ಯ ಭೂಮಿಯಲ್ಲಿ ಯಾವುದೇ ಕಾರ್ಮಿಕ ಶಿಬಿರ ಸ್ಥಾಪಿಸುವಂತಿಲ್ಲ. ಯೋಜನೆಯ ಕಾಮಗಾರಿಗಾಗಿ ಅರಣ್ಯ ಪ್ರದೇಶದ ಒಳಗೆ ಹೊಸ ರಸ್ತೆ ಅಥವಾ ಹಾದಿಗಳನ್ನು ನಿರ್ಮಿಸುವಂತಿಲ್ಲ. ಅರಣ್ಯ ಭೂಮಿಯನ್ನು ಯೋಜನೆಯಲ್ಲಿ ತಿಳಿಸಲಾದ ಉದ್ದೇಶಕ್ಕೆ ಮಾತ್ರ ಬಳಸಬೇಕು. ಬೇರೆ ಯಾವುದೇ ಉದ್ದೇಶಕ್ಕೆ ಬಳಸುವಂತಿಲ್ಲ.

ಯೋಜನೆಗಾಗಿ ಬಳಸುವ ಒಟ್ಟು ಅರಣ್ಯ ಭೂಮಿಯ ಪ್ರಮಾಣ 111.0277 ಹೆಕ್ಟೇರ್ ಅನ್ನು ಮೀರಬಾರದು. ಅಕ್ಕಪಕ್ಕದ ಪ್ರದೇಶದ ಸಸ್ಯ ಮತ್ತು ಪ್ರಾಣಿ ಜೀವಿಗಳಿಗೆ ಯಾವುದೇ ಹಾನಿ ಉಂಟುಮಾಡುವಂತಿಲ್ಲ. ರಾಜ್ಯ ಸರ್ಕಾರವು ಅರಣ್ಯ ಅನುಮೋದನೆಯ ಷರತ್ತುಗಳ ಅನುಸರಣೆಯನ್ನು ಪ್ರತಿ ವರ್ಷ ಡಿಸೆಂಬರ್ 31ರಂದು ವರದಿ ಸಲ್ಲಿಸಬೇಕು.

ಮರಗಳನ್ನು ಕಡಿಯುವುದು ಅನಿವಾರ್ಯವಾಗಿದ್ದಲ್ಲಿ ಮಾತ್ರ ಮತ್ತು ರಾಜ್ಯ ಅರಣ್ಯ ಇಲಾಖೆಯ ಕಟ್ಟುನಿಟ್ಟು ಮೇಲ್ವಿಚಾರಣೆಯಲ್ಲಿ ಮಾತ್ರ ಮಾಡಬೇಕು. ಈ ಷರತ್ತುಗಳಲ್ಲಿ ಯಾವುದಾದರೂ ಒಂದು ಉಲ್ಲಂಘನೆಯಾದಲ್ಲಿ ಅದು ನಿಯಮ 1980 ಉಲ್ಲಂಘನೆ ಎಂದು ಪರಿಗಣಿಸಲಾಗುವುದು ಮತ್ತು ಕಾಯಿದೆ ಪ್ರಕಾರ ಕ್ರಮ ತೆಗೆಯಲಾಗುವುದು ಎಂದು ಎಚ್ಚರಿಸಿದೆ.

## ಪ್ರವಾಹ ಪರಿಸ್ಥಿತಿ ಎದುರಿಸಲು ಜಿಬಿಎ ಸಜ್ಜು

ಬೆಂಗಳೂರು: ಗ್ರೇಟರ್ ಬೆಂಗಳೂರು ಪ್ರಾಧಿಕಾರ ವ್ಯಾಪ್ತಿಯಲ್ಲಿ ಪೂರ್ವ ಮುಂಗಾರು ಹಾಗೂ ಮುಂಗಾರು ಮಳೆಯ ಸಂದರ್ಭದಲ್ಲಿ ಯಾವುದೇ ರೀತಿಯ ಪ್ರವಾಹ, ನೀರು ನಿಲ್ಲುವ ಸಮಸ್ಯೆ ಅಥವಾ ಸಾರ್ವಜನಿಕರಿಗೆ ತೊಂದರೆ ಉಂಟಾಗದಂತೆ ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಐದು ನಗರ ಪಾಲಿಕೆಗಳಿಗೆ ಸೂಚನೆ ನೀಡಿದ್ದಾರೆ.

ಸುತ್ತೋಲೆ ಮೂಲಕ ನೀಡಿರುವ ನಿರ್ದೇಶನದಲ್ಲಿ, ನಗರ ಪಾಲಿಕೆಗಳ ಆಯುಕ್ತರು ವಿಪತ್ತು ನಿರ್ವಹಣೆಯ ಜವಾಬ್ದಾರಿಯನ್ನು ಗಂಭೀರವಾಗಿ ವಹಿಸಿಕೊಂಡು ಮಳೆಗಾಲಕ್ಕೂ ಮುನ್ನ ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ತಿಳಿಸಿದ್ದಾರೆ.

ಜಿಬಿಎ ವ್ಯಾಪ್ತಿಯಲ್ಲಿ ಹಿಂದೆ ಗುರುತಿಸಲ್ಪಟ್ಟಿದ್ದ 209 ಪ್ರವಾಹ ಪೀಡಿತ ಪ್ರದೇಶಗಳ ಪೈಕಿ, 2025ರಲ್ಲಿ 49 ಪ್ರದೇಶಗಳು ಮತ್ತೆ ಪ್ರವಾಹ ಪೀಡಿತ ಪ್ರದೇಶಗಳಾಗಿ ಗುರುತಿಸಲ್ಪಟ್ಟಿವೆ. ಈ ಪ್ರದೇಶಗಳಲ್ಲಿ ಈಗಾಗಲೇ ಕೈಗೊಂಡಿರುವ ಕ್ರಮಗಳನ್ನು ಪರಿಶೀಲಿಸಿ, ಶಾಶ್ವತ ಪರಿಹಾರ ಒದಗಿಸಿರುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ಸೂಚಿಸಲಾಗಿದೆ.

ಇನ್ನೂ ಶಾಶ್ವತ ಪರಿಹಾರ ಸಿಗದ ಪ್ರದೇಶಗಳಲ್ಲಿ, ನಗರ ಪಾಲಿಕೆಗಳ ಮುಖ್ಯ ಅಭಿಯಂತರರು ಹಾಗೂ ಜಿಬಿಎ ಯೋಜನಾ ಅನುಷ್ಠಾನ ಘಟಕದ ಅಧಿಕಾರಿಗಳು ಸಮನ್ವಯದಿಂದ ತುರ್ತು ಕ್ರಮ ಕೈಗೊಳ್ಳಬೇಕು. ಅಪರ ಆಯುಕ್ತರು ಈ ಕಾರ್ಯಗಳ ಮೇಲ್ವಿಚಾರಣೆ ಮಾಡಿ ವರದಿ ಸಲ್ಲಿಸಬೇಕಾಗಿದೆ.

**ಪ್ರವಾಹ ಪೀಡಿತ ಪ್ರದೇಶಗಳಲ್ಲಿ ರಾಜಕಾಲುವೆ ಅಭಿವೃದ್ಧಿ ಕಾಮಗಾರಿಗಳನ್ನು ಆದ್ಯತೆಯ ಮೇರೆಗೆ ಶೀಘ್ರ ಪೂರ್ಣಗೊಳಿಸಬೇಕು.**

**ಯೋಜನಾ ಅನುಷ್ಠಾನ ಘಟಕದ ಅಧಿಕಾರಿಗಳು ಮತ್ತು ನಗರ ಪಾಲಿಕೆಗಳು ಪರಸ್ಪರ ಸಮನ್ವಯ ಸಾಧಿಸಿ ಕಾಮಗಾರಿ ತ್ವರಿತಗೊಳಿಸಲು ಸೂಚಿಸಲಾಗಿದೆ.**

ನಗರದ ಎಲ್ಲಾ ರಸ್ತೆಗಳ ಮಳೆ ನೀರು ಚರಂಡಿಗಳಲ್ಲಿ ಏಪ್ರಿಲ್ ಅಂತ್ಯದೊಳಗೆ ಹೂಳು ತೆಗೆದು ಸ್ವಚ್ಛಗೊಳಿಸಬೇಕು. ಹೂಳು ತೆರವು ಮಾಡುವಾಗ ಚರಂಡಿಗಳನ್ನು ಸಮೀಪದ ರಾಜಕಾಲುವೆಗೆ ಸಂಪರ್ಕಿಸುವ ಮೂಲಕ ಮಳೆ ನೀರು ಸರಾಗವಾಗಿ ಹರಿಯುವಂತೆ ನೋಡಿಕೊಳ್ಳಬೇಕು.

ಈ ಕಾರ್ಯದಲ್ಲಿ ನಿರ್ಲಕ್ಷ್ಯ ತೋರಿದರೆ ಸಂಬಂಧಪಟ್ಟ ಅಭಿಯಂತರರ ವಿರುದ್ಧ ಶಿಸ್ತು ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಲಾಗಿದೆ.

ಮಳೆಗಾಲ ಆರಂಭಕ್ಕೂ ಮುನ್ನ ನಗರ ಪಾಲಿಕೆಗಳ ನಿಯಂತ್ರಣ ಕೊಠಡಿಗಳಿಗೆ ಪಾಲಿಕೆ, ಬೆಸ್ಕಾಂ ಹಾಗೂ ಜಲಮಂಡಳಿ ಅಧಿಕಾರಿಗಳನ್ನು ನಿಯೋಜಿಸಬೇಕು. ಜೊತೆಗೆ ಎಸ್‌ಡಿಆರ್‌ಎಫ್ ಮತ್ತು ಎನ್‌ಡಿಆರ್‌ಎಫ್ ಸಿಬ್ಬಂದಿಗಳ ಪಟ್ಟಿಯನ್ನು ಸಿದ್ಧವಾಗಿಡಬೇಕು.

ಕಳೆದ ವರ್ಷ ಗೆದ್ದಲಹಳ್ಳಿ ರೈಲ್ವೆ ವೆಂಟ್ ಕಿರಿದಾಗಿದ್ದ ಕಾರಣ ಸಾಯಿ ಲೇಔಟ್, ಪೈ ಲೇಔಟ್ ಮತ್ತು ಹೆಚ್‌ಬಿಆರ್ ಲೇಔಟ್ ಪ್ರದೇಶಗಳಲ್ಲಿ ಪ್ರವಾಹ ಉಂಟಾಗಿತ್ತು. ಈ ಹಿನ್ನೆಲೆಯಲ್ಲಿ ಹೆಚ್ಚುವರಿ ವೆಂಟ್ ನಿರ್ಮಾಣ ಕಾಮಗಾರಿಯನ್ನು ಏಪ್ರಿಲ್ ಅಂತ್ಯದೊಳಗೆ ಪೂರ್ಣಗೊಳಿಸುವಂತೆ ಸೂಚಿಸಲಾಗಿದೆ.

ನಗರ ಪಾಲಿಕೆಗಳು ತಮ್ಮ ವ್ಯಾಪ್ತಿಯ ಅಗ್ನಿಶಾಮಕ ಠಾಣೆಗಳು ಹಾಗೂ ಎಸ್‌ಡಿಆರ್‌ಎಫ್ ತಂಡಗಳೊಂದಿಗೆ ಸಮನ್ವಯ ಸಾಧಿಸಿ, ತುರ್ತು ಸಂದರ್ಭಗಳಲ್ಲಿ ತಕ್ಷಣ ನೆರವು ಸಿಗುವಂತೆ ಅಧಿಕಾರಿಗಳ ಪಟ್ಟಿಯನ್ನು ಸಿದ್ಧವಾಗಿಡಬೇಕು.



ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯ ಪ್ರಚಾರದಲ್ಲಿ ಭಾಗವಹಿಸುವ ಮುನ್ನ ಹಳೇಪೇಟೆ ಯಲ್ಲಿರುವ ವೀರಭದ್ರೇಶ್ವರ ಸ್ವಾಮಿ ದೇವಸ್ಥಾನ ಮತ್ತು ದುರ್ಗಾ ಪರಮೇಶ್ವರಿ ದೇವಸ್ಥಾನಕ್ಕೆ ತೆರಳಿ ದೇವರ ದರ್ಶನ ಪಡೆದು ಪೂಜೆ ಸಲ್ಲಿಸಿದರು. ಸಚಿವರಾದ ಈಶ್ವರ್ ಖಂಡ್ರೆ, ಎಸ್.ಎಸ್.ಮಲ್ಲಿಕಾರ್ಜುನ್ ಮತ್ತು ವಿಧಾನ ಪರಿಷತ್ ಸದಸ್ಯರಾದ ಗೋವಿಂದರಾಜು ಸೇರಿ ಹಲವು ನಾಯಕರು ಉಪಸ್ಥಿತರಿದ್ದರು.

## ಪ್ರತಿ ಹಳ್ಳಿಗೆ 5ರಿಂದ 10 ಲಕ್ಷ ಹಣ ಹಂಚಿಕೆ?

ಬೆಂಗಳೂರು: ರಾಹುಲ್ ಗಾಂಧಿಯವರು ಅಷ್ಟು ಕೆಟ್ಟದಾಗಿ ಮಾತನಾಡುವುದಕ್ಕೂ ಮೋದಿಜೀ ಕಾರಣರೇ ಎಂದು ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಅವರು ಪ್ರಶ್ನಿಸಿದ್ದಾರೆ.

ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ "ಜಗನ್ನಾಥ ಭವನ"ದಲ್ಲಿ ಇಂದು ಅವರು ಮಾಧ್ಯಮಗಳ ಜೊತೆ ಮಾತನಾಡಿ ಪ್ರಶ್ನೆಗೆ ಉತ್ತರ ನೀಡಿದರು. ಮಧ್ಯ ಪ್ರಾಚ್ಯದಲ್ಲಿ ಯುದ್ಧ ಪ್ರಾರಂಭವಾಗಿದೆ. ಕಚ್ಚಾ ತೈಲಕ್ಕಾಗಿ ನಾವು ಗಲ್ಫ್ ರಾಷ್ಟ್ರಗಳನ್ನು ಅವಲಂಬಿಸಿದ್ದೇವೆ. ಅದರಿಂದ ಅವುಗಳ ಬೆಲೆಯಲ್ಲಿ ಏರಿಕೆ ಆಗಬಹುದು. ಕಾಂಗ್ರೆಸ್ಸಿನವರು ಗ್ಯಾರಂಟಿ ಮುಂದಿಟ್ಟು ಬೆಲೆ ಏರಿಸುತ್ತಲೇ ಬಂದಿದ್ದಾರೆ. ಇವರ ಜನವಿರೋಧಿ ನೀತಿಗಳಿಗೆ ಬಿಜೆಪಿಯನ್ನು ಟ್ಯಾಗ್ ಮಾಡುವುದು ಸರಿಯಲ್ಲ ಎಂದು ತಿಳಿಸಿದರು.

ಇನ್ನೊಂದು ಪ್ರಶ್ನೆಗೆ ಉತ್ತರಿಸಿ, ಬಾಗಲಕೋಟೆಯ ಚುನಾವಣೆಯಲ್ಲಿ ಬಿಜೆಪಿಗೆ ಅಭೂತಪೂರ್ವ ಗೆಲುವು ಖಚಿತ ಎಂದ ಅವರು, ಹಳ್ಳಿಗಳಲ್ಲಿ ಸೋಲು ಖಚಿತವೆಂದು ಗೊತ್ತಾದ ಬಳಿಕ ಮುಖ್ಯಮಂತ್ರಿಗಳು 5 ದಿನ ಅಲ್ಲೇ ಠಿಕಾಣಿ ಹೂಡಿದ್ದಾರೆ.

## 'ನಾನು ಸಿಎಂ ಆದ ಮೊದಲ ದಿನವೇ ಮುಸ್ಲಿಮರನ್ನು ಅಲ್ಪಸಂಖ್ಯಾತ ಪಟ್ಟಿಯಿಂದ ಹೊರಹಾಕುತ್ತೇನೆ'

ವಿಜಯಪುರ: ನಾನು ಸಿಎಂ ಆಗಿ ಮೊದಲ ಕ್ಯಾಬಿನೆಟ್‌ನಲ್ಲೇ ಮುಸ್ಲಿಮರನ್ನು ಅಲ್ಪಸಂಖ್ಯಾತ ಪಟ್ಟಿಯಿಂದ ಹೊರಹಾಕುತ್ತೇನೆ. ರಾಜ್ಯದಲ್ಲಿ ಯೋಗಿ ಆದಿತ್ಯನಾಥ ಆಡಳಿತ ನಡೆಸುತ್ತೇನೆ ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಹೇಳಿದ್ದಾರೆ.

ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಇಂದು ಹನುಮ ಜಯಂತಿ. ಆಂಜನೇಯನ ಸನ್ನಿಧಾನದಲ್ಲಿ ನಿಂತು ಹೇಳುತ್ತೇನೆ. ನಾನು ಯಾವುದೇ ಕಾರಣಕ್ಕೂ ಬಿಜೆಪಿಗೆ ಸೇರಿಸಿಕೊಳ್ಳಿ ಅಂತ ಹೇಳಲ್ಲ. ಅವರಾಗಿಯೇ ಅಪ್ಪ, ಮಗನ ಕೈ ಬಿಟ್ಟು ನನ್ನನ್ನು ಬಿಜೆಪಿಗೆ ಬನ್ನಿ ಅಂತಾ ಕರೆಯುತ್ತಾರೆ. ಬಳಿಕ ಸಿಎಂ ಆಗಿ ರಾಜ್ಯದಲ್ಲಿ ಯೋಗಿ ಆದಿತ್ಯನಾಥ ತರಹ ರಾಜ್ಯಭಾರ ಮಾಡುತ್ತೇನೆ. ಸಿಎಂ ಆದ ಮೊದಲ ಕ್ಯಾಬಿನೆಟ್ ಸಭೆಯಲ್ಲೇ ಅಲ್ಪಸಂಖ್ಯಾತ ಪಟ್ಟಿಯಿಂದ ಮುಸ್ಲಿಮರನ್ನು ಹೊರಹಾಕುತ್ತೇನೆ. ಇವರ ಹೊರತಾಗಿ ಮರಾಠರು, ಬ್ರಾಹ್ಮಣರು, ಕ್ಷತ್ರಿಯರು ಸೇರಿದಂತೆ ಅನೇಕರು ಅಲ್ಪಸಂಖ್ಯಾತರು ಇದ್ದಾರೆ. ಅವರಿಗೆಲ್ಲ ಅಲ್ಪಸಂಖ್ಯಾತ ಸ್ಥಾನಮಾನ ಕೊಡ್ತೇನೆ ಎಂದಿದ್ದಾರೆ.

ವೀರಣ್ಣ ಚರಂತಿಮಠ ಅವರು ನನ್ನ ಆತ್ಮೀಯರು.



ಬಾಗಲಕೋಟೆಯಲ್ಲಿ ಬಿಜೆಪಿ ಕಾರ್ಯಕರ್ತರು ನನ್ನನ್ನ ಪ್ರಚಾರಕ್ಕೆ ಕರೆದಿದ್ದಾರೆ. ಅದಕ್ಕೆ ನಾನು ಚರಂತಿಮಠ ಅವರ ಪ್ರಚಾರಕ್ಕೆ ಹೊರಟಿದ್ದೇನೆ. ಯಾವುದೇ ನಾಟಕ ಮಾಡಿ ಬಿಜೆಪಿ ಸೇರುವ ಅವಶ್ಯಕತೆ ನನಗಿಲ್ಲ. ಸಚಿವ ಎಂ.ಬಿ ಪಾಟೀಲ್ ಸ್ವಾಭಿಮಾನದ ಮಾತುಗಳನ್ನ ಆಡ್ತಾರೆ. ಅವರಿಗೆ ಸ್ವಾಭಿಮಾನ ಇದ್ರೆ, ಬಾಗೇವಾಡಿಗೆ ಹೋಗಿ ಕಾಂಗ್ರೆಸ್ ಅಭ್ಯರ್ಥಿ ಪರ ಪ್ರಚಾರ ಮಾಡೋದನ್ನ ಬಿಡಲಿ. ಬಾಗೇವಾಡಿ ಕಾಂಗ್ರೆಸ್ ಅಭ್ಯರ್ಥಿ ಮುಸುಕಿನಲ್ಲಿ ರಾತ್ರಿ ಬಂದು ಎಂ.ಬಿ ಪಾಟೀಲ್ ವಿರುದ್ಧ ಪ್ರಚಾರ ಮಾಡಿ ಹೋಗುತ್ತಾನೆ ಎಂದು ಟಾಂಗ್ ಕೊಟ್ಟಿದ್ದಾರೆ.

## ಚಾಲಕನ ಮೇಲೆ ಹಲ್ಲೆ: ಕ್ರಮಕ್ಕೆ ಆಗ್ರಹ

ಬೆಂಗಳೂರು: ನಗರದ ಸಿದ್ದಗಂಗಾ ಟ್ರಾವೆಲ್ಸ್ ನಲ್ಲಿ ಕಾರ್ಯನಿರ್ವಹಿಸುತ್ತಿದ್ದ ಚಾಲಕ ರಾಮೇಗೌಡ ಅವರ ಮೇಲೆ ಟ್ರಾವೆಲ್ಸ್ ಮಾಲೀಕರು ಮಾರಣಾಂತಿಕ ಹಲ್ಲೆ ನಡೆಸಿದ್ದು, ಅವರ ಮೇಲೆ ಕಾನೂನು ಕ್ರಮ ಕೈಗೊಳ್ಳಬೇಕು. ಚಾಲಕರ ಕುಟುಂಬಕ್ಕೆ ಹತ್ತು ಲಕ್ಷ ರೂ ಪರಿಹಾರ ನೀಡಬೇಕೆಂದು ಇಂಡಿಯನ್ ವೆಹಿಕಲ್ಸ್ ಡ್ರೈವರ್ಸ್ ಟ್ರೇಡ್ ಯೂನಿಯನ್ ಅಧ್ಯಕ್ಷ ಗಂಡಸಿ ಸದಾನಂದ ಸ್ವಾಮಿ ಆಗ್ರಹಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾರ್ಚ್ 28 ರಂದು ಬಸವೇಶ್ವರ ನಗರದ ಟ್ರಾವೆಲ್ಸ್ ಕಚೇರಿಯಲ್ಲಿ ಮಾಲೀಕ ಮಹೇಶ್ ರಾಡ್ ನಿಂದ ತಲೆಗೆ ಹಲ್ಲೆ ಮಾಡಿದ್ದು, ಅವರಿಗೆ ರಕ್ತಗಾಯವಾಗಿದೆ. ವೇತನ ನೀಡುವಂತೆ ಕೇಳಿದ ಕಾರಣಕ್ಕೆ ಹಲ್ಲೆ



ಮಾಡಿರುವುದು ಸರಿಯಲ್ಲ. ಚಾಲಕ ರಾಮೇಗೌಡ ಅವರ ಪತ್ನಿ ಬಸವೇಶ್ವರನಗರ ನಗರ ಪೊಲೀಸ್ ಠಾಣೆಗೆ ದೂರು ನೀಡಿದ್ದು, ಎಫ್.ಐ.ಆರ್ ದಾಖಲಾಗಿದೆ. ಮಾರಣಾಂತಿಕ ಹಲ್ಲೆ ನಡೆಸಿದ್ದರೂ ಪೊಲೀಸರು ಕ್ರಮ ಕೈಗೊಂಡಿಲ್ಲ ಎಂದು ಆರೋಪಿಸಿದರು.

ಟ್ರಾವೆಲ್ಸ್ ನಲ್ಲಿ 150ಕ್ಕೂ ಹೆಚ್ಚು ಸಿಬ್ಬಂದಿ ಕಾರ್ಯ ನಿರ್ವಹಿಸುತ್ತಿದ್ದು ಚಾಲಕರು ಮತ್ತು ನಿರ್ವಾಹಕರು ಹಾಗೂ ಕಾರ್ಮಿಕರಿಗೆ ಯಾವುದೇ ಇಎಸ್‌ಐ ಪಿಎಫ್ ನಂತಹ ಸೌಲಭ್ಯ ನೀಡದೆ ವಂಚಿಸುತ್ತಿದ್ದಾರೆ. ಸಿದ್ದಗಂಗಾ ಟ್ರಾವೆಲ್ಸ್ ಮಾಲೀಕ ಮಹೇಶ್ ಹಲ್ಲೆಗೊಳಗಾದ ಚಾಲಕ ರಾಮೇಗೌಡನಿಗೆ 10 ಲಕ್ಷ ಪರಿಹಾರ ನೀಡಬೇಕು.

ಇಲ್ಲಿದಿದ್ದಲ್ಲಿ ಉಗ್ರ ಹೋರಾಟ ಮಾಡುವುದಾಗಿ ಹೇಳಿದರು

## ಟ್ರಂಪ್‌ಗೆ ಮಂಗಳಾರತಿ

ನವದೆಹಲಿ: ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಮಧ್ಯಪ್ರಾಚ್ಯ ಸಂಘರ್ಷದ ಬಗ್ಗೆ ಪದೇ ಪದೇ ಮಾತನಾಡುವ ಮೂಲಕ ಗೊಂದಲ ಸೃಷ್ಟಿಸುತ್ತಿದ್ದಾರೆ ಎಂದು ಫ್ರೆಂಚ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ಗುರುವಾರ ಹೇಳಿದ್ದಾರೆ.

"ನೀವು ಗಂಭೀರವಾಗಿರಬೇಕು. ದಿನಕ್ಕೊಂದು ಕ್ಷಣಕ್ಕೊಂದು ಮಾತನಾಡಬೇಡಿ. ಒಂದು ದಿನ ಒಂದು ಮಾತು, ಮತ್ತೊಂದು ದಿನ ಇನ್ನೊಂದು ಮಾತು ಹೇಳಬಾರದು. ನಿತ್ಯವೂ ಇಂತಹ ಹೇಳಿಕೆಗಳನ್ನು ನೀಡುವ ಬದಲು, ಪರಿಸ್ಥಿತಿಯನ್ನು ತಿಳಿಗೊಳಿಸಿ ಶಾಶ್ವತ ಶಾಂತಿಯತ್ತ ಗಮನ ಹರಿಸುವುದು ಉತ್ತಮ" ಎಂದು ಮ್ಯಾಕ್ರನ್ ಅವರು ಟ್ರಂಪ್‌ಗೆ ಸರಿಯಾಗಿ ಮಂಗಳಾರತಿ ಮಾಡಿದ್ದಾರೆ.

ಹೋರ್ಮುಜ್ ಜಲಸಂಧಿಯನ್ನು ಸ್ವತಂತ್ರಗೊಳಿಸಲು ಮಿಲಿಟರಿ ಕಾರ್ಯಾಚರಣೆ ನಡೆಸುವುದು "ಅವಾಸ್ತವಿಕ" ಎಂದು ಮ್ಯಾಕ್ರನ್ ಹೇಳಿದ್ದಾರೆ.

"ಮಿಲಿಟರಿ ಕಾರ್ಯಾಚರಣೆಯ ಮೂಲಕ ಬಲವಂತವಾಗಿ ಹಾರ್ಮುಜ್ ಜಲಸಂಧಿಯನ್ನು ವಿಮೋಚನೆಗೊಳಿಸಲು ಪ್ರತಿಪಾದಿಸುವವರಿದ್ದಾರೆ, ಈ ನಿಲುವನ್ನು ಕೆಲವೊಮ್ಮೆ ಯುನೈಟೆಡ್ ಸ್ಟೇಟ್ಸ್ ವ್ಯಕ್ತಪಡಿಸಿದೆ. ಇದು ಅವಾಸ್ತವಿಕ. ಏಕೆಂದರೆ ಇದು ಹೆಚ್ಚಿನ ಸಮಯವನ್ನು ತೆಗೆದುಕೊಳ್ಳುತ್ತದೆ ಮತ್ತು ಜಲಸಂಧಿಯನ್ನು ದಾಟುವ ಪ್ರತಿಯೊಬ್ಬರು ಇರಾನಿನ ಕ್ರಾಂತಿಕಾರಿ ಗಾರ್ಡ್‌ಗಳಿಂದ ಭಾರೀ ಬೆದರಿಕೆ ಎದುರಿಸಬೇಕಾಗುತ್ತದೆ. ಹೀಗಾಗಿ ಕದನ ವಿರಾಮ ಘೋಷಿಸಬೇಕು" ಎಂದು ಮ್ಯಾಕ್ರನ್ ಹೇಳಿದ್ದಾರೆ.

ಮ್ಯಾಕ್ರಾನ್ ಅವರು ಗುರುವಾರ ದಕ್ಷಿಣ ಕೊರಿಯಾಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ, ಟ್ರಂಪ್ ಅವರು ಅಮೆರಿಕದ ಮೈತ್ರಿಕೂಟದ ಬದ್ಧತೆಯ ಬಗ್ಗೆ "ನಿತ್ಯವೂ ಅನುಮಾನ" ಸೃಷ್ಟಿಸುವ ಮೂಲಕ ನಾರ್ತ್ ಅಟ್ಲಾಂಟಿಕ್ ಟ್ರೀಟಿ ಆರ್ಗೈಸೇಷನ್ (ನ್ಯಾಟೋ)ಅನ್ನು ದುರ್ಬಲಗೊಳಿಸಿದ್ದಾರೆ ಎಂದು ಮ್ಯಾಕ್ರನ್ ಆರೋಪಿಸಿದರು.

ನ್ಯಾಟೋವನ್ನು "ಪೇಪರ್ ಟೈಗರ್" ಎಂದು ಟೀಕಿಸಿದ ಟ್ರಂಪ್, ದೊಡ್ಡ ಯುದ್ಧ ಬಂದರೆ ನ್ಯಾಟೋ ನಿಷ್ಪ್ರಯೋಜಕವಾಗಲಿದೆ ಎಂದರು. ಅಮೆರಿಕಕ್ಕೆ ತಮ್ಮ ಸೇನಾ ನೆಲೆಗಳನ್ನು ಬಳಸಲು ಅವಕಾಶ ನೀಡದಿರುವ ಯುರೋಪಿಯನ್ ರಾಷ್ಟ್ರಗಳ ಕ್ರಮಕ್ಕೆ ಅವರು ಆಕ್ರೋಶ ವ್ಯಕ್ತಪಡಿಸಿದ್ದು, ಅಮೆರಿಕವನ್ನು ನ್ಯಾಟೋದಿಂದ ಹೊರತರುವ ಬಗ್ಗೆಯೂ ಚಿಂತನೆ ನಡೆಸುತ್ತಿರುವುದಾಗಿ ತಿಳಿಸಿದ್ದಾರೆ.

## ತೈಲ ಬೆಲೆ ಮತ್ತೆ ಏರಿಕೆ

ವಾಷಿಂಗ್ಟನ್: ಇರಾನ್ ಯುದ್ಧಕ್ಕೆ ಸಂಬಂಧಿಸಿದಂತೆ ಅಮೆರಿಕದ ಪ್ರಜೆಗಳನ್ನು ಉದ್ದೇಶಿಸಿ ಡೊನಾಲ್ಡ್ ಟ್ರಂಪ್ ಭಾಷಣ ಮಾಡಿದ ಬೆನ್ನಲ್ಲೇ ಕಚ್ಚಾ ತೈಲದ ಬೆಲೆ ದಿಢೀರ್‌ಆಗಿ ಭಾರೀ ಏರಿಕೆಯಾಗಿದೆ.ಅಮೆರಿಕದ ಕಾಲಮಾನ ಬುಧವಾರ ರಾತ್ರಿ 9 ಗಂಟೆಗೆ(ಭಾರತೀಯ ಕಾಲಮಾನ ಗುರುವಾರ ಬೆಳಗ್ಗೆ 6:30) ಟ್ರಂಪ್ ಭಾಷಣ ಮಾಡಿ ಯುದ್ಧ ಇನ್ನು 2–3 ವಾರಗಳ ಮುಂದುವರಿಯಲಿದೆ ಎಂದು ಘೋಷಿಸಿದರು.

ಟ್ರಂಪ್ ವಿಷಯವನ್ನು ಪ್ರಸ್ತಾಪ ಮಾಡುತ್ತಿದ್ದಂತೆ ತೈಲ ರಫ್ತು ಮಾಡುವ ಒಪೆಕ್ ರಾಷ್ಟ್ರಗಳ ಬ್ರೆಂಟ್ ಕಚ್ಚಾತೈಲದ ಬೆಲೆ 4.5% ಏರಿಕೆಯಾಗಿದೆ. ಒಂದು ಬ್ಯಾರೆಲ್ (158 ಲೀಟರ್) ಕಚ್ಚಾ ತೈಲದ ದರ 106.42 ಡಾಲರ್‌ಗೆ (9,930 ರೂ.) ತಲುಪಿದೆ. ಅಮೆರಿಕದ ವೆಸ್ಟ್ ಟೆಕ್ಸಾಸ್ ಇಂಟರ್ಮೀಡಿಯೇಟ್ ದರ 4% ಏರಿಕೆಯಾಗಿ 104.24 ಡಾಲರ್‌ನಲ್ಲಿ (9,732 ರೂ.) ವ್ಯವಹಾರ ನಡೆಸುತ್ತಿದೆ.

ಈ ಮೊದಲು ಯುದ್ಧ ಶೀಘ್ರವೇ ಅಂತ್ಯಗೊಳ್ಳಬಹುದು ಎಂದು ಟ್ರಂಪ್ ಹೇಳಿದ್ದರಿಂದ ಬುಧವಾರ ಮಾರುಕಟ್ಟೆಯಲ್ಲಿ ಒಂದು ಬ್ಯಾರೆಲ್ ಬ್ರೆಂಟ್ ಕಚ್ಚಾ ತೈಲ 99, 100 ಡಾಲರ್‌ನಲ್ಲಿ ವ್ಯವಹಾರ ನಡೆಸುತ್ತಿದ್ದರೆ, 98.71 ಡಾಲರ್‌ನಲ್ಲಿ ವ್ಯವಹಾರ ನಡೆಸುತ್ತಿತ್ತು.

ತೈಲ ಬೆಲೆ ಏರಿಕೆ ತಾತ್ಕಾಲಿಕ. ಇರಾನ್ ನಡೆಸುತ್ತಿರುವ ಭೀಕರ ಭಯೋತ್ಪಾದನಾ ದಾಳಿಗಳು ವಾಣಿಜ್ಯ ತೈಲ ನೌಕೆಗಳ ಮೇಲೆ ಪರಿಣಾಮ ಬೀರುತ್ತಿರುವುದರಿಂದ ಬೆಲೆ ಏರಿಕೆಯಾಗಿದೆ. ಅಮೆರಿಕದಲ್ಲಿ ತೈಲ ಮತ್ತು ಗ್ಯಾಸ್ ಬೆಲೆಗಳ ಏರಿಕೆಗೆ ಇರಾನ್‌ನ ಕ್ರೂರ ಆಡಳಿತವೇ ಕಾರಣ.

03/04/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಖೇಲೋ ಇಂಡಿಯಾ ಟ್ರೈಬಲ್ ಗೇಮ್ಸ್‌ನಲ್ಲಿ ಕರ್ನಾಟಕದ ಕುಸ್ತಿಪಟುಗಳ ಮಿಂಚು



ಬೆಂಗಳೂರು

ಛತ್ತೀಸ್‌ಗಢದ ಅಂಬಿಕಾಪುರದಲ್ಲಿ ಮಾರ್ಚ್ 27ರಿಂದ 31ರವರೆಗೆ ನಡೆದ ಖೇಲೋ ಇಂಡಿಯಾ ಟ್ರೈಬಲ್ ಗೇಮ್ಸ್–2026ರಲ್ಲಿ ಕರ್ನಾಟಕದ ಕುಸ್ತಿಪಟುಗಳು ಅತ್ಯುತ್ತಮ ಪ್ರದರ್ಶನ ನೀಡಿ ಒಟ್ಟು 7 ಪದಕಗಳನ್ನು ಗೆದ್ದಿದ್ದಾರೆ. ರಾಜ್ಯದ ಕ್ರೀಡಾಪಟುಗಳು 3 ಚಿನ್ನ, 1 ಬೆಳ್ಳಿ ಹಾಗೂ 3 ಕಂಚಿನ ಪದಕಗಳನ್ನು ಪಡೆದು ರಾಷ್ಟ್ರಮಟ್ಟದಲ್ಲಿ ರಾಜ್ಯದ ಕೀರ್ತಿಯನ್ನು ಎತ್ತಿ ಹಿಡಿದಿದ್ದಾರೆ.

ಇದರ ಜೊತೆಗೆ ಮಹಿಳಾ ವಿಭಾಗದಲ್ಲಿ ಕರ್ನಾಟಕ ತಂಡ ದ್ವಿತೀಯ ರನ್ನರ್–ಅಪ್ ಸ್ಥಾನ ಪಡೆದು ಮತ್ತೊಂದು ವಿಶೇಷ ಸಾಧನೆ ಮಾಡಿದೆ.

ಪದಕ ವಿಜೇತರು ಹೀಗಿದ್ದಾರೆ:

* ರೋಹನ್ ದೊಡ್ಡಮನಿ – 60 ಕೆಜಿ ಗ್ರೀಕೊ ರೋಮನ್ ವಿಭಾಗದಲ್ಲಿ ಚಿನ್ನ
* ಪ್ರಿನ್ಸಿಟ ಫರ್ನಾಂಡಿಸ್ ಸಿದ್ದಿ – 68 ಕೆಜಿ ಮಹಿಳಾ ವಿಭಾಗದಲ್ಲಿ ಚಿನ್ನ
* ಮನೀಷಾ ಸಿದ್ದಿ – 76 ಕೆಜಿ ಮಹಿಳಾ ವಿಭಾಗದಲ್ಲಿ ಚಿನ್ನ
* ಶಾಲಿನಾ ಸಿದ್ದಿ – 57 ಕೆಜಿ ಮಹಿಳಾ ವಿಭಾಗದಲ್ಲಿ ಬೆಳ್ಳಿ
* ಅಮೂಲ್ಯ ಕುಂದರಗಿ – 57 ಕೆಜಿ ಮಹಿಳಾ ವಿಭಾಗದಲ್ಲಿ ಕಂಚು
* ಕೆಂಪನಗೌಡ ಕೆಂಪನವರ್ – 65 ಕೆಜಿ ಫ್ರೀಸ್ಟೈಲ್ ವಿಭಾಗದಲ್ಲಿ ಕಂಚು
* ಅಮೃತ್ ದುರ್ಗಣ್ಣವರ್ – 74 ಕೆಜಿ ಫ್ರೀಸ್ಟೈಲ್ ವಿಭಾಗದಲ್ಲಿ ಕಂಚು

ಕರ್ನಾಟಕ ರಾಜ್ಯ ಕುಸ್ತಿ ಸಂಘದ ಅಧ್ಯಕ್ಷ ಬಿ. ಗುಣರಂಜನ್ ಶೆಟ್ಟಿ ಅವರು ಕ್ರೀಡಾಪಟುಗಳ ಸಾಧನೆಯನ್ನು ಶ್ಲಾಘಿಸಿದ್ದಾರೆ.

"ಖೇಲೋ ಇಂಡಿಯಾ ಟ್ರೈಬಲ್ ಗೇಮ್ಸ್‌ನಲ್ಲಿ ನಮ್ಮ ರಾಜ್ಯದ ಕುಸ್ತಿಪಟುಗಳು, ಅದರಲ್ಲೂ ವಿಶೇಷವಾಗಿ ಮಹಿಳಾ ಕ್ರೀಡಾಪಟುಗಳು ತೋರಿರುವ ಸಾಧನೆ ಪ್ರತಿಯೊಬ್ಬ ಕನ್ನಡಿಗನಿಗೂ ಹೆಮ್ಮೆ ತಂದಿದೆ. ಕಠಿಣ ಪರಿಶ್ರಮ ಹಾಗೂ ಛಲದಿಂದ 7 ಪದಕಗಳನ್ನು ಗೆದ್ದಿರುವ ಎಲ್ಲಾ ಕ್ರೀಡಾಪಟುಗಳಿಗೆ ಹಾರ್ದಿಕ ಅಭಿನಂದನೆಗಳು. ಮುಂಬರುವ ದಿನಗಳಲ್ಲಿ ಇವರು ಅಂತರರಾಷ್ಟ್ರೀಯ ಮಟ್ಟದಲ್ಲೂ ರಾಜ್ಯ ಹಾಗೂ ದೇಶಕ್ಕೆ ಕೀರ್ತಿ ತಂದುಕೊಡಲಿ," ಎಂದು ಅವರು ತಿಳಿಸಿದ್ದಾರೆ.



ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯ ಪ್ರಚಾರ ಕಾರ್ಯಕ್ಕಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ದಾವಣಗೆರೆ ಹೆಲಿಪ್ಯಾಡ್ ಗೆ ಬಂದಿಳಿದ ಸಂದರ್ಭದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಶಾಮನೂರು ಅವರು ಮುಖ್ಯಮಂತ್ರಿಗಳ ಆಶೀರ್ವಾದ ಪಡೆದರು. ಸಚಿವರಾದ ಎಸ್.ಎಸ್. ಮಲ್ಲಿಕಾರ್ಜುನ್ ಮತ್ತು ಎಂ.ಸಿ.ಸುಧಾಕರ್ ಸೇರಿ ಸ್ಥಳೀಯ ಮುಖಂಡರುಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಪ್ರದೀಪ್ ಈಶ್ವರ್ ವಿರುದ್ಧ ಕ್ರಮಕ್ಕೆ ಆಗ್ರಹ

ಬೆಂಗಳೂರು

ಶಾಸಕ ಪ್ರದೀಪ್ ಈಶ್ವರ್ ಅವರು ಅವಹೇಳನಕಾರಿ ಮಾತನಾಡುತ್ತಿದ್ದು, ಅವರ ವಿರುದ್ಧ ಕ್ರಮಕ್ಕೆ ಆಗ್ರಹಿಸಿ ಇಂದು ಚುನಾವಣಾ ಅಧಿಕಾರಿಗಳಿಗೆ ದೂರು ನೀಡಿದ್ದೇವೆ ಎಂದು ಬಿಜೆಪಿ ಬೆಂಗಳೂರು ದಕ್ಷಿಣ ಜಿಲ್ಲಾಧ್ಯಕ್ಷ ಮತ್ತು ಶಾಸಕ ಸಿ.ಕೆ. ರಾಮಮೂರ್ತಿ ತಿಳಿಸಿದ್ದಾರೆ.

ಸಿ.ಕೆ. ರಾಮಮೂರ್ತಿ, ಪಕ್ಷದ ಬೆಂಗಳೂರು ಉತ್ತರ ಜಿಲ್ಲಾಧ್ಯಕ್ಷ ಎಸ್. ಹರೀಶ್, ಕಾನೂನು ಪ್ರಕೋಷ್ಠದ ರಾಜ್ಯ ಸಂಚಾಲಕ ವಸಂತ್ ಕುಮಾರ್ ಅವರು ಇಂದು ಮಹಾರಾಣಿ ಕಾಲೇಜು ಸರ್ಕಲ್ ಬಳಿ ಇರುವ ರಾಜ್ಯ ಮುಖ್ಯ ಚುನಾವಣಾ ಅಧಿಕಾರಿಗಳ ಕಚೇರಿಗೆ ಭೇಟಿ ನೀಡಿ ದೂರು ಸಲ್ಲಿಸಿದರು.

ದಾವಣಗೆರೆ ದಕ್ಷಿಣ, ಬಾಗಲಕೋಟೆ ಉಪ ಚುನಾವಣೆ ನಡೆಯುತ್ತಿದೆ. ಪ್ರದೀಪ್ ಈಶ್ವರ್ ಒಬ್ಬ ಹುಚ್ಚ; ಅವರು ಬಿಜೆಪಿ ನಾಯಕರನ್ನು ಕೋತಿಗಳು, ಅಯೋಗ್ಯರೆಂದು ಸಂಬೋಧಿಸಿದ್ದಾರೆ. ಅವಹೇಳನಕಾರಿ ಮಾತನಾಡಿದ್ದಾರೆ.

ಇವೆಲ್ಲ ಸಂವಿಧಾನವಿರೋಧಿ ಮತ್ತು ನೀತಿಸಂಹಿತೆಯನ್ನು ಉಲ್ಲಂಘಿಸಿವೆ ಎಂದು ಸಿ.ಕೆ. ರಾಮಮೂರ್ತಿ ಅವರು ಆಕ್ಷೇಪಿಸಿದರು. ಪ್ರದೀಪ್ ಈಶ್ವರ್ ಪ್ರಚೋದನೆ ಕೊಡುವಂತೆ ಮಾತನಾಡುತ್ತಾರೆ. ಅವರ ವಿರುದ್ಧ ಕ್ರಮ ಕೈಗೊಳ್ಳದಿದ್ದರೆ ಹೋರಾಟ ರೂಪಿಸುವುದಾಗಿ ಪ್ರಶ್ನೆಗೆ ಉತ್ತರವಾಗಿ ತಿಳಿಸಿದರು.

ಎಸ್. ಹರೀಶ್ ಅವರು ಮಾತನಾಡಿ, ಬಾಗಲಕೋಟೆ ಉಪ ಚುನಾವಣೆ ವೇಳೆ ಶಿಕ್ಷಕರ ಸಂಘದ ಅಧ್ಯಕ್ಷ, ಸರಕಾರಿ ನೌಕರ ಚಂದ್ರು ನುಗ್ಲಿ ಅವರು ಮುಖ್ಯಮಂತ್ರಿಗಳು ಬಂದಾಗ ಚುನಾವಣಾ ಪ್ರಚಾರದಲ್ಲಿ ತೊಡಗಿದ್ದರು. ಈಗಲೂ ಚುನಾವಣಾ ಪ್ರಚಾರದಲ್ಲಿ ತೊಡಗಿಕೊಂಡಿದ್ದಾರೆ.

# ಎಮೊಬಿಯಿಂದ ಲಾಸ್ಟ್-ಮೈಲ್ ಫ್ಲೀಟ್ ವಿಸ್ತರಣೆ

ಬೆಂಗಳೂರು

ಕರ್ನಾಟಕ ಮೂಲದ ಎಲೆಕ್ಟ್ರಿಕ್ ದ್ವಿಚಕ್ರ ವಾಹನ ತಯಾರಕ ಎಮೊಬಿ ಮ್ಯಾನ್ಯುಫ್ಯಾಕ್ಚರಿ ಪ್ರೈವೇಟ್ ಲಿಮಿಟೆಡ್ ಸಂಸ್ಥೆಯು ಬೆಂಗಳೂರಿನಲ್ಲಿ 100 ಎಕೆಎಕ್ಸ್ ಕ್ಯಾರಿ ಎಲೆಕ್ಟ್ರಿಕ್ ಸ್ಕೂಟರ್‌ಗಳನ್ನು ಪರಿಚಯಿಸಿದೆ. ಮುಸಾಶಿಯ ಅತ್ಯಾಧುನಿಕ ಇ–ಆಕ್ಸಲ್ ತಂತ್ರಜ್ಞಾನ ಹಾಗೂ ಹೊಂಡಾ ಪವರ್ ಪ್ಯಾಕ್ ಎನರ್ಜಿ ಇಂಡಿಯಾ ಪ್ರೈವೇಟ್ ಲಿಮಿಟೆಡ್ ಸಂಸ್ಥೆಯ ಇ–ಸ್ವ್ಯಾಪ್ ಬ್ಯಾಟರಿ ವಿನಿಮಯ ಜಾಲದ ಸಹಕಾರದಿಂದ ಈ ವಾಹನಗಳನ್ನು ಲಾಸ್ಟ್–ಮೈಲ್ ಲಾಜಿಸ್ಟಿಕ್ಸ್ ಸೇವೆಗೆ ಬಳಸಲಾಗುತ್ತಿದೆ. ಈ 100 ವಾಹನಗಳನ್ನು ಟೆಕಿನ್‌ವರ್ಸ್ ಸಂಸ್ಥೆಗಾಗಿ ನಿರ್ಮಿಸಲಾಗಿದ್ದು, ಮುವ್ನ್ ರೈಡರ್ ಪಾಲುದಾರರಿಗೆ ಮೈಕ್ರೋ–ಫ್ಲೀಟ್ ಮಾದರಿಯಲ್ಲಿ ಬಾಡಿಗೆಗೆ ನೀಡಲಾಗುತ್ತದೆ.

ಇದರ ಮೂಲಕ ಹೊಸ ಉದ್ಯೋಗಾವಕಾಶಗಳು ಸೃಷ್ಟಿಯಾಗಲಿದ್ದು, ಕಡಿಮೆ ಕಾರ್ಯಾಚರಣಾ ವೆಚ್ಚ ಹಾಗೂ ಹೆಚ್ಚಿನ ವಾಹನ ಲಭ್ಯತೆಯಿಂದ ರೈಡರ್‌ಗಳ ಆದಾಯವೂ ಹೆಚ್ಚಲಿದೆ.

ಎಕೆಎಕ್ಸ್ ಕ್ಯಾರಿ ಎಲೆಕ್ಟ್ರಿಕ್ ಸ್ಕೂಟರ್ ಸಾಮಾನ್ಯ 125 ಸಿಸಿ ಇಂಜಿನ್ ಸ್ಕೂಟರ್‌ಗೆ ಸಮಾನ ಕಾರ್ಯಕ್ಷಮತೆಯನ್ನು ನೀಡುತ್ತದೆ. ಈ ವಾಹನವು 106 ಕಿಲೋಮೀಟರ್ ಶ್ರೇಣಿ, ಗರಿಷ್ಠ ಗಂಟೆಗೆ 80 ಕಿಲೋಮೀಟರ್ ವೇಗ ಹಾಗೂ 0ರಿಂದ 60 ಕಿಲೋಮೀಟರ್ ವೇಗವನ್ನು ಕೇವಲ 12 ಸೆಕೆಂಡುಗಳಲ್ಲಿ ತಲುಪುವ ಸಾಮರ್ಥ್ಯ ಹೊಂದಿದೆ. ವಾಹನದಲ್ಲಿ 3.7 ಕಿಲೋವಾಟ್ ಸಾಮರ್ಥ್ಯದ ಮೋಟಾರ್, 1.5 ಕಿಲೋವಾಟ್ ಗಂಟೆ ಸಾಮರ್ಥ್ಯದ ಡ್ಯುಯಲ್ ಸ್ವ್ಯಾಪ್ ಬ್ಯಾಟರಿ ಹಾಗೂ ಸುರಕ್ಷತೆಯ ದೃಷ್ಟಿಯಿಂದ ಸಿಂಕ್ ಬ್ರೇಕ್ ವ್ಯವಸ್ಥೆ ಅಳವಡಿಸಲಾಗಿದೆ. ಹೊಂಡಾದ ಇ–ಸ್ವ್ಯಾಪ್ ಜಾಲದ ಮೂಲಕ ಬ್ಯಾಟರಿಯನ್ನು ತ್ವರಿತವಾಗಿ ಬದಲಾಯಿಸಬಹುದಾದ ಕಾರಣ, ವಾಹನಗಳು ಹೆಚ್ಚು ಸಮಯ ರಸ್ತೆಯಲ್ಲೇ ಸೇವೆ ನೀಡಲು ಸಾಧ್ಯವಾಗುತ್ತದೆ.




ಎಮೊಬಿ ಸಂಸ್ಥೆಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಸಹ ಸಂಸ್ಥಾಪಕ ಭಾರತ್ ರಾವ್ ಮಾತನಾಡಿ, "ಇದು ಕೇವಲ 100 ವಾಹನಗಳ ವಿತರಣೆ ಅಲ್ಲ; ರೈಡರ್‌ಗಳಿಗೆ ಸುಲಭ, ಕಡಿಮೆ ವೆಚ್ಚದ ಮತ್ತು ಲಾಭದಾಯಕ ವಿದ್ಯುತ್ ಚಲನವಲನ ವ್ಯವಸ್ಥೆ ನಿರ್ಮಿಸುವ ದಿಕ್ಕಿನಲ್ಲಿ ಮಹತ್ವದ ಹೆಜ್ಜೆಯಾಗಿದೆ. ಉತ್ತಮ ತಂತ್ರಜ್ಞಾನ, ಬ್ಯಾಟರಿ ವಿನಿಮಯ ಮತ್ತು ಸ್ಥಳೀಯ ಸೇವೆಗಳ ಮೂಲಕ ಮೈಕ್ರೋ ಉದ್ಯಮಶೀಲತೆಯನ್ನು ಬೆಳೆಸಲು ನಾವು ಬದ್ಧರಾಗಿದ್ದೇವೆ" ಎಂದು ಹೇಳಿದರು.

# 'ಜನರಿಗೆ ರಾಜ್ಯದ ಆರ್ಥಿಕ ಪರಿಸ್ಥಿತಿಯ ನೈಜ ಚಿತ್ರಣ ತಿಳಿಸಲು ಆಗ್ರಹ'

ಬಾಗಲಕೋಟೆ

ಹಣಕಾಸಿನ ಸಚಿವರೂ ಆದ ಮುಖ್ಯಮಂತ್ರಿಗಳು ರಾಜ್ಯದ ಆರ್ಥಿಕ ಪರಿಸ್ಥಿತಿಯ ನೈಜ ಚಿತ್ರಣವನ್ನು ಜನರಿಗೆ ತಿಳಿಸುವ ಪುಣ್ಯದ ಕೆಲಸ ಮಾಡಬೇಕೆಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ಆಗ್ರಹಿಸಿದ್ದಾರೆ.

ಮಾಧ್ಯಮ ಪ್ರತಿನಿಧಿಗಳ ಜೊತೆ ಇಂದು ಮಾತನಾಡಿದ ಅವರು, ಕಾಂಗ್ರೆಸ್ ಸರಕಾರ ಆಡಳಿತಕ್ಕೆ ಬಂದು ಮೂರು ವರ್ಷಗಳಾಗಿವೆ. ಅಧಿಕಾರಕ್ಕೆ ಬಂದ ಒಂದೇ ತಿಂಗಳಲ್ಲಿ ಖಾಲಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುತ್ತೇವೆ; ಖಾಲಿ ಹುದ್ದೆ ಭರ್ತಿ ಮಾಡುವುದಾಗಿ ಭರವಸೆ ನೀಡಿದ್ದೀರಿ. ಅದು ಮರೆತು ಹೋಯಿತೇ? ಎಂದು ಕೇಳಿದರು.

2 ಲಕ್ಷ 86 ಸಾವಿರಕ್ಕೂ ಹೆಚ್ಚು ಹುದ್ದೆಗಳು ನೇಮಕಾತಿ ಮಾಡದೇ ನಾಡಿನ ಯುವಜನತೆ ಬೀದಿಗಿಳಿದು ಹೋರಾಟ ಮಾಡುವ ದುಸ್ಥಿತಿಗೆ ತಾವು ತಂದಿದ್ದೀರಿ. ಯುವಜನತೆ ತಮ್ಮ ಬಳಿ ಅಹವಾಲು ಮಂಡಿಸಲು ರಾಜ್ಯ ಹೈಕೋರ್ಟ್ ಮಧ್ಯಸ್ಥಿಕೆ ವಹಿಸಬೇಕಾಯಿತು ಎಂದು ಗಮನ ಸೆಳೆದರು.

ಧಾರವಾಡದಲ್ಲಿ ನ್ಯಾಯಕ್ಕಾಗಿ ಲಕ್ಷಾಂತರ ಯುವಜನತೆ ಒತ್ತಾಯಿಸಿದಾಗ ಲಾಠಿಪ್ರಹಾರ ಮಾಡಿದ್ದೀರಿ. ಯಾಕೆ ಸತ್ಯ ಮರೆಮಾಚುತ್ತಿದ್ದೀರಿ ಎಂದು ಪ್ರಶ್ನಿಸಿದರು. ಗ್ಯಾರಂಟಿಗಳಿಗೆ ಹಣ ಕ್ರೋಡೀಕರಿಸಲು ಸಾಧ್ಯವಾಗದೇ ಹೈಕೋರ್ಟಿನ




ಕುಂಟು ನೆಪ, ಮೀಸಲಾತಿ ನೆಪ ಹೇಳಿಕೊಂಡು ನೇಮಕಾತಿಯನ್ನು ಮುಂದೂಡುತ್ತಿರುವುದು ತಾವಲ್ಲವೇ ಎಂದು ಮುಖ್ಯಮಂತ್ರಿಗಳನ್ನು ಪ್ರಶ್ನಿಸಿದರು.

ಮಂಡ್ಯ ಜಿಲ್ಲೆಯಲ್ಲಿ ಸ್ವಾತಂತ್ರ್ಯ ಹೋರಾಟಗಾರರ ಕುಟುಂಬಗಳಿಗೆ ಪಿಂಚಣಿ ಕೊಡುವುದನ್ನೂ 10 ತಿಂಗಳಿಂದ ನಿಲ್ಲಿಸಿದ್ದಾರೆ. ಇದು ರಾಜ್ಯದ ಆರ್ಥಿಕ ಪರಿಸ್ಥಿತಿಯ ಕೈಗನ್ನಡಿಯಲ್ಲವೇ ಎಂದು ಪ್ರಶ್ನೆ ಹಾಕಿದರು.

ಅತಿಥಿ ಉಪನ್ಯಾಸಕರಿಗೆ 2 ತಿಂಗಳಿಂದ ಸಂಬಳ ನೀಡದೇ ಇರುವುದು ರಾಜ್ಯದ ಆರ್ಥಿಕ ಪರಿಸ್ಥಿತಿಯನ್ನು ಎತ್ತಿ ತೋರಿಸುವುದಿಲ್ಲವೇ ಎಂದು ವಿಜಯೇಂದ್ರ ಅವರು ಪ್ರಶ್ನೆ ಮಾಡಿದರು.

ರಾಜ್ಯದ ಇತಿಹಾಸದಲ್ಲಿ ಮೊಟ್ಟ ಮೊದಲ ಬಾರಿಗೆ ಕಾನೂನು– ಸುವ್ಯವಸ್ಥೆ ಕಾಪಾಡುವ ಜವಾಬ್ದಾರಿಯುತ ಪೊಲೀಸ್ ಇಲಾಖೆಗೆ 15– 20 ದಿನ, ಒಂದು ತಿಂಗಳಾದರೂ ಸಂಬಳ ಕೊಡುವುದಕ್ಕೆ ಆಗುತ್ತಿಲ್ಲ. ಇದು ಆರ್ಥಿಕ ಪರಿಸ್ಥಿತಿ ಯಾವ ಮಟ್ಟಿಗೆ ಹೋಗಿದೆ ಎಂಬುದನ್ನು ತೋರಿಸುವುದಿಲ್ಲವೇ ಎಂದು ಕೇಳಿದರು.

ಕೇವಲ ಕೇಂದ್ರ ಸರಕಾರದ ವಿರುದ್ಧ ಆರೋಪ ಮಾಡುವುದರಲ್ಲೇ ಕಾಲಹರಣ ಮಾಡುತ್ತೀರಿ. ಯುಕೆಪಿ ಮುಳುಗಡೆ ಪರಿಹಾರ ವಿಚಾರದಲ್ಲಿ 4 ತಿಂಗಳ ಹಿಂದೆ ವಿಶೇಷ ಕ್ಯಾಬಿನೆಟ್ ಸಭೆ ಮಾಡಿದ್ದೀರಿ. ನೀರಾವರಿ ಜಮೀನಿರುವ ರೈತರಿಗೆ ಎಕರೆಗೆ 40 ಲಕ್ಷ ಪರಿಹಾರ, ಒಣ ಭೂಮಿ ಇರುವವರಿಗೆ 30 ಲಕ್ಷ ಪರಿಹಾರ ಎಂದು ತಿಳಿಸಲಾಗಿತ್ತು. ಬಜೆಟ್‌ನಲ್ಲಿ ಇದಕ್ಕಾಗಿ ಎಷ್ಟು ಸಾವಿರ ಕೋಟಿ ಇಟ್ಟಿದ್ದೀರಿ ಎಂದು ಪ್ರಶ್ನೆ ಮುಂದಿಟ್ಟರು.

# ನೋಟೀಸ್, ಎಫ್‌ಐಆರ್ ಪ್ರತಿ
## ಭೌತಿಕವಾಗಿ ನೀಡಬೇಕು: ಹೈಕೋರ್ಟ್

ಬೆಂಗಳೂರು

ನೋಟಿಸ್ ಅಥವಾ ಪ್ರಥಮ ಮಾಹಿತಿ ವರದಿಯ (ಎಫ್‌ಐಆರ್) ಪ್ರತಿಯನ್ನು ವಿದ್ಯುನ್ಮಾನ ಅಥವಾ ವಾಟ್ಸಾಪ್ ಮೂಲಕ ನೀಡುವ ಅಧಿಕಾರ ಪೊಲೀಸರಿಗೆ ಇಲ್ಲ, ಅದನ್ನು ಭೌತಿಕವಾಗಿಯೇ ನೀಡಬೇಕು ಎಂದು ಹೈಕೋರ್ಟ್ ಈಚೆಗೆ ಸ್ಪಷ್ಟಪಡಿಸಿದೆ.

ಹೂಡಿಕೆದಾರರಿಗೆ ಲಕ್ಷಾಂತರ ಹಣ ವಂಚಿಸಿದ ಪ್ರಕರಣದಲ್ಲಿ ತನಿಖೆಗೆ ಸಹಕರಿಸದೆ 40 ದಿನಗಳ ಕಾಲ ತಮಿಳುನಾಡಿನಲ್ಲಿ ತಲೆಮರೆಸಿಕೊಂಡಿದ್ದ ಕಡಲೂರು ನಿವಾಸಿಯಾದ ಯೋಗ ಶಿಕ್ಷಕ ಆರ್ ಯುಗದೇವ್ ಎಂಬಾತ, ಮ್ಯಾಜಿಸ್ಟ್ರೇಟ್ ನ್ಯಾಯಾಲವು ತನ್ನ ವಿರುದ್ಧ ಹೊರಡಿಸಿದ ಬಂಧನ ಆದೇಶವನ್ನು ರದ್ದುಪಡಿಸಬೇಕು ಎಂದು ಕೋರಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಎಂ ನಾಗಪ್ರಸನ್ನ ಅವರ ಏಕಸದಸ್ಯ ಪೀಠ ವಜಾಗೊಳಿಸಿದೆ.

"ಏಳು ವರ್ಷಕ್ಕಿಂತ ಕಡಿಮೆ ಅವಧಿಯ ಶಿಕ್ಷೆ ವಿಧಿಸಬಹುದಾದ ಪ್ರಕರಣಗಳಲ್ಲಿ ಆರೋಪಿಯನ್ನು ಬಂಧಿಸುವ ಮುನ್ನ ನೋಟಿಸ್ ನೀಡುವುದು ಕಡ್ಡಾಯವಿದ್ದರೂ ಆರೋಪಿಯು ಉದ್ದೇಶಪೂರ್ವಕವಾಗಿ ಪೊಲೀಸ್ ನೋಟಿಸ್ ಸ್ವೀಕರಿಸದೆ ತಲೆಮರೆಸಿಕೊಂಡು ತನಿಖೆಗೆ ಅಸಹಕಾರ ತೋರಿದ ಸಂದರ್ಭದಲ್ಲಿ ನೇರವಾಗಿ ಬಂಧಿಸಬಹುದಾಗಿದೆ" ಎಂದು ನ್ಯಾಯಾಲಯ ಹೇಳಿದೆ.

"ಪೊಲೀಸ್ ತನಿಖಾಧಿಕಾರಿಗಳು ನೋಟಿಸ್ ನೀಡಲು ಪ್ರಯತ್ನಿಸಿದಾಗ ಅರ್ಜಿದಾರ ಆರೋಪಿ, 40 ದಿನಗಳ ಕಾಲ ತಮಿಳುನಾಡಿನ ಕಡಲೂರು ಸೇರಿದಂತೆ ವಿವಿಧೆಡೆ ಸಂಚರಿಸುವ ಮೂಲಕ ಸ್ಥಳ ಬದಲಿಸಿದ್ದರು. ಪೊಲೀಸರಿಗೆ ಸಿಗದಂತೆ ಓಡಾಡಿದ್ದರು. ಕರೆ ವಿವರಗಳಿಂದ ಈ ವಿಚಾರ ಸಾಬೀತಾಗಿದೆ. ಇದು ತನಿಖೆಗೆ ಅಸಹಕಾರ ನೀಡುವುದು ಹಾಗೂ ತನಿಖೆಯಿಂದ ತಪ್ಪಿಸಿಕೊಳ್ಳುವ ಪ್ರಯತ್ನ ಎಂಬುದಾಗಿ ಪರಿಗಣಿಸಲ್ಪಡುತ್ತದೆ. ಇಂತಹ ಸಂದರ್ಭದಲ್ಲಿ ನೋಟಿಸ್ ನೀಡುವ ಪ್ರಕ್ರಿಯೆ ಪೂರ್ಣಗೊಳ್ಳದಿದ್ದರೂ ಪೊಲೀಸರು ಆರೋಪಿಯನ್ನು ವಶಕ್ಕೆ ಪಡೆಯಲು ಕಾನೂನಿನಲ್ಲಿ ಅವಕಾಶವಿದೆ" ಎಂದು ಪೀಠ ಆದೇಶಿಸಿದೆ.

"ಆರೋಪಿಯು ನೋಟಿಸ್ ಸ್ವೀಕರಿಸಲು ನಿರಾಕರಿಸಿದಾಗ ಅಥವಾ ತನಿಖೆಗೆ ಸಹಕರಿಸದಿದ್ದಾಗ, ಪೊಲೀಸರು ಅವರನ್ನು ಬಂಧಿಸುವ ಅಧಿಕಾರ ಹೊಂದಿರುತ್ತಾರೆ. ಈ ಪ್ರಕರಣದಲ್ಲಿ ಅರ್ಜಿದಾರರು 40 ದಿನಗಳ ಕಾಲ ಪೊಲೀಸರಿಗೆ ಚಳ್ಳೆಹಣ್ಣು ತಿನ್ನಿಸಿದ್ದಾರೆ. ಇದು ಬಂಧನಕ್ಕೆ ಪೂರಕವಾದ ಸನ್ನಿವೇಶವಾಗಿದೆ.



ಬಾಗಲಕೋಟೆ ಮತಕ್ಷೇತ್ರದ ಉಪ ಚುನಾವಣೆಯ ಹಿನ್ನಲೆಯಲ್ಲಿಂದು ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಉಮೇಶ್ ಹುಲ್ಲಪ್ಪ ಮೇಟಿ ರವರ ಪರವಾಗಿ ಮಾನ್ಯ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರಾದ ಕೆಹೆಚ್. ಮುನಿಯಪ್ಪ ರವರು ಮತಯಾಚನೆ ಮಾಡಿದರು. ಈ ಸಂದರ್ಭದಲ್ಲಿ ಉಪ ಮುಖ್ಯಮಂತ್ರಿ ಡಿಕೆ.ಶಿವಕುಮಾರ್, ಕರ್ನಾಟಕ ರಾಜ್ಯದ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲ ಹಾಗೂ ಕಾಂಗ್ರೆಸ್ ಪಕ್ಷದ ಮುಖಂಡರು ಕಾರ್ಯಕರ್ತರು ಉಪಸ್ಥಿತರಿದ್ದರು.

# ರೈಲು ಮಾರ್ಗಗಳ ಪರಿಶೀಲನೆ, ವೇಗ ಪರೀಕ್ಷೆ ಯಶಸ್ವಿ

ಬೆಂಗಳೂರು

ಸುಮೀತ್ ಸಿಂಘಾಲ್ ಅವರು ಬೈಯಪ್ಪನಹಳ್ಳಿ ವೆಸ್ಟ್ ಕ್ಯಾಬಿನ್ ಮತ್ತು ಬೆಂಗಳೂರು ಕಂಟೋನ್ಮೆಂಟ್ ರೈಲು ನಿಲ್ದಾಣ ನಡುವಿನ ಹೊಸದಾಗಿ ನಿರ್ಮಿಸಲಾದ 3 ಮತ್ತು 4ನೇ ರೈಲು ಮಾರ್ಗಗಳನ್ನು ಮಾರ್ಚ್ 31 ಮತ್ತು ಏಪ್ರಿಲ್ 1, 2026ರಂದು ಪರಿಶೀಲಿಸಿ ವೇಗ ಪರೀಕ್ಷೆ ನಡೆಸಿದರು.

ಈ ಪರಿಶೀಲನೆ 4.928 ಕಿಮೀ ಉದ್ದದ ಬೈಯಪ್ಪನಹಳ್ಳಿ ವೆಸ್ಟ್ ಕ್ಯಾಬಿನ್–ಬೆಂಗಳೂರು ಕಂಟೋನ್ಮೆಂಟ್ ಚತುಷ್ಪಥ ಮಾರ್ಗದಲ್ಲಿ ನಡೆಯಿತು. ಬೆಂಗಳೂರು ಪೂರ್ವ ಹಾಲ್ಟ್ ರೈಲು ನಿಲ್ದಾಣ ಸೇರಿದಂತೆ ಈ ಮಾರ್ಗವು ಬೆಂಗಳೂರು ಕಂಟೋನ್ಮೆಂಟ್–ವೈಟ್‌ಫೀಲ್ಡ್ ಚತುಷ್ಪಥ ಯೋಜನೆ ಯ ಪ್ರಮುಖ ಭಾಗವಾಗಿದೆ.

ಈ ಯೋಜನೆಯ ಉದ್ದೇಶ ಬೆಂಗಳೂರು ಭಾಗದಲ್ಲಿ ದಿನೇದಿನೇ ಹೆಚ್ಚುತ್ತಿರುವ ಪ್ರಯಾಣಿಕರ ಹಾಗೂ ಸರಕು ಸಾಗಣೆಯ ಬೇಡಿಕೆಯನ್ನು ಪೂರೈಸುವುದು ಮತ್ತು ರೈಲು ದಟ್ಟಣೆಯನ್ನು ಕಡಿಮೆ ಮಾಡುವುದಾಗಿದೆ.



ಹೊಸ ಮಾರ್ಗದಲ್ಲಿ 4 ಪ್ರಮುಖ ಸೇತುವೆಗಳು, 3 ಸಣ್ಣ ಸೇತುವೆಗಳು, 3 ರಸ್ತೆ ಮೇಲ್ಸೇತುವೆಗಳು, 7 ರಸ್ತೆ ಕೆಳಸೇತುವೆಗಳು ಹಾಗೂ 3 ಪಾದಚಾರಿ ಮೇಲ್ಸೇತುವೆಗಳನ್ನು ನಿರ್ಮಿಸಲಾಗಿದೆ. ಸಣ್ಣ ಸೇತುವೆಗಳಾಗಿ ಸಂಖ್ಯೆ 836, 838 ಮತ್ತು 841 ಒಳಗೊಂಡಿವೆ.

ಪರಿಶೀಲನೆ ವೇಳೆ ವಿಭಾಗೀಯ ರೈಲ್ವೆ ವ್ಯವಸ್ಥಾಪಕರಾದ ಅಶುತೋಷ್ ಕುಮಾರ್ ಸಿಂಗ್, ನೈಋತ್ಯ ರೈಲ್ವೆಯ ಮುಖ್ಯ ಆಡಳಿತಾಧಿಕಾರಿ (ನಿರ್ಮಾಣ–ಆರ್.ಎಸ್.ಪಿ) ಬಿ. ರಾಮ ಮೋಹನ್ ರೆಡ್ಡಿ, ಹೆಚ್ಚುವರಿ ವಿಭಾಗೀಯ ರೈಲ್ವೆ ವ್ಯವಸ್ಥಾಪಕರಾದ ಪ್ರವೀಣ್ ಕಾತರಕಿ ಹಾಗೂ ಗತಿ ಶಕ್ತಿ ಘಟಕದ ಮುಖ್ಯ ಯೋಜನಾ ವ್ಯವಸ್ಥಾಪಕರಾದ ಗುಲ್ ಅಶ್ಫಾಕ್ ಮೊಹಮ್ಮದ್ ಸೇರಿದಂತೆ ಹಲವು ಹಿರಿಯ ರೈಲ್ವೆ ಅಧಿಕಾರಿಗಳು ಉಪಸ್ಥಿತರಿದ್ದರು.

# ಉಮೇಶ್ ಮೇಟಿ ಗೆಲುವು ನಿಶ್ಚಿತ: ಬೈರತಿ ಸುರೇಶ್

ಬಾಗಲಕೋಟೆ

ಏಪ್ರಿಲ್ 9 ರಂದು ನಡೆಯುವ ಬಾಗಲಕೋಟೆ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ಅವರ ಗೆಲುವು ನಿಶ್ಚಿತ ಎಂದು ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ.

ಬಾಗಲಕೋಟೆಯ ವಿವಿಧ ಭಾಗಗಳಲ್ಲಿ ಮತ ಯಾಚನೆ ಮಾಡಿದ ಅವರು ಕಾಂಗ್ರೆಸ್ ಮುಖಂಡರ ಸಭೆಯಲ್ಲಿ ಮಾತನಾಡಿದರು. ಉಪ ಚುನಾವಣೆಯಲ್ಲಿ ನಮ್ಮ ಪಕ್ಷದ ಅಭ್ಯರ್ಥಿ ಉಮೇಶ್ ಮೇಟಿ ಗೆಲುವಿಗೆ ಎಲ್ಲಾ ಕಾಂಗ್ರೆಸ್ ನಾಯಕರು ಮತ್ತು ಕಾರ್ಯಕರ್ತರು ಒಗ್ಗೂಡಿ ಕೆಲಸ ಮಾಡುತ್ತಿದ್ದಾರೆ ಎಂದರು. ದಿವಂಗತ ಎಚ್ ವೈ ಮೇಟಿ ಅವರು ಅತ್ಯಂತ ಸರಳ ಸಜ್ಜನಿಕೆಯ ವ್ಯಕ್ತಿಯಾಗಿದ್ದರು. ಮನೆ ಬಾಗಿಲಿಗೆ ಬರುವ ಪ್ರತಿಯೊಬ್ಬ ವ್ಯಕ್ತಿಯನ್ನು ಅತ್ಯಂತ ಗೌರವಯುತವಾಗಿ ನೋಡಿಕೊಳ್ಳುತ್ತಿದ್ದರು. ಈಗ ಅವರ ಮಗ ಉಮೇಶ್ ಮೇಟಿ ಅವರು ಜನಾನುರಾಗಿಯಾಗಿದ್ದಾರೆ ಎಂದು ಹೇಳಿದರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನೀಡಿರುವ ಗ್ಯಾರಂಟಿ ಯೋಜನೆಗಳಿಂದ ರಾಜ್ಯದ ಜನತೆ ನೆಮ್ಮದಿಯ ಜೀವನ ನಡೆಸುತ್ತಿದ್ದಾರೆ. ನಮ್ಮ ಸರ್ಕಾರ ಯಾವುದೇ ಜಾತಿ, ಧರ್ಮದ ಭೇದ ಭಾವ ಇಲ್ಲದೆ ಸರ್ವರಿಗೂ ಸರ್ಕಾರದ ಕಾರ್ಯಕ್ರಮಗಳನ್ನು ತಲುಪಿಸುತ್ತಿದೆ.

## ಪತ್ರಕರ್ತ ವೆಂಕಟೇಶ ಸಂಪ ಅವರಿಗೆ "ಮಂಗಳ ಎಂ ವರ್ಗೀಸ್" ವಾರ್ಷಿಕ ಪ್ರಶಸ್ತಿ

ಬೆಂಗಳೂರು

ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದಿಂದ ನೀಡಲಾಗುವ ಪ್ರತಿಷ್ಠಿತ "ಮಂಗಳ ಎಂ ವರ್ಗೀಸ್" ಪ್ರಶಸ್ತಿಗೆ ಪತ್ರಕರ್ತರು ಹಾಗೂ 'ಸಂಪದ ಸಾಲು' ಪತ್ರಿಕೆಯ ಸಂಪಾದಕರಾದ ವೆಂಕಟೇಶ ಎಸ್. ಸಂಪ ಆಯ್ಕೆಯಾಗಿದ್ದಾರೆ.



ಈ ಪ್ರಶಸ್ತಿಯನ್ನು ಏಪ್ರಿಲ್ 11 ಮತ್ತು 12ರಂದು ಬೀದರ ನಲ್ಲಿ ನಡೆಯಲಿರುವ 40ನೇ ರಾಜ್ಯ ಪತ್ರಕರ್ತರ ಸಮ್ಮೇಳನದಲ್ಲಿ ಪ್ರದಾನ ಮಾಡಲಾಗುವುದು ಎಂದು ಕರ್ನಾಟಕ ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು ಹಾಗೂ ಪ್ರಧಾನ ಕಾರ್ಯದರ್ಶಿ ಬಿ.ಸಿ.ಲೋಕೇಶ್ ತಿಳಿಸಿದ್ದಾರೆ.

ಕಳೆದ 20 ವರ್ಷಗಳಿಂದ 'ಸಂಪದ ಸಾಲು' ಎಂಬ ಧನಾತ್ಮಕ ಪತ್ರಿಕೆಯನ್ನು ನಿರಂತರವಾಗಿ ನಡೆಸಿಕೊಂಡು ಬರುತ್ತಿರುವ ವೆಂಕಟೇಶ ಸಂಪ ಅವರು, ಸಾವಿರಾರು ಲೇಖನಗಳನ್ನು ರಾಜ್ಯದ ವಿವಿಧ ಪತ್ರಿಕೆಗಳಲ್ಲಿ ಪ್ರಕಟಿಸಿದ್ದಾರೆ. ಸಮಾಜಮುಖಿ, ಧನಾತ್ಮಕ ಹಾಗೂ ಯುವಕರಿಗೆ ಸ್ಫೂರ್ತಿದಾಯಕ ಲೇಖನಗಳ ಮೂಲಕ ಅವರು ವಿಶಿಷ್ಟ ಗುರುತನ್ನು ಪಡೆದಿದ್ದಾರೆ. 'ಸಂಪದ ಸಾಲು' ಪತ್ರಿಕೆಯ ಸಂಪಾದಕೀಯಗಳಲ್ಲಿಯೂ ಅವರ ಹಲವಾರು ಲೇಖನಗಳು ಪ್ರಕಟವಾಗಿವೆ.

ರೇಡಿಯೋ ಹಾಗೂ ದೂರದರ್ಶನ ಮಾಧ್ಯಮಗಳಲ್ಲಿ ನೂರಾರು ಕಾರ್ಯಕ್ರಮಗಳನ್ನು ನಡೆಸಿಕೊಟ್ಟಿರುವ ಅವರು, ಹಲವು ವಾಹಿನಿಗಳ ಚರ್ಚಾ ವೇದಿಕೆಗಳಲ್ಲಿ ಭಾಗವಹಿಸಿದ್ದು, ಅನೇಕ ಸಿನಿಮಾ ಹಾಗೂ ಧಾರಾವಾಹಿಗಳಲ್ಲಿಯೂ ನಟಿಸಿದ್ದಾರೆ.

ಅವರ ನೇತೃತ್ವದ ಸಂಪದ ಫೌಂಡೇಶನ್ ಫಾರ್ ಪಬ್ಲಿಕ್ ಅವೇರ್ನೆಸ್ ಮೂಲಕ ಹಲವು ಸಾಮಾಜಿಕ ಜಾಗೃತಿ ಅಭಿಯಾನಗಳನ್ನು ನಿರಂತರವಾಗಿ ನಡೆಸಲಾಗುತ್ತಿದೆ.

## ಯೂಟ್ಯೂಬರ್ ಸಮೀರ್ ವಿರುದ್ಧದ ಪ್ರಕರಣದ ತನಿಖೆಗೆ ಹೈಕೋರ್ಟ್ ತಡೆ

ಬೆಂಗಳೂರು

ಧರ್ಮಸ್ಥಳದಲ್ಲಿನ ಅಸಹಜ ಸಾವಿನ ತನಿಖೆಗೆ ಸಂಬಂಧಿಸಿದಂತೆ ಕಾಲ್ಪನಿಕ ವಿಚಾರಗಳನ್ನು ಆಧರಿಸಿ, ಕೃತಕ ಬುದ್ಧಿಮತ್ತೆ ನೆರವಿನಿಂದ ವಿಡಿಯೊ ಮಾಡಿ ಹರಿಯಬಿಟ್ಟಿರುವ ಸಂಬಂಧ ಯೂಟ್ಯೂಬರ್ ಎಂ ಡಿ ಸಮೀರ್ ವಿರುದ್ಧ ದಾಖಲಾಗಿರುವ ಪ್ರಕರಣದ ತನಿಖೆಗೆ ಹೈಕೋರ್ಟ್ ತಡೆ ನೀಡಿದೆ.

ಧರ್ಮಸ್ಥಳ ಠಾಣೆಯಲ್ಲಿ ದಾಖಲಾಗಿರುವ ಪ್ರಕರಣ ರದ್ದುಪಡಿಸುವಂತೆ ಕೋರಿ ಎಂ ಡಿ ಸಮೀರ್ ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಎಂ ನಾಗಪ್ರಸನ್ನ ಅವರ ಏಕಸದಸ್ಯ ಪೀಠ ವಿಚಾರಣೆ ನಡೆಸಿತು.

ವಾದ ಪ್ರತಿವಾದ ಆಲಿಸಿದ ನ್ಯಾಯಾಲಯವು ಧರ್ಮಸ್ಥಳ ಠಾಣೆಯಲ್ಲಿ ಸಮೀರ್ ವಿರುದ್ಧ ದಾಖಲಾಗಿರುವ ಪ್ರಕರಣದ ತನಿಖೆಗೆ ತಡೆ ನೀಡಿತು. ಅಲ್ಲದೇ, ರಾಜ್ಯ ಸರ್ಕಾರಕ್ಕೆ ನೋಟಿಸ್ ಜಾರಿ ಮಾಡಿ, ವಿಚಾರಣೆಯನ್ನು ಏಪ್ರಿಲ್ 22ಕ್ಕೆ ವಿಚಾರಣೆ ಮುಂದೂಡಿತು.

ಇದಕ್ಕೂ ಮುನ್ನ, ಸಮೀರ್ ಪರ ವಕೀಲರಾದ ಕೆ ಅಕ್ಷತಾ ಶೆಟ್ಟಿ ಅವರು "ಯೂಟ್ಯೂಬ್ ಚಾನಲ್ ಓಪನ್ ಮಾಡಿದಾಗ, ಸಮೀರ್ ವಿಡಿಯೊ ಬಂದಿತ್ತು. ಸುಳ್ಳುಗಳನ್ನು ಬಿತ್ತರಿಸಿದ್ದಾರೆ ಎಂದು ಹೇಳಲಾಗಿದೆ. ಸಮೀರ್ ಸಾರ್ವಜನಿಕರ ನೆಮ್ಮದಿಗೆ ಹಾಳು ಮಾಡಿದ್ದಾನೆ ಎಂದು ಪೊಲೀಸರು ಸ್ವಯಂಪ್ರೇರಿತವಾಗಿ ದೂರು ದಾಖಲಿಸಿದ್ದಾರೆ" ಎಂದರು.

ಆಗ ಪೀಠವು "(ಸಮೀರ್‌ಗೆ) ಸುಮ್ಮನೆ ಇರಲು ಆಗುವುದಿಲ್ಲವೇ? ಸುಮ್ಮನೆ ಇರಲು ಏಕೆ ಆಗಲ್ಲ? ನೀವು ಯಾರ ನೆಮ್ಮದಿ ಹಾಳು ಮಾಡಿದ್ದೀರಿ ಎಂದು ಗೊತ್ತಿದೆ (ನಗು). ಸಾರ್ವಜನಿಕರ ನೆಮ್ಮದಿಯಂಥೂ ಅಲ್ಲ. ಅವರದು ಯಾಕೆ? ಅವರ ನೆಮ್ಮದಿ, ನೆಮ್ಮದಿಯಲ್ಲವೇ?" ಎಂದು ಮಾರ್ಮಿಕವಾಗಿ ನುಡಿಯಿತು.

ಹೆಚ್ಚುವರಿ ವಿಶೇಷ ಸರ್ಕಾರಿ ಅಭಿಯೋಜಕರಾದ ಅಸ್ಮಾ ಕೌಸರ್ "ಸಮೀರ್ ವಿರುದ್ಧ ಸ್ವಯಂಪ್ರೇರಿತ ಪ್ರಕರಣವಲ್ಲ. ಧರ್ಮಸ್ಥಳ ಪ್ರಕರಣದ ತನಿಖೆಗೆ ಸಂಬಂಧಿಸಿದ್ದಾಗಿದೆ. ಸಾಕ್ಷಿ ದೂರುದಾರನನ್ನು ಸಂರಕ್ಷಿಸಿದ್ದ ಪ್ರಕರಣ ಇದಾಗಿದ್ದು, ಅದಾಗ್ಯೂ ಕೃತಕ ಬುದ್ಧಿಮತ್ತೆ ನೆರವಿನಿಂದ ಸಮೀರ್ ವಿಡಿಯೊ ಮಾಡಿದ್ದಾರೆ. ಕೆಲವು ಶವಗಳನ್ನು ಅಲ್ಲಿ ಹೂಳಲಾಗಿದ್ದು, ಕೆಲವನ್ನು ಅಲ್ಲಿ ಸಂಸ್ಕಾರ ಮಾಡಲಾಗಿದೆ ಎಂದು ವಿಡಿಯೊದಲ್ಲಿ ತೋರಿಸಲಾಗಿದೆ" ಎಂದರು.

"ಸಮೀರ್ ವಿರುದ್ಧ ಐದು ಪ್ರಕರಣ ದಾಖಲಾಗಿವೆ. ತನಿಖೆ ನಡೆಯಲಿ, ಸತ್ಯ ಹೊರಬರಲಿದೆ. ಇದೇ ಮೊದಲ ಬಾರಿಗೆ ಸಮೀರ್ ಈ ಕೆಲಸ ಮಾಡುತ್ತಿಲ್ಲ. ಸಾರ್ವಜನಿಕರನ್ನು ದಾರಿ ತಪ್ಪಿಸಿ, ದ್ವೇಷದ ವಾತಾವರಣ ಸೃಷ್ಟಿಸುವ ಕೆಲಸ ಮಾಡಿದ್ದಾನೆ" ಎಂದರು.

## ಔಷಧಿಗಳ ಬೆಲೆ ಇಳಿಕೆ

ಬೆಂಗಳೂರು

ನೋವೊ ನಾರ್ಡಿಸ್ಕ್ ಸಂಸ್ಥೆಯ ಭಾರತೀಯ ಘಟಕವು ಭಾರತದಲ್ಲಿ ಟೈಪ್ 2 ಮಧುಮೇಹ ಮತ್ತು ಸ್ಥೂಲಕಾಯತೆ ಚಿಕಿತ್ಸೆಗೆ ಬಳಸುವ ತನ್ನ ಪ್ರಮುಖ ಸೆಮಾಗ್ಲುಟೈಡ್ ಔಷಧಿಗಳಾದ ಓಜೆಂಪಿಕ್ ಮತ್ತು ವಿಗೋವಿ ಬೆಲೆಯನ್ನು ಭಾರೀ ಪ್ರಮಾಣದಲ್ಲಿ ಇಳಿಸಿದೆ.

ಏಪ್ರಿಲ್ 1ರಿಂದ ಜಾರಿಗೆ ಬರುವಂತೆ, ಓಜೆಂಪಿಕ್‌ನ ಆರಂಭಿಕ 0.25 ಮಿ.ಗ್ರಾಂ ಡೋಸ್ ಬೆಲೆಯನ್ನು 36 ಶೇಕಡಾ ಮತ್ತು ವಿಗೋವಿ ಆರಂಭಿಕ ಡೋಸ್ ಬೆಲೆಯನ್ನು 48 ಶೇಕಡಾ ಕಡಿತಗೊಳಿಸಲಾಗಿದೆ.

ಇದರಿಂದ ಇನ್ನು ಮುಂದೆ ಓಜೆಂಪಿಕ್ 0.25 ಮಿ.ಗ್ರಾಂ ಮತ್ತು ವಿಗೋವಿ 0.25 ಮಿ.ಗ್ರಾಂ ಡೋಸ್‌ಗಳು ವಾರಕ್ಕೆ ರೂ. 1,415 ಅಥವಾ ತಿಂಗಳಿಗೆ ರೂ. 5,660ಕ್ಕೆ, ತೆರಿಗೆ ಸೇರಿ, ಲಭ್ಯವಾಗಲಿವೆ. ದಿನದ ಲೆಕ್ಕದಲ್ಲಿ ಇದರ ವೆಚ್ಚ ರೂ. 202 ಆಗಲಿದೆ.

ಓಜೆಂಪಿಕ್‌ನ ಎಲ್ಲಾ ಡೋಸ್‌ಗಳಿಗೆ ಸರಾಸರಿ 23.8 ಶೇಕಡಾ ಮತ್ತು ವಿಗೋವಿ ಎಲ್ಲಾ ಡೋಸ್‌ಗಳಿಗೆ 27 ಶೇಕಡಾ ಬೆಲೆ ಇಳಿಕೆ ಮಾಡಲಾಗಿದೆ. 0.5 ಮಿ.ಗ್ರಾಂ ಮತ್ತು 1 ಮಿ.ಗ್ರಾಂ ಡೋಸ್‌ಗಳಿಗೂ ಬೆಲೆ ಕಡಿತ ಅನ್ವಯವಾಗಿದ್ದು, ಓಜೆಂಪಿಕ್ 1 ಮಿ.ಗ್ರಾಂ ವಾರದ ಡೋಸ್ ಈಗ ರೂ. 2,275ಕ್ಕೆ ಲಭ್ಯವಾಗಲಿದೆ.

ವಿಗೋವಿ ಅನ್ನು ದೀರ್ಘಕಾಲದ ತೂಕ ನಿರ್ವಹಣೆ, ಬೊಜ್ಜು ಅಥವಾ ಅಧಿಕ ತೂಕ ಹೊಂದಿರುವವರಲ್ಲಿ ತೂಕ ಇಳಿಕೆ ಮತ್ತು ಹೃದಯ ಸಂಬಂಧಿತ ಗಂಭೀರ ಸಮಸ್ಯೆಗಳ ಅಪಾಯವನ್ನು ಕಡಿಮೆ ಮಾಡಲು ವೈದ್ಯರು ಸೂಚಿಸುತ್ತಾರೆ.

ಈ ಎರಡೂ ಔಷಧಿಗಳಲ್ಲಿರುವ ಮುಖ್ಯ ಘಟಕ ಸೆಮಾಗ್ಲುಟೈಡ್ ಆಗಿದ್ದು, ವಿಶ್ವದಾದ್ಯಂತ 50ಕ್ಕೂ ಹೆಚ್ಚು ಕ್ಲಿನಿಕಲ್ ಪರೀಕ್ಷೆಗಳು ಮತ್ತು ಸುಮಾರು 4.9 ಕೋಟಿ ರೋಗಿಗಳ ಬಳಕೆಯ ಅನುಭವವನ್ನು ಹೊಂದಿದೆ ಎಂದು ಕಂಪನಿ ತಿಳಿಸಿದೆ. ಈ ಔಷಧಿಗಳು ಪೆನ್ ರೂಪದಲ್ಲಿ ಲಭ್ಯವಿದ್ದು, ವೈದ್ಯರ ಪ್ರಿಸ್ಕ್ರಿಪ್ಷನ್ ಆಧಾರದಲ್ಲಿ ಮಾತ್ರ ಬಳಸಬೇಕಾಗುತ್ತದೆ.

## ಲಾಠಿ ಹಿಡಿಯುವ ಕೈಗಳಿಂದ ಪ್ರೀತಿಯ ಅಪ್ಪುಗೆ!



ಬಂಗಾರಪೇಟೆ

ಸಾಮಾನ್ಯ ಜನರಿಗೆ ಪೊಲೀಸ್ ಎಂದರೆ ನೆನಪಾಗುವುದು ಲಾಠಿ, ಕಟ್ಟುನಿಟ್ಟಿನ ಶಿಸ್ತು ಮತ್ತು ಕಠಿಣ ಕಾನೂನು. ಆದರೆ ಕೆಜಿಎಫ್ ಪೊಲೀಸ್ ಜಿಲ್ಲೆಯ ಬಂಗಾರಪೇಟೆ ವ್ಯಾಪ್ತಿಯಲ್ಲಿ ಈಗ ಖಾಕಿ ಪಡೆಯ ಹೊಸ ಮುಖವೊಂದು ಅನಾವರಣಗೊಂಡಿದೆ. ಇಲ್ಲಿನ ಪೊಲೀಸ್ ಸಿಬ್ಬಂದಿ ಕೇವಲ ಕಾನೂನು ರಕ್ಷಕರಾಗಿ ಉಳಿಯದೆ, ಅನಾಥರ ಪಾಲಿನ ಬಂಧುಗಳಾಗಿ, ಹಿರಿಯ ನಾಗರಿಕರ ಪಾಲಿನ ಆಸರೆಯಾಗಿ ಹೊರಹೊಮ್ಮಿದ್ದಾರೆ.

'ಆಸರೆ' ಯೋಜನೆ ಭರವಸೆಯ ಕಿರಣ: ಹಿರಿಯ ನಾಗರಿಕರು ಮತ್ತು ಒಂಟಿ ಮಹಿಳೆಯರ ಸುರಕ್ಷತೆಗಾಗಿ ಜಾರಿಗೆ ತಂದಿರುವ 'ಆಸರೆ' ಯೋಜನೆಯು ಇಂದು ಸಾರ್ವಜನಿಕರ ಅಪಾರ ಮೆಚ್ಚುಗೆಗೆ ಪಾತ್ರವಾಗಿದೆ. ಪೊಲೀಸ್ ಅಧಿಕಾರಿಗಳು ಸ್ವತಃ ಮನೆ ಮನೆಗೆ ಭೇಟಿ ನೀಡಿ, ಜನರ ಸಮಸ್ಯೆಗಳಿಗೆ ಕಿವಿಯಾಗುತ್ತಿರುವುದು ಜಿಲ್ಲೆಯಲ್ಲಿ ಹೊಸ ಸಂಚಲನ ಮೂಡಿಸಿದೆ.

ಮನೆ ಬಾಗಿಲಿಗೆ ಬಂದ ಪೊಲೀಸ್: ಠಾಣಾ ವ್ಯಾಪ್ತಿಯಲ್ಲಿ ಒಂಟಿಯಾಗಿ ವಾಸಿಸುವ ವೃದ್ಧರ ಮನೆಗೆ ತೆರಳುವ ಪೊಲೀಸರು, ಅವರ ಆರೋಗ್ಯ ಮತ್ತು ದಿನನಿತ್ಯದ ಅಗತ್ಯಗಳ ಬಗ್ಗೆ ವಿಚಾರಿಸುತ್ತಿದ್ದಾರೆ.

ಧೈರ್ಯ ತುಂಬುತ್ತಿರುವ ಮಹಿಳಾ ಸಿಬ್ಬಂದಿ: ವಿಶೇಷವಾಗಿ ಮಹಿಳಾ ಪೊಲೀಸ್ ಸಿಬ್ಬಂದಿ, ಒಂಟಿ ಮಹಿಳೆಯರೊಂದಿಗೆ ಆತ್ಮೀಯವಾಗಿ ಮಾತನಾಡಿ ಅವರಲ್ಲಿರುವ ಭದ್ರತೆಯ ಆತಂಕವನ್ನು ದೂರ ಮಾಡುತ್ತಿದ್ದಾರೆ.

ತುರ್ತು ಸ್ಪಂದನೆ: ಪೊಲೀಸರು ತಮ್ಮ ವೈಯಕ್ತಿಕ ಸಂಪರ್ಕ ಸಂಖ್ಯೆಗಳನ್ನು ನೀಡಿ, ಯಾವುದೇ ತೊಂದರೆ ಎದುರಾದಲ್ಲಿ ಕ್ಷಣಾರ್ಧದಲ್ಲಿ ಸ್ಥಳಕ್ಕೆ ಬರುವ ಭರವಸೆ ನೀಡುತ್ತಿದ್ದಾರೆ.

ಅಪರಾಧ ತಡೆಗೆ ರಾಮಬಾಣ: ವೃದ್ಧರನ್ನು ಗುರಿಯಾಗಿಸಿಕೊಂಡು ನಡೆಯುವ ವಂಚನೆ ಮತ್ತು ಕಳ್ಳತನದಂತಹ ಕೃತ್ಯಗಳನ್ನು ತಡೆಯಲು ಈ ಯೋಜನೆ ಒಂದು ಭದ್ರತಾ ಕೋಟೆಯಂತೆ ಕೆಲಸ ಮಾಡುತ್ತಿದೆ.

ಮಿಡಿಯುವ ಹೃದಯಗಳು: ಕೇವಲ ಕರ್ತವ್ಯಕ್ಕಾಗಿ ಭೇಟಿ ನೀಡದೆ, ಹಸಿದವರಿಗೆ ಅನ್ನ ನೀಡುವುದು ಮತ್ತು ಅನಾರೋಗ್ಯ ಪೀಡಿತರಿಗೆ ಚಿಕಿತ್ಸೆ ಕೊಡಿಸುವಲ್ಲಿ ನೆರವಾಗುವ ಮೂಲಕ ಪೊಲೀಸರು ಮಾನವೀಯತೆ ಮೆರೆಯುತ್ತಿದ್ದಾರೆ. ಮಕ್ಕಳಿಂದ ದೂರವಾಗಿ ಒಂಟಿತನ ಅನುಭವಿಸುತ್ತಿರುವ ಹಿರಿಯರಿಗೆ ಪೊಲೀಸರ ಈ ಭೇಟಿ ಆಪ್ತ ಬಂಧುಗಳು ಬಂದಷ್ಟು ಸಂತಸ ನೀಡುತ್ತಿದೆ.

ಪೊಲೀಸ್ ಇಲಾಖೆಯು ಕೇವಲ ಶಿಕ್ಷಿಸುವ ಪಡೆಯಲ್ಲ, ಅದು ಸಮಾಜವನ್ನು ರಕ್ಷಿಸುವ ಮತ್ತು ಪೋಷಿಸುವ ಶಕ್ತಿಯೂ ಹೌದು. 'ಆಸರೆ' ಯೋಜನೆಯ ಮೂಲಕ ನಾವು ಜನರ ಹತ್ತಿರವಾಗಲು ಪ್ರಯತ್ನಿಸುತ್ತಿದ್ದೇವೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಿವಾಂಶು ರಜಪೂತ್ ತಿಳಿಸಿದರು.

ಮಿಡಿಯುವ ಹೃದಯಗಳು: ಕೇವಲ ಕರ್ತವ್ಯಕ್ಕಾಗಿ ಭೇಟಿ ನೀಡದೆ, ಹಸಿದವರಿಗೆ ಅನ್ನ ನೀಡುವುದು ಮತ್ತು ಅನಾರೋಗ್ಯ ಪೀಡಿತರಿಗೆ ಚಿಕಿತ್ಸೆ ಕೊಡಿಸುವಲ್ಲಿ ನೆರವಾಗುವ ಮೂಲಕ ಪೊಲೀಸರು ಮಾನವೀಯತೆ ಮೆರೆಯುತ್ತಿದ್ದಾರೆ. ಮಕ್ಕಳಿಂದ ದೂರವಾಗಿ ಒಂಟಿತನ ಅನುಭವಿಸುತ್ತಿರುವ ಹಿರಿಯರಿಗೆ ಪೊಲೀಸರ ಈ ಭೇಟಿ ಆಪ್ತ ಬಂಧುಗಳು ಬಂದಷ್ಟು ಸಂತಸ ನೀಡುತ್ತಿದೆ.

ಪೊಲೀಸ್ ಇಲಾಖೆಯು ಕೇವಲ ಶಿಕ್ಷಿಸುವ ಪಡೆಯಲ್ಲ, ಅದು ಸಮಾಜವನ್ನು ರಕ್ಷಿಸುವ ಮತ್ತು ಪೋಷಿಸುವ ಶಕ್ತಿಯೂ ಹೌದು. 'ಆಸರೆ' ಯೋಜನೆಯ ಮೂಲಕ ನಾವು ಜನರ ಹತ್ತಿರವಾಗಲು ಪ್ರಯತ್ನಿಸುತ್ತಿದ್ದೇವೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಿವಾಂಶು ರಜಪೂತ್ ತಿಳಿಸಿದರು.

ಸಾರ್ವಜನಿಕರ ಮೆಚ್ಚುಗೆ: ಎಸ್ಪಿ ಶಿವಾಂಶು ರಜಪೂತ್ ಅವರ ಮಾರ್ಗದರ್ಶನದಲ್ಲಿ ನಡೆಯುತ್ತಿರುವ ಈ ಮಾನವೀಯ ಕಾರ್ಯಕ್ಕೆ ಬಂಗಾರಪೇಟೆಯ ಜನತೆ ಫುಲ್ ಮಾರ್ಕ್ಸ್ ನೀಡಿದ್ದಾರೆ. "ಖಾಕಿ ಬಟ್ಟೆಯ ಹಿಂದೆ ಮೃದುವಾದ ಹೃದಯಗಳಿವೆ" ಎನ್ನುವುದು ಈ ಕಾರ್ಯಾಚರಣೆಯ ಮೂಲಕ ಸಾಬೀತಾಗಿದೆ.



ವಿಜಯಪುರ ಪಟ್ಟಣದ ರೇಣುಕಾ ಎಲ್ಲಮ್ಮ ದೇವಿಯ ಹೂವಿನ ಕರಗ ಮಹೋತ್ಸವದ ಹಿನ್ನೆಲೆಯಲ್ಲಿ, ದೇವರಿಗೆ ವಿಶೇಷ ಹೂವಿನ ಅಲಂಕಾರ ಅತ್ಯಂತ ಸಡಗರ ಸಂಭ್ರಮದಿಂದ ಮಾಡಲಾಯಿತು.

## ಸನ್ನಿಧಿಗೆ ಕಂಚಿನ ಪದಕ



ಚಿಂತಾಮಣಿ

ನಗರದ ಸತೀಶ್ ದಂಪತಿಗಳ ಪುತ್ರಿ ಕುಮಾರಿ ಸನ್ನಿಧಿ ಸತೀಶ್ ಅವರು ಇತ್ತೀಚೆಗೆ ನಡೆದ ಪ್ರತಿಷ್ಠಿತ 'ಅಸ್ಮಿತಾ ಖೇಲೊ ಇಂಡಿಯಾ' ರಾಷ್ಟ್ರಮಟ್ಟದ ಯೋಗ ಸ್ಪರ್ಧೆಯಲ್ಲಿ ತೃತೀಯ ಸ್ಥಾನ ಪಡೆಯುವ ಮೂಲಕ ರಾಜ್ಯ ಹಾಗೂ ಜಿಲ್ಲೆಗೆ ಕೀರ್ತಿ ತಂದಿದ್ದಾರೆ.

ಕರ್ನಾಟಕ ಮತ್ತು ದಕ್ಷಿಣ ಭಾರತವನ್ನು ಪ್ರತಿನಿಧಿಸಿದ್ದ ಸನ್ನಿಧಿ, ತಮ್ಮ ಅದ್ಭುತ ಯೋಗ ಕೌಶಲ್ಯದ ಮೂಲಕ ಕಂಚಿನ ಪದಕ ಮುಡಿಗೇರಿಸಿಕೊಂಡಿದ್ದಾರೆ. ಈ ಸಾಧನೆಯ ಮೂಲಕ ಚಿಂತಾಮಣಿ ತಾಲೂಕಿನ ಕೀರ್ತಿ ಪತಾಕೆಯನ್ನು ರಾಷ್ಟ್ರಮಟ್ಟದಲ್ಲಿ ಹಾರಿಸಿದ್ದಾರೆ.

ಗಣ್ಯರಿಂದ ಅಭಿನಂದನೆಗಳ ಮಹಾಪೂರ: ಕುಮಾರಿ ಸನ್ನಿಧಿಯ ಈ ಅಪ್ರತಿಮ ಸಾಧನೆಯನ್ನು ಗುರುತಿಸಿ ಚಿಂತಾಮಣಿ ತಾಲೂಕು ಬ್ರಾಹ್ಮಣ ಸಂಘದ ಅಧ್ಯಕ್ಷರಾದ ಕೃಷ್ಣ ಮತ್ತು ಕೋನಕುಂಟ್ಲು ಬ್ರಾಹ್ಮಣ ಸಂಘದ ಪ್ರಮುಖರಾದ ಎಸ್. ನಾಗರಾಜ್, ಗೋಪಾಲಕೃಷ್ಣ, ಸುರೇಶ್, ವೈ.ಆರ್. ಪ್ರಸಾದ್ ಅವರು ಹರ್ಷ ವ್ಯಕ್ತಪಡಿಸಿದ್ದಾರೆ.

ಅಲ್ಲದೆ, ಯುವಕ ಸಂಘದ ರಾಜಶೇಖರ್, ನಾಗರಾಜ್, ವಿನಯ್ ಹಾಗೂ ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಜಿಲ್ಲಾ ಪ್ರತಿನಿಧಿ ಪಿ.ಆರ್. ಪ್ರಕಾಶ್ ಮತ್ತು ಚಿಕ್ಕಬಳ್ಳಾಪುರ ಬ್ರಾಹ್ಮಣ ಸಂಘದ ಅಧ್ಯಕ್ಷರಾದ ನಾಗಭೂಷಣ್ ಅವರು ಸಾಧಕಿಯನ್ನು ಭೇಟಿ ಮಾಡಿ ಅಭಿನಂದನೆ ಸಲ್ಲಿಸಿದ್ದಾರೆ.

"ಸನ್ನಿಧಿ ಸತೀಶ್ ಅವರು ಮುಂದಿನ ದಿನಗಳಲ್ಲಿ ಇನ್ನಷ್ಟು ಉನ್ನತ ಮಟ್ಟದ ಸ್ಪರ್ಧೆಗಳಲ್ಲಿ ಪಾಲ್ಗೊಂಡು ಜಯಭೇರಿ ಬಾರಿಸಲಿ, ಅವರ ಭವಿಷ್ಯ ಉಜ್ವಲವಾಗಲಿ" ಎಂದು ಸಂಘದ ಪದಾಧಿಕಾರಿಗಳು ಈ ಸಂದರ್ಭದಲ್ಲಿ ಹಾರೈಸಿದ್ದಾರೆ.

## ವೈಫಲ್ಯ ಮೆಟ್ಟಿ ನಿಂತ ರಂಜಿತಾ



ಕನಕಪುರ

ದೈಹಿಕ ಸವಾಲುಗಳು ಸಾಧನೆಗೆ ಅಡ್ಡಿಯಲ್ಲ ಎಂಬುದನ್ನು ನಗರದ ವಿಶಿಷ್ಟ ಚೇತನ ಬಾಲಕಿ ರಂಜಿತಾ ಸಾಬೀತುಪಡಿಸಿದ್ದಾರೆ. ಗುಜರಾತ್‌ನಲ್ಲಿ ನಡೆದ ರಾಷ್ಟ್ರೀಯ ಮಟ್ಟದ ಕ್ರೀಡಾಕೂಟದಲ್ಲಿ ಚಿನ್ನದ ಪದಕ ಗೆಲ್ಲುವ ಮೂಲಕ ಈಗ ಮಲೇಷ್ಯಾದಲ್ಲಿ ನಡೆಯಲಿರುವ ಅಂತರಾಷ್ಟ್ರೀಯ ಕ್ರೀಡಾಕೂಟಕ್ಕೆ ಆಯ್ಕೆಯಾಗಿ ಜಿಲ್ಲೆ ಹಾಗೂ ರಾಜ್ಯಕ್ಕೆ ಕೀರ್ತಿ ತಂದಿದ್ದಾರೆ.

ಗುಜರಾತ್ ರಾಜ್ಯದ ಅಹಮದಾಬಾದ್‌ನ ನವರಂಗಪುರ ಮೈದಾನದಲ್ಲಿ ಇತ್ತೀಚೆಗೆ ನಡೆದ 10ನೇ ರಾಷ್ಟ್ರೀಯ ಮಟ್ಟದ ಕಿವುಡ ಸಬ್ ಜೂನಿಯರ್ ಮತ್ತು ಜೂನಿಯರ್ ಹಾಗೂ 27ನೇ ರಾಷ್ಟ್ರೀಯ ಕಿವುಡ ಹಿರಿಯ ಕ್ರೀಡಾ ಚಾಂಪಿಯನ್‌ಶಿಪ್‌ನಲ್ಲಿ ರಂಜಿತಾ ಕರ್ನಾಟಕವನ್ನು ಪ್ರತಿನಿಧಿಸಿದ್ದರು. 600 ಮೀಟರ್ ಓಟದ ಸ್ಪರ್ಧೆಯಲ್ಲಿ ಅದ್ಭುತ ಪ್ರದರ್ಶನ ನೀಡಿದ ಇವರು ಪ್ರಥಮ ಸ್ಥಾನ ಪಡೆದು ಸಾಧನೆ ಮಾಡಿದ್ದಾರೆ.

ರಾಷ್ಟ್ರಮಟ್ಟದಲ್ಲಿ ತೋರಿದ ಈ ಸಾಧನೆಯ ಫಲವಾಗಿ ರಂಜಿತಾ ಅವರು ಮಲೇಷ್ಯಾದಲ್ಲಿ ನಡೆಯಲಿರುವ ಅಂತರಾಷ್ಟ್ರೀಯ ಮಟ್ಟದ ಕ್ರೀಡಾಕೂಟಕ್ಕೆ ಆಯ್ಕೆಯಾಗಿದ್ದಾರೆ.

## ಮಹಿಳೆಯರು ಆರೋಗ್ಯದ ಅರಿವು ಹೊಂದುವುದು ಅತಿ ಮುಖ್ಯ: ಡಾ. ಪ್ರತಿಮಾ



ರಾಮನಗರ

ಪ್ರತಿಯೊಬ್ಬ ಮಹಿಳೆಯರು ತಮ್ಮ ದೈಹಿಕ ಹಾಗೂ ಮಾನಸಿಕ ಆರೋಗ್ಯ ಕಾಪಾಡಿಕೊಳ್ಳಲು ಅನುಸರಿಸಬೇಕಾದ ಕ್ರಮಗಳ ಕುರಿತು ಅರಿವು ಹೊಂದುವುದು ಅತಿ ಮುಖ್ಯವಾಗಿದೆ ಎಂದು ಕನಕಪುರದ ಸರ್ಕಾರಿ ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ವೈದ್ಯಾಧಿಕಾರಿಗಳಾದ ಡಾ. ಪ್ರತಿಮಾ ಹೇಳಿದರು.

ಅವರು ಇತ್ತೀಚೆಗೆ ಕನಕಪುರದ ಕೋಡಿಹಳ್ಳಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಕನಕಪುರದ ಕೋಡಿಹಳ್ಳಿಯ ಶ್ರೀಮತಿ ಗೌರಮ್ಮ ಕೆಂಪೇಗೌಡ ಸರ್ಕಾರಿ ಪದವಿ ಕಾಲೇಜು, ಮಹಿಳಾ ಸಬಲೀಕರಣ ಕೋಶದ ವತಿಯಿಂದ ಏರ್ಪಡಿಸಿದ್ದ ಮಹಿಳಾ ದಿನಾಚರಣೆ ಹಾಗೂ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಮಹಿಳೆಯರಿಗೆ ವಯಸ್ಸಿನ ವಿವಿಧ ಹಂತಗಳಲ್ಲಿ ಆರೋಗ್ಯ ಸಮಸ್ಯೆಗಳು ಎದುರಾಗಲಿವೆ. 25 ರಿಂದ 35 ವರ್ಷ ವಯಸ್ಸಿನ ಯುವ ಮಹಿಳೆಯರು ಮಾಸಿಕ ಚಕ್ರ ಪ್ರಾರಂಭವಾದಾಗ ಯುವ ಮಹಿಳೆಯರು ಅತಿಯಾದ ಅಸಮಂಜಸ ನೋವು, ಮೊಡವೆ, ರಕ್ತಹೀನತೆಯಿಂದ ಬಳಲುತ್ತಾರೆ ಇದನ್ನು ತಪ್ಪಿಸಲು ಪೋಷಕಾಂಶಯುಕ್ತ ಆಹಾರ ಸೇವಿಸಬೇಕು. ಸ್ವಚ್ಛತೆ ಅಭ್ಯಾಸಗಳನ್ನು ಅನುಸರಿಸಬೇಕು ಹಾಗೂ ನಿಯಮಿತ ವೈದ್ಯಕೀಯ ತಪಾಸಣೆಗೊಳಗಾಗಿ ಲಸಿಕೆಗಳನ್ನು ಪಡೆಯುವ ಮೂಲಕ ಆರೋಗ್ಯ ಕಾಪಾಡಿಕೊಳ್ಳಬಹುದು ಎಂದರು.

36 ರಿಂದ 50 ವರ್ಷದ ಮಧ್ಯ ವಯಸ್ಸಿನ ಮಹಿಳೆಯರ ಗರ್ಭಾಶಯದ ಆರೋಗ್ಯಕ್ಕಾಗಿ ನಿಯಮಿತ ಗೈನಕಾಲಜಿ ತಪಾಸಣೆ, ಪ್ಯಾಪ್ ಸ್ಮಿಯರ್ ಪರೀಕ್ಷೆ (ಗರ್ಭಾಶಯದ ಆರೋಗ್ಯಕ್ಕಾಗಿ), ಕುಟುಂಬ ಯೋಜನೆಯೊಂದಿಗೆ ಆರೋಗ್ಯಕರ ಜೀವನಶೈಲಿಗಾಗಿ ಆಹಾರ, ವ್ಯಾಯಾಮ, ಒತ್ತಡ ನಿಯಂತ್ರಣ ರೂಢಿಸಿಕೊಳ್ಳಬೇಕು. ಗರ್ಭಧಾರಣೆಯ ಅವಧಿ ಗರ್ಭಪೂರ್ವ ಆರೈಕೆ ಅತ್ಯಂತ ಮುಖ್ಯ, ನಿಯಮಿತ ವೈದ್ಯರ ಭೇಟಿ, ಐರನ್, ಫೋಲಿಕ್ ಆಮ್ಲ ಪೂರಕಗಳು, ತಾಯಿ ಮತ್ತು ಮಗುವಿನ ಆರೋಗ್ಯ ಮೇಲ್ವಿಚಾರಣೆ ಮುಖ್ಯವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಪ್ರಾಂಶುಪಾಲರಾದ ಡಾ. ಕೆ.ಟಿ. ವೆಂಕಟೇಶ್ ಅವರು ಮಾತನಾಡಿ, ಮಹಿಳಾ ಸಬಲೀಕರಣವು ಸಮಾಜದ ಸಮಗ್ರ ಅಭಿವೃದ್ಧಿಗೆ ಅತ್ಯಂತ ಅಗತ್ಯವಾಗಿದ್ದು, ಇದರ ವಿವಿಧ ಆಯಾಮಗಳಿವೆ. ಶಿಕ್ಷಣ ಸಬಲೀಕರಣದ ಮೂಲಕ ಮಹಿಳೆಯರು ಜ್ಞಾನವನ್ನು ಪಡೆದು ತಮ್ಮ ಹಕ್ಕುಗಳನ್ನು ಅರಿತುಕೊಳ್ಳುತ್ತಾರೆ. ಆರ್ಥಿಕ ಸಬಲೀಕರಣವು ಉದ್ಯೋಗ, ಉದ್ಯಮಶೀಲತೆ ಮತ್ತು ಸ್ವಾವಲಂಬನೆ ಮೂಲಕ ಅವರನ್ನು ಸ್ವತಂತ್ರರನ್ನಾಗಿಸುತ್ತದೆ ಎಂದರು.

ಸಾಮಾಜಿಕ ಸಬಲೀಕರಣವು ಲಿಂಗ ಸಮಾನತೆ, ಮಾನ್ಯತೆ ಮತ್ತು ಗೌರವವನ್ನು ಒದಗಿಸುತ್ತದೆ. ರಾಜಕೀಯ ಸಬಲೀಕರಣದ ಮೂಲಕ ಮಹಿಳೆಯರು ನಿರ್ಧಾರ ಕೈಗೊಳ್ಳುವ ಪ್ರಕ್ರಿಯೆಯಲ್ಲಿ ಭಾಗವಹಿಸುತ್ತಾರೆ. ಕಾನೂನು ಸಬಲೀಕರಣವು ಮಹಿಳೆಯರ ಹಕ್ಕುಗಳನ್ನು ರಕ್ಷಿಸುವುದರ ಜೊತೆಗೆ ಅನ್ಯಾಯದ ವಿರುದ್ಧ ಹೋರಾಡಲು ಸಹಕಾರಿಯಾಗಿದೆ. ಈ ಎಲ್ಲಾ ರೂಪಗಳ ಸಬಲೀಕರಣವು ಮಹಿಳೆಯರನ್ನು ಶಕ್ತಿಶಾಲಿಗಳಾಗಿ ರೂಪಿಸಿ ಸಮಾನತೆ ಮತ್ತು ನ್ಯಾಯಯುತ ಸಮಾಜ ನಿರ್ಮಾಣಕ್ಕೆ ನೆರವಾಗುತ್ತದೆ ಎಂದು ಆರೋಗ್ಯ ಮತ್ತು ಮಹಿಳೆಯರ ಸಬಲೀಕರಣದ ಮಹತ್ವವನ್ನು ಬಗ್ಗೆ ತಿಳಿಸಿದರು.

ಮಹಿಳಾ ಸಬಲೀಕರಣ ಕೋಶದ ಸಂಯೋಜಕರಾದ ಎಂ. ವಿಶಾಲಾಕ್ಷಿ ಅವರು ಕಾರ್ಯಕ್ರಮ ಉದ್ದೇಶವನ್ನು ತಿಳಿಸಿದರು ಹಾಗೂ ಕನಕಪುರ ರೂರಲ್ ಕಾಲೇಜಿನ ಸಹಾಯಕ ಪ್ರಾಧ್ಯಾಪಕರು ಹಾಗೂ ಪ್ರಾಣಿ ಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಸುಮಲತಾ ಎಸ್.ಎನ್. ಅವರು ಮಾತನಾಡಿದರು. ಕಾಲೇಜಿನ ಪ್ರಾಧ್ಯಾಪಕರಾದ ಅಶ್ವಥ್ ನಾರಾಯಣ, ಅವಿನಾಶ್, ರಾಧಾಕೃಷ್ಣ, ಪ್ರಿಯಾಂಕ, ಚೈತ್ರ ಸೇರಿದಂತೆ ಹಲವರು ಭಾಗವಹಿಸಿದರು.

## ತುಮಕೂರಿನಲ್ಲಿ ಮಹಾವೀರ ಜಯಂತಿ ಸಂಭ್ರಮ: ಮೆರವಣಿಗೆಯಲ್ಲಿ ಮೊಳಗಿದ ಅಹಿಂಸೆಯ ಮಂತ್ರ!



ತುಮಕೂರು

"ಬದುಕು ಮತ್ತು ಬದುಕಲು ಬಿಡು" ಎಂಬ ಭಗವಾನ್ ಮಹಾವೀರರ ಅಮೂಲ್ಯ ಸಂದೇಶದೊಂದಿಗೆ ನಗರದಲ್ಲಿ ದಿಗಂಬರ ಜೈನ ಸಮಾಜದ ವತಿಯಿಂದ ಶ್ರೀ ಮಹಾವೀರ ಜಯಂತಿಯನ್ನು ಅತ್ಯಂತ ವೈಭವಯುತವಾಗಿ ಆಚರಿಸಲಾಯಿತು. ಶಾಂತಿ ಮತ್ತು ಅಹಿಂಸೆಯ ಸಂಕೇತವಾಗಿ ನಗರದಾದ್ಯಂತ ನಡೆದ ಮೆರವಣಿಗೆಯು ಭಕ್ತರ ಕಣ್ಮನ ಸೆಳೆಯಿತು.

ನಗರದ ಚಿಕ್ಕಪೇಟೆಯಲ್ಲಿರುವ ಜೈನ ಸಮುದಾಯದ ದೇವಾಲಯದಿಂದ ಆರಂಭವಾದ ಮೆರವಣಿಗೆಗೆ ಜಿಲ್ಲಾಧಿಕಾರಿ ಕಚೇರಿ ಮುಂಭಾಗದಲ್ಲಿ ಚಾಲನೆ ನೀಡಲಾಯಿತು. ಅಲ್ಲಿಂದ ಎಂ.ಜಿ. ರಸ್ತೆಯ ಮುಖೇನ ಸಾಗಿದ ಭವ್ಯ ಮೆರವಣಿಗೆಯುದ್ದಕ್ಕೂ ಜೈನ ಧರ್ಮದ ಜಯಘೋಷಗಳು ಮೊಳಗಿದವು. ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದ ವಿವಿಧ ಕಲಾತಂಡಗಳ ಪ್ರದರ್ಶನವು ಸಾರ್ವಜನಿಕರ ಗಮನ ಸೆಳೆಯಿತು. ಅಂತಿಮವಾಗಿ ಬಿ.ಹೆಚ್. ರಸ್ತೆಯಲ್ಲಿರುವ ಜೈನ ಭವನಕ್ಕೆ ಮೆರವಣಿಗೆಯು ತಲುಪಿತು. ಜೈನ ಭವನದಲ್ಲಿ ನಡೆದ ಧಾರ್ಮಿಕ ಸಭೆಯಲ್ಲಿ ಸಮಾಜದ ಮುಖಂಡರಾದ ಸುರೇಶ್‌ಕುಮಾರ್ ಮಾತನಾಡಿ, "ಇಂದಿನ ಜಗತ್ತು ಅಶಾಂತಿಯ ಜ್ವಾಲೆಯಲ್ಲಿ ಬೆಂದು ಹೋಗುತ್ತಿದೆ. ಯುದ್ಧ ಮತ್ತು ರಕ್ತಪಾತದ ಕಾರ್ಮೋಡಗಳು ಕವಿದಿರುವ ಈ ಸಂದರ್ಭದಲ್ಲಿ ಮಹಾವೀರರ ಅಹಿಂಸಾ ತತ್ವಗಳು ಪ್ರಸ್ತುತವಾಗಿವೆ. ವಿಶ್ವಶಾಂತಿಗೆ ಮಹಾವೀರರ ಮಾರ್ಗವೊಂದೇ ದಾರಿಯಾಗಿದೆ," ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ದಿಗಂಬರ ಜೈನ ಸಮಾಜದ ಮುಖಂಡರಾದ ಟಿ.ಡಿ. ಬಾಹುಬಲಿ ಬಾಬು, ಸುಭೋದಕುಮಾರ್ ಜೈನ್, ಟಿ.ಜೆ. ನಾಗರಾಜು, ವಿನಯ್ ಜೈನ್ ಸೇರಿದಂತೆ ಸಮಾಜದ ಅನೇಕ ಗಣ್ಯರು ಮತ್ತು ನೂರಾರು ಸಮಾಜ ಬಾಂಧವರು ಪಾಲ್ಗೊಂಡು ಮಹಾವೀರರ ತತ್ವಗಳನ್ನು ಸ್ಮರಿಸಿದರು.

## ಶ್ಯಾಗತ್ತೂರು ಡೈರಿ ಅಧ್ಯಕ್ಷರಾಗಿ ಎಸ್.ವಿ. ಸುಧಾಕರ್ ಹ್ಯಾಟ್ರಿಕ್ ಆಯ್ಕೆ



ಕೋಲಾರ

"ಶ್ಯಾಗತ್ತೂರು ಹಾಲು ಉತ್ಪಾದಕರ ಸಹಕಾರ ಸಂಘದಲ್ಲಿ ಇದೇ ಮೊದಲ ಬಾರಿಗೆ ಸಂಘದ ಮೂಲಕವೇ ಪಡಿತರ ವಿತರಣೆ ಮಾಡುವುದರ ಜೊತೆಗೆ, ರೈತರ ಅನುಕೂಲಕ್ಕಾಗಿ ಸಹಕಾರ ಬ್ಯಾಂಕ್ ಸ್ಥಾಪಿಸುವ ಗುರಿ ಹೊಂದಿದ್ದೇವೆ," ಎಂದು ಸಂಘದ ನೂತನ ಅಧ್ಯಕ್ಷ ಎಸ್.ವಿ. ಸುಧಾಕರ್ ತಿಳಿಸಿದರು.

ತಾಲೂಕಿನ ಯಲ್ದೂರು ಹೋಬಳಿಯ ಲಕ್ಷ್ಮೀಸಾಗರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಶ್ಯಾಗತ್ತೂರು ಡೈರಿಯ ಅಧ್ಯಕ್ಷರಾಗಿ ಸತತ 3ನೇ ಬಾರಿಗೆ ಅವಿರೋಧವಾಗಿ ಆಯ್ಕೆಯಾದ ಬಳಿಕ ಅವರು ಮಾಧ್ಯಮಗಳೊಂದಿಗೆ ಮಾತನಾಡಿದರು.

ಪಕ್ಷಾತೀತ ಆಯ್ಕೆ – ಅಭಿವೃದ್ಧಿಗೆ ಒತ್ತು: ಸಂಘದ 12 ಮಂದಿ ನಿರ್ದೇಶಕರು ಪಕ್ಷಾತೀತವಾಗಿ ಒಮ್ಮತದಿಂದ ನನ್ನನ್ನು ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿದ್ದಾರೆ. ಈ ವಿಶ್ವಾಸಕ್ಕೆ ಚ್ಯುತಿ ಬರದಂತೆ ಕೆಲಸ ಮಾಡುತ್ತೇನೆ ಎಂದ ಅವರು, "ಹಿಂದೆ ಬೇರೆಯವರ ಪರವಾನಗಿ ಮೂಲಕ ಪಡಿತರ ವಿತರಣೆಯಾಗುತ್ತಿತ್ತು. ಈಗ 4 ಹಳ್ಳಿಗಳ 580 ಕಾರ್ಡುದಾರರಿಗೆ ಸಂಘದ ಮೂಲಕವೇ ಅಧಿಕೃತವಾಗಿ ಅಕ್ಕಿ ವಿತರಿಸಲು ಕ್ರಮ ಕೈಗೊಳ್ಳಲಾಗುವುದು," ಎಂದು ಭರವಸೆ ನೀಡಿದರು.

ಜಿಲ್ಲೆಗೆ ಮಾದರಿ ಸಂಘದ ಕನಸು: ಸಹಕಾರ ಬ್ಯಾಂಕ್: ಸಂಘದ ಆವರಣದಲ್ಲೇ ಸಹಕಾರ ಬ್ಯಾಂಕ್ ಆರಂಭಿಸಲು ಸಿದ್ಧತೆಗಳು ನಡೆಯುತ್ತಿವೆ.

ಬಿ.ಎಂ.ಸಿ ಕೇಂದ್ರ: ಹಾಲಿನ ಗುಣಮಟ್ಟ ಕಾಪಾಡಲು ಶೀಘ್ರದಲ್ಲೇ ಬಿ.ಎಂ.ಸಿ (ಬಲ್ಕ್ ಮಿಲ್ಕ್ ಕೂಲರ್) ಕೇಂದ್ರ ಪ್ರಾರಂಭಿಸಲಾಗುವುದು.

ಸಾಮಾಜಿಕ ಸೇವೆ: ರೋಟರಿ ಸಂಸ್ಥೆ ಸಹಯೋಗದಲ್ಲಿ ಅರ್ಹ ಫಲಾನುಭವಿಗಳಿಗೆ 10 ಹಸುಗಳನ್ನು ಉಚಿತವಾಗಿ ವಿತರಿಸಲಾಗುವುದು ಹಾಗೂ ಇಂಜಿನಿಯರಿಂಗ್ (B.E) ವಿದ್ಯಾರ್ಥಿಗಳಿಗೆ 4 ಲ್ಯಾಪ್‌ಟಾಪ್‌ಗಳನ್ನು ನೀಡಲಾಗುವುದು.

ಮಾಜಿ ಸ್ಪೀಕರ್ ಕೆ.ಆರ್. ರಮೇಶ್ ಕುಮಾರ್, ಕೋಮುಲ್ ನಿರ್ದೇಶಕರು ಹಾಗೂ ಅಧಿಕಾರಿಗಳ ಸಹಕಾರದಿಂದ ಈ ಸಂಘವನ್ನು ಜಿಲ್ಲೆಯಲ್ಲೇ ಮಾದರಿ ಸಂಘವನ್ನಾಗಿ ಮಾಡುವುದಾಗಿ ಸುಧಾಕರ್ ತಿಳಿಸಿದರು.

ಚುನಾವಣಾ ಪ್ರಕ್ರಿಯೆಯನ್ನು ಮುಸ್ತಾಕ್ ಅಹಮದ್ ನಡೆಸಿಕೊಟ್ಟರು. ಕಾರ್ಯಕ್ರಮದಲ್ಲಿ ನಿರ್ದೇಶಕರಾದ ಅಮೀರ್ ಜಾನ್, ಶ್ರೀನಿವಾಸಗೌಡ, ವೆಂಕಟರಾಮೇಗೌಡ, ಆಂಜನೇಯರೆಡ್ಡಿ, ಕಾರ್ಯದರ್ಶಿ ಎಸ್.ವಿ. ಮುನಿನಾರಾಯಣ, ಗ್ರಾ.ಪಂ ಸದಸ್ಯ ವಿವೇಕ್ ಸೇರಿದಂತೆ ಹಲವು ಗಣ್ಯರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ರಾಮೋತ್ಸವದ ಸಡಗರ: ನಾಗಲಾಪುರದಲ್ಲಿ ಒಂಬತ್ತು ದಿನಗಳ ಅಖಂಡ ಜ್ಯೋತಿ!

ವೈ.ಎನ್. ಹೊಸಕೋಟೆ

ಹೋಬಳಿಯಾದ್ಯಂತ ಶ್ರೀರಾಮನವಮಿ ಹಬ್ಬವನ್ನು ಅತ್ಯಂತ ಸಡಗರ ಮತ್ತು ಭಕ್ತಿಯಿಂದ ಆಚರಿಸಲಾಯಿತು. ಬೆಳಗಿನ ಜಾವದಿಂದಲೇ ರಾಮ ಮಂದಿರ ಹಾಗೂ ಆಂಜನೇಯ ಸ್ವಾಮಿ ದೇವಾಲಯಗಳಿಗೆ ಭಕ್ತ ಸಾಗರವೇ ಹರಿದುಬಂದಿತು.

ಗ್ರಾಮದ ಎಸ್‌ಕೆಪಿಟಿ ರಸ್ತೆಯಲ್ಲಿರುವ ಎರಡು ಶ್ರೀರಾಮ ದೇವಾಲಯಗಳು, ಅಶ್ವತ್ಥನಕಟ್ಟೆಯ ಶ್ರೀರಾಮ ಮಂದಿರ ಹಾಗೂ ವಾಲ್ಮೀಕಿ ಮಂದಿರಗಳಲ್ಲಿ ಹಬ್ಬದ ಪ್ರಯುಕ್ತ ವಿಶೇಷ ಹೂವಿನ ಅಲಂಕಾರ ಮಾಡಲಾಗಿತ್ತು. ದೇವರ ವಿಗ್ರಹಗಳಿಗೆ ಪಂಚಾಮೃತ ಅಭಿಷೇಕ ಹಾಗೂ ಮಹಾಮಂಗಳಾರತಿ ನೆರವೇರಿಸಲಾಯಿತು. ಹರಕುಲದಾದ್ಯಂತ ಮೊಳಗಿದ ರಾಮನಾಮ ಭಜನೆಯು ಭಕ್ತರಲ್ಲಿ ಅಧ್ಯಾತ್ಮಿಕ ಚೈತನ್ಯ ತುಂಬಿತು. ಬೇಸಿಗೆಯ ಬಿಸಿಲನ್ನೂ ಲೆಕ್ಕಿಸದೆ ದರ್ಶನಕ್ಕೆ ಬಂದ ಭಕ್ತಾದಿಗಳಿಗೆ ದೇವಾಲಯಗಳ ವತಿಯಿಂದ ಹೆಸರುಬೇಳೆ ಕೋಸಂಬರಿ ಹಾಗೂ ಬೆಲ್ಲದ ಪಾನಕವನ್ನು ವಿತರಿಸಲಾಯಿತು. ಮನೆಮನೆಗಳಲ್ಲಿಯೂ ರಾಮನಾಮ ಸ್ಮರಣೆ ಮಾಡುವ ಮೂಲಕ ಜನರು ಶ್ರೀರಾಮನ ಕೃಪೆಗೆ ಪಾತ್ರರಾದರು.

## 'ಒತ್ತಡ ಮುಕ್ತ ಜೀವನಕ್ಕೆ ಯೋಗವೇ ದಾರಿ'



ತಿಪಟೂರು

ಇಂದಿನ ಜಂಜಾಟದ ಬದುಕಿನಲ್ಲಿ ಒತ್ತಡ ರಹಿತ ಜೀವನ ನಡೆಸಲು ಮತ್ತು ದಿನನಿತ್ಯದ ಕೆಲಸಗಳನ್ನು ಸಂತೋಷದಿಂದ ನಿರ್ವಹಿಸಲು ಪೂರಕವಾಗಿ ನಗರದ ಹಳೆ ಮಾರ್ಕೆಟ್ ಬಳಿಯ ವಾಸವಿ ವಿದ್ಯಾರ್ಥಿ ನಿಲಯದಲ್ಲಿ ನಾಲ್ಕು ದಿನಗಳ 'ಆರ್ಟ್ ಆಫ್ ಲಿವಿಂಗ್' ಶಿಬಿರವನ್ನು ಹಮ್ಮಿಕೊಳ್ಳಲಾಗಿದೆ.

ಬೆಂಗಳೂರಿನ ಶ್ರೀ ಶ್ರೀ ರವಿಶಂಕರ್ ಗುರೂಜಿ ಅವರ ಮಾರ್ಗದರ್ಶನದಲ್ಲಿ ನಡೆಯುತ್ತಿರುವ ಈ ಶಿಬಿರದಲ್ಲಿ ಸುದರ್ಶನ ಕ್ರಿಯಾ ಯೋಗ, ಪ್ರಾಣಾಯಾಮ ಮತ್ತು ಧ್ಯಾನದ ತರಬೇತಿ ನೀಡಲಾಗುತ್ತಿದೆ. ಶಿಕ್ಷಕರಾದ ಪ್ರಸಾದ್, ಅರ್ಚನಾ ಪ್ರಸಾದ್ ಮತ್ತು ಅರ್ಪಿತಾ ಯಾದವ್ ಅವರು ಶಿಬಿರಾರ್ಥಿಗಳಿಗೆ ಯೋಗ ಪ್ರಕ್ರಿಯೆಗಳನ್ನು ಮನವರಿಕೆ ಮಾಡಿಕೊಡುತ್ತಿದ್ದಾರೆ. ಈಗಾಗಲೇ 53ಕ್ಕೂ ಹೆಚ್ಚು ಶಿಬಿರಾರ್ಥಿಗಳು ಈ ಶಿಬಿರದ ಸದುಪಯೋಗ ಪಡೆದುಕೊಂಡಿದ್ದು, ಮಧ್ಯಾಹ್ನ 12 ರಿಂದ 2 ರವರೆಗೆ ತರಗತಿಗಳು ನಡೆಯುತ್ತಿವೆ.

ಸುದರ್ಶನ ಕ್ರಿಯೆ ಮಾಡುವುದರಿಂದ ಮಾನಸಿಕ ಒತ್ತಡ, ನಿದ್ರಾಹೀನತೆ ಸೇರಿದಂತೆ ಹಲವು ದೈಹಿಕ ಮತ್ತು ಮಾನಸಿಕ ಸಮಸ್ಯೆಗಳಿಗೆ ಪರಿಹಾರ ದೊರೆಯುತ್ತದೆ ಎಂದು 'ನಿಮ್ಹಾನ್ಸ್' ಮತ್ತು 'ಏಮ್ಸ್'ನಂತಹ ಪ್ರತಿಷ್ಠಿತ ಸಂಸ್ಥೆಗಳು ದೃಢೀಕರಿಸಿವೆ ಎಂದು ಶಿಕ್ಷಕರು ತಿಳಿಸಿದರು. ಆರ್ಟ್ ಆಫ್ ಲಿವಿಂಗ್ ಸಂಸ್ಥೆಯ ವತಿಯಿಂದ ಮುಂದಿನ ದಿನಗಳಲ್ಲಿ ಸಹಜ ಸಮಾಧಿ ಧ್ಯಾನ, ಉನ್ನತ ಧ್ಯಾನ ಶಿಬಿರ ಹಾಗೂ ಇಂಟ್ಯೂಷನ್ ಪ್ರೋಸೆಸ್ ನಂತಹ ವಿಶೇಷ ಶಿಬಿರಗಳನ್ನು ನಗರದಲ್ಲಿ ಆಯೋಜಿಸಲಾಗುವುದು. ಸಾರ್ವಜನಿಕರು ಇದರ ಲಾಭ ಪಡೆಯುವಂತೆ ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಹಾಗೂ ವಿವರಗಳಿಗಾಗಿ ಸಂಪರ್ಕಿಸಿ: ಆಸಕ್ತರು 9845719345 ಅಥವಾ 8618576524 ಸಂಖ್ಯೆಯನ್ನು ಸಂಪರ್ಕಿಸಬಹುದಾಗಿದೆ.

## ಎಲ್ಲಾ ಕ್ಷೇತ್ರದಲ್ಲಿಯೂ ಮಹಿಳಾ ಸಾಧಕೀಯರಿದ್ದಾರೆ



ಹಗರಿಬೊಮ್ಮನಹಳ್ಳಿ

ಮಹಿಳೆಯನ್ನು ಕೇವಲ ಮಹಿಳಾ ದಿನಾಚರಣೆಯಂದು ಮಾತ್ರ ನೆನಪು ಮಾಡಿಕೊಳ್ಳುವುದಲ್ಲ ದಿನನಿತ್ಯ ಸಂಸಾರ ಜಂಜಾಟದಲ್ಲಿ ಮಹಿಳೆಯ ಪಾತ್ರ ಬಹಳ ಮುಖ್ಯವಾಗಿರುತ್ತದೆ ಎಂದು ಅಮ್ಮ ಗ್ರಾಮೀಣ ಮತ್ತು ನಗರಭಿವೃದ್ಧಿ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷರು ಹಾಗೂ ಕಾಂಗ್ರೆಸ್ ಜಿಲ್ಲಾ ಮಹಿಳಾ ಘಟಕದ ಅಧ್ಯಕ್ಷೆ ಡಾ.ಸಾಹಿರಾಬಾನು ಹೇಳಿದರು.

ಪಟ್ಟಣದಲ್ಲಿ ಅವರು ಅಮ್ಮ ಸಂಸ್ಥೆವತಿಯಿಂದ ಆಯೋಜಿಸಿದ್ದ ಮಹಿಳಾ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿ ಮಹಿಳೆಯನ್ನು ಭೂಮಿಗೆ ಹೋಲಿಸಲಾಗುತ್ತದೆ. ಏಕೆಂದರೆ ಎಲ್ಲಾ ಕಷ್ಟ ನಷ್ಟಗಳನ್ನು ಅನುಭವಿಸಿಯೂ ನಗು ನಗುತ್ತಾ ಮಕ್ಕಳಿಗೆ ಸಂಸ್ಕಾರ ಕಲಿಸುವ ಏಕೈಕ ಜೀವ ತಾಯಿ ಹಾಗಾಗಿ ಮಹಿಳೆಗೆ ಎಷ್ಟೇ ಒತ್ತಡಗಳಿದ್ದರೂ ಆಕೆ ಭೂಮಿತೂಕದಾಕೆ ಎಂಬ ಮಾತಿದೆ. ಇತ್ತೀಚಿನ ದಿನಗಳಲ್ಲಿ ಎಲ್ಲಾ ಕ್ಷೇತ್ರಗಳಲ್ಲೂ ಮಹಿಳೆಯರು ತಮ್ಮದೇ ಆದ ಛಾಪನ್ನುಹೊತ್ತುವ ಮೂಲಕ ಸಾಧನೆಗೈಯುತ್ತಿದ್ದಾರೆ. ಆಗಿನ ಕಾಲದಲ್ಲಿ ಕೇವಲ ಅಡುಗೆ ಮನಗೆ ಸೀಮಿತವಾಗಿದ್ದ ಸ್ತ್ರೀಯರು ಗಗನಯಾತ್ರಿಗಳಾಗಿಯೂ ಸಾಧನೆ ಮಾಡಿದ್ದಾರೆ. ಈ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ಅಮ್ಮ ಸಂಸ್ಥೆವತಿಯಿಂದ ನಮ್ಮ ಭಾಗದಲ್ಲಿ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದ ಮಹಿಳೆಯರನ್ನು ಗುರುತಿಸಿ ಸನ್ಮಾನಿಸುವ ಕಾರ್ಯಕ್ರಮವನ್ನು ಆಯೋಜಿಸಿರುವುದು ಶ್ಲಾಘನೀಯ. ಒಂದೆಡೆ ದಾರಾಬೇಂದ್ರೆಯವರು ತಮ್ಮ ಕವಿತೆಯಲ್ಲಿ ಹೇಳುತ್ತಾರೆ. "ಹೊತ್ತು ಹೊತ್ತಿಗೆ ದೀಪ ಮೂಡಿಸಿ, ಅನ್ನ ಉಣಿಸಿ ತಂದೆ ಮಗುವ ತಬ್ಬಿದಾಕೆ ನಿನಗೇ ಬೇರೆ ಹೆಸರು ಬೇಕೆ ಸ್ತ್ರೀ ಎಂದರೆ ಅಷ್ಟೇಸಾಕೆ" ಮಹಿಳೆಯರಿಗೆ ಇದಕ್ಕಿಂತಾ ಬೇರೆ ಹೋಲಿಕೆ ಬೇಕಾಗಿಲ್ಲ ಎನ್ನಿಸುತ್ತದೆ ಎಂದರು.

ಇದೇ ವೇಳೆ ಅನೇಕ ವರ್ಷ ಗಳಿಂದ ರಾಷ್ಟ್ರೋತ್ತಾನ ಶಾಲೆಯಲ್ಲಿ ಆಯಾ ಕೆಲಸ ಮಾಡಿ ನಿವೃತ್ತಿ ಹೊಂದಿರುವ ಮಂಗಳಮ್ಮ, ಪೌರಾಕಾರ್ಮಿಕರಾದ ಸುಂಕಮ್ಮ, ಅಂಗನವಾಡಿ ಕಾರ್ಯಕರ್ತೆ ಮಹೇಶ್ವರಿ, ಗೀತಾ, ಆಶಾ ಕಾರ್ಯಕರ್ತೆ ಮುದ್ದಕ್ಕ, 50 ವರ್ಷಗಳಿಂದ ಟೈಲರಿಂಗ್ ಮಾಡುತ್ತಾ ಕಾಯಕವೇ ಕೈಲಾಸವೆನ್ನುತ್ತಿರುವ ಟಿ.ಬಾನು ಬೀ ಯವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಅಮ್ಮ ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಆಶಿಯಾ ಬೇಗಂ, ನಿರ್ದೇಶಕರು ಹಾಗೂ ಪುರಸಭೆ ಸದಸ್ಯೆ ರೇಷ್ಮಾ, ನಿರ್ದೇಶಕಿ ನಜ್ಮಾ, ರೇಣುಕಾ, ಬಿ.ಮಾಲನ್, ಗಿರಿಜಾ, ಯಶೋದಾ, ಸುಧಾ, ಲಕ್ಷ್ಮಿ, ಹುಲಿಗೆಮ್ಮ, ಜ್ಯೋತಿ, ಫಾತಿಮ, ವಸಂತಮ್ಮ ಮತ್ತಿರರು ಇದ್ದರು.

## ಶ್ರೀ ಮುನೇಶ್ವರ ದೇವಾಲಯದ ಅಭಿವೃದ್ಧಿಗೆ ಹೂಡಿ ವಿಜಯ್ ಕುಮಾರ್‌ರಿಂದ 2 ಲಕ್ಷ ರೂ. ದೇಣಿಗೆ



ಮಾಲೂರು

ತಾಲ್ಲೂಕಿನ ಹುಂಗೇನಹಳ್ಳಿ ಗ್ರಾಮದ ಶ್ರೀ ಮುನೇಶ್ವರ ದೇವಾಲಯದ ಪುನರ್ನಿರ್ಮಾಣ ಹಾಗೂ ಅಭಿವೃದ್ಧಿ ಕಾರ್ಯಕ್ಕೆ ಸಮಾಜ ಸೇವಕ ಹಾಗೂ ಜೆಡಿಎಸ್ ಮುಖಂಡ ಹೂಡಿ ವಿಜಯ್ ಕುಮಾರ್ ಅವರು ಆರ್ಥಿಕ ನೆರವಿನ ಹಸ್ತ ಚಾಚಿದ್ದಾರೆ.

ಗ್ರಾಮಸ್ಥರು ಹೂಡಿ ವಿಜಯ್ ಕುಮಾರ್ ಅವರ ನಿವಾಸಕ್ಕೆ ಭೇಟಿ ನೀಡಿ ದೇವಾಲಯದ ಅಭಿವೃದ್ಧಿ ಕುರಿತು ಚರ್ಚಿಸಿದಾಗ, ಅವರ ಮನವಿಗೆ ತಕ್ಷಣ ಸ್ಪಂದಿಸಿದ ವಿಜಯ್ ಕುಮಾರ್ ಅವರು ಒಟ್ಟು 2 ಲಕ್ಷ ರೂಪಾಯಿ ಧನ ಸಹಾಯ ಮಾಡುವುದಾಗಿ ಘೋಷಿಸಿದರು.

ಘೋಷಿಸಿದ ಮೊತ್ತದಲ್ಲಿ ಮೊದಲ ಕಂತಾಗಿ 1 ಲಕ್ಷ ರೂಪಾಯಿ ನಗದನ್ನು ಸ್ಥಳದಲ್ಲೇ ಗ್ರಾಮಸ್ಥರಿಗೆ ಹಸ್ತಾಂತರಿಸಿದರು. ಉಳಿದ 1 ಲಕ್ಷ ರೂಪಾಯಿಯನ್ನು ದೇವಾಲಯದ ಕೆಲಸ ಕಾರ್ಯಗಳು ಪ್ರಗತಿಯಲ್ಲಿದ್ದಾಗ ಮುಂದಿನ ದಿನಗಳಲ್ಲಿ ನೀಡುವುದಾಗಿ ಭರವಸೆ ನೀಡಿದರು. ವಿಜಯ್ ಕುಮಾರ್ ಅವರ ಈ ಉದಾರ ಮನೋಭಾವಕ್ಕೆ ಹುಂಗೇನಹಳ್ಳಿ ಗ್ರಾಮಸ್ಥರು ತುಂಬು ಹೃದಯದ ಕೃತಜ್ಞತೆ ಸಲ್ಲಿಸಿದ್ದಾರೆ.

ಈ ಸಂದರ್ಭದಲ್ಲಿ ತಾಲ್ಲೂಕು ಜೆಡಿಎಸ್ ಅಧ್ಯಕ್ಷ ಬಲ್ಲಹಳ್ಳಿ ನಾರಾಯಣಸ್ವಾಮಿ, ಪ್ರಮುಖರಾದ ಶ್ರೀನಾಥ್, ಎ.ಎಲ್.ಕೆ ಕುಟ್ಟಿ, ಮುನೇಂದ್ರಪ್ಪ, ದೊರೆಸ್ವಾಮಿಗೌಡ, ಗೌತಮ್, ಕೃಷ್ಣಪ್ಪ, ಎಸ್.ಬಿ.ಟಿ ಮಂಜುನಾಥ್, ಒಬೆಲ್ ಸುರೇಶ್, ಪುರುಷೋತಮ್, ಕೆ.ಪಿ ರಂಜಿತ್, ಯುವಕರು ಹಾಜರಿದ್ದರು.

ಭಾರತ ಸಾರಥಿ
03/04/2026
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಮತ್ತೆ 'ಸೌದೆ ಯುಗ': ಗ್ಯಾಸ್ ಬೆಲೆ ಏರಿಕೆಗೆ ಗ್ರಾಹಕರು ಹೈರಾಣ!



ಬಂಗಾರಪೇಟೆ

ಬದಲಾದ ಕಾಲಘಟ್ಟದಲ್ಲಿ ಅಡುಗೆ ಮನೆಯಿಂದ ಮರೆಯಾಗಿದ್ದ ಸೌದೆ ಒಲೆಗಳು ಈಗ ಅನಿವಾರ್ಯವಾಗಿ ಬಂಗಾರಪೇಟೆಯ ಹೋಟೆಲ್‌ಗಳಿಗೆ ಮರಳಿವೆ. ವಾಣಿಜ್ಯ ಗ್ಯಾಸ್ ಸಿಲಿಂಡರ್‌ಗಳ ತೀವ್ರ ಅಭಾವ, ಪೂರೈಕೆ ವಿಳಂಬ ಹಾಗೂ ಜಾಗತಿಕ ಯುದ್ಧದ ಪರಿಣಾಮವಾಗಿ ಗಗನಕ್ಕೇರಿರುವ ದರದಿಂದಾಗಿ ಹೋಟೆಲ್ ಮಾಲೀಕರು ಮತ್ತೆ ಹಳೆಯ ಸೌದೆ ಒಲೆಗಳ ಮೊರೆ ಹೋಗಿದ್ದಾರೆ. ಈ ಬದಲಾವಣೆಯು ನೇರವಾಗಿ ಗ್ರಾಹಕರ ಜೇಬಿನ ಮೇಲೆ ಬಿಸಿಯುಂಟು ಮಾಡಿದೆ.

ಒಂದು ಕಾಲದಲ್ಲಿ ಸೌದೆ ಒಲೆ ಬಿಟ್ಟು ಸೀಮೆಎಣ್ಣೆ, ನಂತರ ಗ್ಯಾಸ್ ಯುಗಕ್ಕೆ ಕಾಲಿಟ್ಟಿದ್ದ ಹೋಟೆಲ್ ಉದ್ಯಮ ಈಗ ಮತ್ತೆ ಇತಿಹಾಸದತ್ತ ಮರಳಿದೆ. ವಾಣಿಜ್ಯ ಗ್ಯಾಸ್ ಸಿಲಿಂಡರ್ ದರ ಕೈಗೆಟುಕದ ಮಟ್ಟಕ್ಕೆ ಏರಿರುವುದು ಮತ್ತು ಸಮಯಕ್ಕೆ ಸರಿಯಾಗಿ ಸಿಲಿಂಡರ್ ಸಿಗದಿರುವುದು ಮಾಲೀಕರನ್ನು ಅತಂತ್ರ ಸ್ಥಿತಿಗೆ ತಳ್ಳಿದೆ. ಅನಿವಾರ್ಯವಾಗಿ ಸೌದೆ ಒಲೆ ಹಚ್ಚುತ್ತಿರುವ ಮಾಲೀಕರಿಗೆ ಹೊಗೆಯಿಂದ ಆರೋಗ್ಯ ಸಮಸ್ಯೆ, ಹೆಚ್ಚಿನ ಶ್ರಮ ಮತ್ತು ಕಾರ್ಮಿಕ ವೆಚ್ಚದ ಹೊರೆ ಬೀಳುತ್ತಿದೆ.

ಗ್ರಾಹಕರಿಗೆ ಬೆಲೆ ಏರಿಕೆಯ ಬಿಸಿ: ಹೋಟೆಲ್ ನಿರ್ವಹಣಾ ವೆಚ್ಚ ಹೆಚ್ಚಾದ ಹಿನ್ನೆಲೆಯಲ್ಲಿ ಆಹಾರ ಪದಾರ್ಥಗಳ ಬೆಲೆಯನ್ನು ಏರಿಕೆ ಮಾಡಲಾಗಿದೆ.

ಟೀ–ಕಾಫಿ: ಈ ಹಿಂದೆ 10 ರೂ. ಗೆ ಸಿಗುತ್ತಿದ್ದ ಒಂದು ಕಪ್ ಟೀ ಈಗ 13 ರಿಂದ 15 ರೂ. ಗೆ ಏರಿಕೆಯಾಗಿದೆ.

ತಿಂಡಿ–ತಿನಿಸು: ದೋಸೆ, ಇಡ್ಲಿ ಸೇರಿದಂತೆ ಎಲ್ಲಾ ತಿಂಡಿಗಳ ದರದಲ್ಲೂ 5 ರಿಂದ 10 ರೂ. ಹೆಚ್ಚಳವಾಗಿದೆ.

ದಿನಗೂಲಿ ಕಾರ್ಮಿಕರು, ವಿದ್ಯಾರ್ಥಿಗಳು ಮತ್ತು ಕಚೇರಿ ನೌಕರರಿಗೆ ಈ ಬೆಲೆ ಏರಿಕೆ ನುಂಗಲಾರದ ತುತ್ತಾಗಿ ಪರಿಣಮಿಸಿದೆ. ದಿನನಿತ್ಯದ ಈ ಸಣ್ಣ ದರ ಏರಿಕೆಯು ತಿಂಗಳ ಅಂತ್ಯಕ್ಕೆ ಮಧ್ಯಮ ವರ್ಗದ ಕುಟುಂಬಗಳ ಬಜೆಟ್ ಮೇಲೆ ದೊಡ್ಡ ಪರಿಣಾಮ ಬೀರುತ್ತಿದೆ.

ಕಾಲದ ವ್ಯಂಗ್ಯ ಮತ್ತು ಅನಿವಾರ್ಯತೆ: "ಇದು ಕೇವಲ ಅಡುಗೆ ವಿಧಾನದ ಬದಲಾವಣೆಯಲ್ಲ, ನಮ್ಮ ಬದುಕಿನ ವ್ಯವಸ್ಥೆಯ ವ್ಯಂಗ್ಯ" ಎಂದು ನಾಗರಿಕರು ಅಭಿಪ್ರಾಯಪಡುತ್ತಿದ್ದಾರೆ. ಆಧುನಿಕತೆಯತ್ತ ಸಾಗಿದ್ದ ನಾವು ಮತ್ತೆ ಸೌದೆ ಒಲೆಗೆ ಮರಳಿರುವುದು ಜಾಗತಿಕ ಬಿಕ್ಕಟ್ಟುಗಳು ಸ್ಥಳೀಯ ಬದುಕನ್ನು ಹೇಗೆ ತಲ್ಲಣಗೊಳಿಸುತ್ತವೆ ಎಂಬುದಕ್ಕೆ ಸಾಕ್ಷಿಯಾಗಿದೆ. ಹೋಟೆಲ್ ಒಲೆಯಲ್ಲಿ ಏರುತ್ತಿರುವ ಸೌದೆಯ ಹೊಗೆಯ ಕಾವು ಈಗ ಸಾಮಾನ್ಯ ಜನರ ಜೇಬಿಗೂ ತಟ್ಟುತ್ತಿದೆ.

ವರದಿಯ ಮುಖ್ಯಾಂಶಗಳು:

ಸಿಲಿಂಡರ್ ಬಿಕ್ಕಟ್ಟು: ವಾಣಿಜ್ಯ ಗ್ಯಾಸ್ ಪೂರೈಕೆಯಲ್ಲಿ ವ್ಯತ್ಯಯ ಮತ್ತು ದರ ಏರಿಕೆ.

ಸೌದೆ ಒಲೆ ಅನಿವಾರ್ಯ: ಗ್ಯಾಸ್ ಲಭ್ಯವಿಲ್ಲದ ಕಾರಣ ಹಳೆಯ ಪದ್ಧತಿಗೆ ಶರಣಾದ ಮಾಲೀಕರು.

ಬೆಲೆ ಏರಿಕೆ: ಟೀ, ಕಾಫಿ ಮತ್ತು ತಿಂಡಿಗಳ ದರದಲ್ಲಿ ಶೇ. 30 ರಿಂದ 50ರಷ್ಟು ಹೆಚ್ಚಳ.

ಸಾಮಾನ್ಯರ ಸಂಕಷ್ಟ: ಕಾರ್ಮಿಕರು ಮತ್ತು ಮಧ್ಯಮ ವರ್ಗದವರ ಮೇಲೆ ಆರ್ಥಿಕ ಹೊರೆ.

# ಗಂಗಮ್ಮ ದೇವಿಗೆ ವಿಶೇಷ ಪೂಜೆ

ಮುಳಬಾಗಿಲು

ತಾಲೂಕಿನ ಅಂಗೊಂಡಹಳ್ಳಿ ಪಂಚಾಯಿತಿ ವ್ಯಾಪ್ತಿಯ ಯಡಹಳ್ಳಿ ಗ್ರಾಮದಲ್ಲಿ ಯುಗಾದಿ ನಂತರದ ಮೊದಲ ಹುಣ್ಣಿಮೆಯ ಅಂಗವಾಗಿ ಗ್ರಾಮದೇವತೆಗಳ ದೀಪೋತ್ಸವ ಹಾಗೂ ಊರ ಹಬ್ಬವು ಅತ್ಯಂತ ಸಡಗರ–ಸಂಭ್ರಮದಿಂದ ಜರುಗಿತು. ಗ್ರಾಮದ ಎಲ್ಲಾ ಜಾತಿ–ಜನಾಂಗದವರು ಒಂದಾಗಿ ಸೋದರತ್ವದ ಭಾವನೆಯಿಂದ ಈ ಸಾಂಪ್ರದಾಯಿಕ ಹಬ್ಬವನ್ನು ಆಚರಿಸಿದರು.

ಗ್ರಾಮದ ಪ್ರಮುಖ ದೇವತೆಗಳಾದ ಗಂಗಮ್ಮ, ರಣಬೇರಮ್ಮ, ಕಾಟೇರಮ್ಮ, ಹಸಿರು ಗಂಗಮ್ಮ ಮತ್ತು ಮಾರಮ್ಮ ದೇವಿಯರಿಗೆ ಗ್ರಾಮಸ್ಥರು ಶ್ರದ್ಧಾಭಕ್ತಿಯಿಂದ ತಂಬಿಟ್ಟು ದೀಪಗಳನ್ನು ಸಲ್ಲಿಸಿ ದೇವರ ಕೃಪೆಗೆ ಪಾತ್ರರಾದರು. ಈ ಸಂದರ್ಭದಲ್ಲಿ ಗ್ರಾಮದ ಪ್ರತಿ ಮನೆಯಿಂದಲೂ ಮಹಿಳೆಯರು ದೀಪಗಳೊಂದಿಗೆ ಮೆರವಣಿಗೆಯಲ್ಲಿ ಸಾಗಿ ದೇವಸ್ಥಾನಗಳಲ್ಲಿ ವಿಶೇಷ ಪೂಜೆ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿ ಗಂಗಮ್ಮ ದೇವಿಗೆ ವಿಶೇಷ ಪೂಜೆ ಸಲ್ಲಿಸಿದ ಜೆಡಿಎಸ್ ಮುಖಂಡ ಯಡಹಳ್ಳಿ ವೈ.ಕೆ. ಸೋಮಶೇಖರ್ ಮಾತನಾಡಿ, "ನಮ್ಮ ಗ್ರಾಮದೇವತೆಗಳ ಆಶೀರ್ವಾದದಿಂದ ತಾಲೂಕಿನಲ್ಲಿ ಉತ್ತಮ ಮಳೆ–ಬೆಳೆಯಾಗಲಿ. ಜನರು ಸುಖ, ಶಾಂತಿ ಮತ್ತು ನೆಮ್ಮದಿಯಿಂದ ಬದುಕುವಂತಾಗಲಿ ಎಂದು ದೇವರಲ್ಲಿ ಪ್ರಾರ್ಥಿಸಿದ್ದೇನೆ. ನಮ್ಮ ಗ್ರಾಮದಲ್ಲಿ ಎಲ್ಲರೂ ಅಣ್ಣ–ತಮ್ಮಂದಿರಂತೆ ಒಟ್ಟಾಗಿ ಹಬ್ಬ ಆಚರಿಸುತ್ತಿರುವುದು ಹೆಮ್ಮೆಯ ವಿಷಯ" ಎಂದರು. ಹಬ್ಬದ ಅಂಗವಾಗಿ ಸೋಮಶೇಖರ್ ಅವರು ಗಣ್ಯರಿಗೆ ಹಾಗೂ ಗ್ರಾಮಸ್ಥರಿಗೆ ಮಾಂಸದೂಟದ ವ್ಯವಸ್ಥೆ ಮಾಡಿದ್ದರು.

ಈ ಧಾರ್ಮಿಕ ಕಾರ್ಯಕ್ರಮದಲ್ಲಿ ಡಿಸಿಸಿ ಬ್ಯಾಂಕ್ ನಿರ್ದೇಶಕ ನಲ್ಲೂರು ರಘುಪತಿ ರೆಡ್ಡಿ, ಮುಖಂಡರಾದ ಅಂಗೊಂಡಹಳ್ಳಿ ಮುನಿಸ್ವಾಮಿ ಗೌಡ, ಬಂಡಹಳ್ಳಿ ಲಕ್ಷ್ಮೀನಾರಾಯಣ, ಚನ್ನಾಪುರ ಕೋದಂಡರಾಮ್, ಗೋಪಸಂದ್ರ ಹರೀಶ್ ಗೌಡ, ವಾಲ್ಮೀಕಿ ಸಂಘದ ವೆಂಕಟೇಶ್, ಪುಣ್ಯಹಳ್ಳಿ ಶಂಕರ್ ಸೇರಿದಂತೆ ಗ್ರಾಮದ ಹಿರಿಯರು ಮತ್ತು ನೂರಾರು ಸಾರ್ವಜನಿಕರು ಭಾಗವಹಿಸಿದ್ದರು.



# ಮಹಿಳಾ ಸಾಧನೆಗೆ ಅಂಬೇಡ್ಕರ್ ನೀಡಿದ ಸಂವಿಧಾನವೇ ಬುನಾದಿ: ಚೇತನ್



ಕೊರಟಗೆರೆ

"ಇಂದು ಮಹಿಳೆಯರು ಎಲ್ಲಾ ರಂಗಗಳಲ್ಲೂ ಪುರುಷರಿಗೆ ಸಮನಾಗಿ ಸಾಧನೆ ಮಾಡುತ್ತಿರುವುದಕ್ಕೆ ಡಾ. ಬಿ.ಆರ್. ಅಂಬೇಡ್ಕರ್ ಅವರು ದೇಶಕ್ಕೆ ನೀಡಿದ ಸಂವಿಧಾನವೇ ಮೂಲ ಕಾರಣ ಎಂಬುದನ್ನು ಯಾರೂ ಮರೆಯಬಾರದು" ಎಂದು ಸಮಾಜ ಸೇವಕ ಚೇತನ್ ದಾಸರಹಳ್ಳಿ ತಿಳಿಸಿದರು.

ತಾಲೂಕಿನ ಹೊಳವನಹಳ್ಳಿ ಗ್ರಾಮದ ಅಂಬೇಡ್ಕರ್ ನಗರದ ಮುಖ್ಯ ರಸ್ತೆಯಲ್ಲಿ ಮಹಿಳೆಯರಿಗಾಗಿ ಆಯೋಜಿಸಿದ್ದ ವಿಶೇಷ ರಂಗೋಲಿ ಸ್ಪರ್ಧೆಯ ವಿಜೇತರಿಗೆ ಬಹುಮಾನ ವಿತರಿಸಿ ಅವರು ಮಾತನಾಡಿದರು.

"ಮನೆಯ ಕೆಲಸಕ್ಕೆ ಸೀಮಿತವಾಗಿದ್ದ ಹೆಣ್ಣುಮಕ್ಕಳು ಇಂದು ವಿಮಾನ ಚಾಲನೆ ಹಾಗೂ ಬಾಹ್ಯಾಕಾಶಕ್ಕೂ ಹೋಗಿ ಬರುತ್ತಿದ್ದಾರೆ. ಇಂತಹ ಸಮಾನತೆಯ ಹಕ್ಕನ್ನು ಕೊಟ್ಟ ಬಾಬಾ ಸಾಹೇಬರನ್ನು ಮಹಿಳೆಯರು ಪ್ರತಿದಿನ ಸ್ಮರಿಸಬೇಕು. ಪೋಷಕರು ತಮ್ಮ ಹೆಣ್ಣುಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಿ, ಅವರ ಭವಿಷ್ಯ ರೂಪಿಸಲು ಶ್ರಮಿಸಬೇಕು" ಎಂದು ಅವರು ಕರೆ ನೀಡಿದರು.

ಮಾಜಿ ತಾಪಂ ಅಧ್ಯಕ್ಷ ಎಲ್.ವಿ. ಪ್ರಕಾಶ್ ಮಾತನಾಡಿ, "ಇಂದಿನ ಶಿಕ್ಷಣ ಕ್ಷೇತ್ರದಲ್ಲಿ ಹೆಣ್ಣುಮಕ್ಕಳೇ ಅತಿ ಹೆಚ್ಚು ಅಂಕ ಗಳಿಸಿ ಸಾಧನೆ ಮಾಡುತ್ತಿದ್ದಾರೆ. ಗ್ರಾಮೀಣ ಭಾಗದ ಪೋಷಕರು ಎಷ್ಟೇ ಕಷ್ಟವಿದ್ದರೂ ಸರ್ಕಾರದ ಯೋಜನೆಗಳನ್ನು ಬಳಸಿಕೊಂಡು ಮಕ್ಕಳನ್ನು ಉನ್ನತ ಸ್ಥಾನಕ್ಕೇರಿಸಬೇಕು" ಎಂದರು.

ಸರ್ಕಾರಿ ಶಾಲೆಯ ಶಿಕ್ಷಕಿ ಸೌಭಾಗ್ಯಮ್ಮ ಮಾತನಾಡಿ, "ಮಹಿಳೆಯರು ಸಾರ್ವಜನಿಕ ಸ್ಪರ್ಧೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು. ಸೋಲು–ಗೆಲುವನ್ನು ಸಮನಾಗಿ ಸ್ವೀಕರಿಸಿ ಪೈಪೋಟಿ ನೀಡುವ ಗುಣ ಬೆಳೆಸಿಕೊಳ್ಳಬೇಕು" ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ಪಬ್ಲಿಕ್ ಶಾಲೆಯ ಮುಖ್ಯ ಶಿಕ್ಷಕ ಲಾಲ ನಾಯ್ಕ್, ಶಿಕ್ಷಕ ಪ್ರಶಾಂತ್, ಗ್ರಾಪಂ ಮಾಜಿ ಸದಸ್ಯ ಮರುಡಪ್ಪ, ಮುಖಂಡರಾದ ಸಣ್ಣಪ್ಪ, ಹನುಮಂತರಾಯಪ್ಪ, ನರಸಿಂಹಮೂರ್ತಿ, ರೇಣುಕಾಪ್ರಸಾದ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ರಸ್ತೆಗಾಗಿ ಹಠ ಹಿಡಿದ ರೈತರು, ಅಡ್ಡಿಪಡಿಸಿದ ಮಾಲೀಕರು



ಮಧುಗಿರಿ

ತಾಲೂಕಿನ ಐಡಿಹಳ್ಳಿ ಹೋಬಳಿಯ ಹೂವಿನಹಳ್ಳಿ ಗ್ರಾಮದಲ್ಲಿ ಜಮೀನುಗಳಿಗೆ ಸಂಪರ್ಕ ಕಲ್ಪಿಸುವ 'ನಕಾಶೆ ದಾರಿ'ಯ ವಿಚಾರವಾಗಿ ಎರಡು ರೈತ ಕುಟುಂಬಗಳ ನಡುವೆ ಸಂಘರ್ಷ ಉಂಟಾಗಿದ್ದು, ಅಧಿಕಾರಿಗಳ ಸಮ್ಮುಖದಲ್ಲೇ ಸರ್ವೆ ಕಾರ್ಯಕ್ಕೆ ಅಡ್ಡಿಪಡಿಸಿದ ಘಟನೆ ನಡೆದಿದೆ.

ಗ್ರಾಮದ ಸ.ನಂ. 27, 25, 26 ಸೇರಿದಂತೆ ವಿವಿಧ ಜಮೀನುಗಳಿಗೆ ಹೋಗಲು ಸರಿಯಾದ ರಸ್ತೆ ಸಂಪರ್ಕವಿಲ್ಲದೆ ರೈತರು ಪರದಾಡುತ್ತಿದ್ದಾರೆ. ಇದೇ ನಕಾಶೆ ರಸ್ತೆಯು ಮುರಾರ್ಜಿ ದೇಸಾಯಿ ವಸತಿ ಶಾಲೆಗೂ ಸಂಪರ್ಕ ಕಲ್ಪಿಸುತ್ತದೆ. ಹೀಗಾಗಿ, ಇಲ್ಲಿರುವ ನಕಾಶೆ ರಸ್ತೆಯನ್ನು ತೆರವುಗೊಳಿಸಿ ಸಾರ್ವಜನಿಕ ಸಂಚಾರಕ್ಕೆ ಅನುವು ಮಾಡಿಕೊಡಬೇಕು ಎಂದು ಸ್ಥಳೀಯ ರೈತರು ಕಂದಾಯ ಇಲಾಖೆಗೆ ಮನವಿ ಮಾಡಿದ್ದರು.

ರೈತರ ಮನವಿಯ ಮೇರೆಗೆ ಕಂದಾಯ ಇಲಾಖೆಯ ರಾಜಸ್ವ ನಿರೀಕ್ಷಕರು (ಖಖ) ಮತ್ತು ಸರ್ವೆ ಸಿಬ್ಬಂದಿ ಸ್ಥಳಕ್ಕೆ ಭೇಟಿ ನೀಡಿ ಅಳತೆ ಕಾರ್ಯಕ್ಕೆ ಮುಂದಾದರು. ಈ ವೇಳೆ ಸ.ನಂ. 28ರ ಜಮೀನು ಮಾಲೀಕ ಕದುರಪ್ಪನವರ ಕುಟುಂಬದವರು ಸ್ಥಳಕ್ಕೆ ಧಾವಿಸಿ ಸರ್ವೆ ಕಾರ್ಯಕ್ಕೆ ತಡೆಯೊಡ್ಡಿದರು. ಇದರಿಂದಾಗಿ ಸ್ಥಳದಲ್ಲಿ ಕೆಲಕಾಲ ರೈತರ ನಡುವೆ ಮಾತಿನ ಚಕಮಕಿ ನಡೆದು ಗೊಂದಲ ನಿರ್ಮಾಣವಾಯಿತು. ದಾರಿ ಕೇಳುತ್ತಿರುವ ರೈತರ ವಾದ: ವಕೀಲ ತಿಮ್ಮರಾಜು ಮಾತನಾಡಿ, "ಈ ಜಮೀನುಗಳಿಗೆ ನಕಾಶೆ ದಾರಿಯೇ ಕಾನೂನುಬದ್ಧವಾಗಿದೆ. ಸದ್ಯ ಇರುವ ದಾರಿಯು ಸರ್ಕಾರಿ ಹಳ್ಳವಾಗಿದ್ದು, ಮಳೆಗಾಲದಲ್ಲಿ ಸಂಚಾರಕ್ಕೆ ತೊಂದರೆಯಾಗುತ್ತದೆ. ಕದುರಪ್ಪನವರ ಕುಟುಂಬದವರು ಬೇಕೆಂದೇ ಅಡ್ಡಿಪಡಿಸುತ್ತಿದ್ದಾರೆ" ಎಂದು ದೂರಿದರು. ಜಮೀನು ಮಾಲೀಕರ ವಾದ: ಕದುರಪ್ಪನವರ ಕುಟುಂಬದ ರಾಜೇಶ್ವರಿ ಮಾತನಾಡಿ, "ನಮಗೆ ಸರ್ವೆ ಬಗ್ಗೆ ಸರಿಯಾದ ನೋಟಿಸ್ ನೀಡಿಲ್ಲ. ಈಗಾಗಲೇ ರಸ್ತೆಗಾಗಿ ನಾವು 10 ಹುಣಸೆ ಮರಗಳನ್ನು ಕಳೆದುಕೊಂಡಿದ್ದೇವೆ. ನಮ್ಮ ಒಂದೇ ಜಮೀನಿನಲ್ಲಿ ಮೂರು ಕಡೆ ರಸ್ತೆ ಬಿಡಲು ಸಾಧ್ಯವಿಲ್ಲ. ನಕಾಶೆ ರಸ್ತೆ ಎಲ್ಲಿದೆಯೋ ಅಲ್ಲಿ ಮಾಡಿಕೊಳ್ಳಲು ನಮ್ಮ ತಕರಾರಿಲ್ಲ, ಆದರೆ ಹಠ ಹಿಡಿದು ಜಮೀನಿನ ಮಧ್ಯೆ ರಸ್ತೆ ಕೇಳುವುದು ಸರಿಯಲ್ಲ" ಎಂದು ಸ್ಪಷ್ಟಪಡಿಸಿದರು.

# ಕಳವು ಪ್ರಕರಣ: ಮೂವರು ಆರೋಪಿಗಳ ಬಂಧನ, ಮಾಲು ವಶ

ಕೆಜಿಎಫ್

ತಾಲೂಕಿನ ವಿವೇಕಾನಂದ ನಗರದಲ್ಲಿ ಸಂಭವಿಸಿದ್ದ ಭಾರಿ ಕಳವು ಪ್ರಕರಣವನ್ನು ಭೇದಿಸುವಲ್ಲಿ ಯಶಸ್ವಿಯಾಗಿರುವ ಬಂಗಾರಪೇಟೆ ಪೊಲೀಸರು, ಮೂವರು ಆರೋಪಿಗಳನ್ನು ಬಂಧಿಸಿ ಅವರಿಂದ ಲಕ್ಷಾಂತರ ರೂಪಾಯಿ ಮೌಲ್ಯದ ಚಿನ್ನ ಮತ್ತು ಬೆಳ್ಳಿ ಆಭರಣಗಳನ್ನು ವಶಪಡಿಸಿಕೊಂಡಿದ್ದಾರೆ.

ಬಂಗಾರಪೇಟೆಯ ವಿವೇಕಾನಂದ ನಗರದ ನಿವಾಸಿ ಗೋವಿಂದಪ್ಪ ಅವರು ಫೆಬ್ರವರಿ 12 ರಿಂದ 17 ರವರೆಗೆ ಮನೆಯಲ್ಲಿ ಇಲ್ಲದ ಸಮಯ ಸಾಧಿಸಿದ ಕಳ್ಳರು, ಬೀಗ ಮುರಿದು ಒಳನುಗ್ಗಿದ್ದರು. ಮನೆಯಲ್ಲಿದ್ದ 45.5 ಗ್ರಾಂ ಚಿನ್ನ, 1,100 ಗ್ರಾಂ ಬೆಳ್ಳಿ ಮತ್ತು ರೂ. 20,000 ನಗದನ್ನು ದೋಚಿದ್ದರು. ಈ ಸಂಬಂಧ ಬಂಗಾರಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಪೊಲೀಸರ ಮಿಂಚಿನ ಕಾರ್ಯಾಚರಣೆ: ಪ್ರಕರಣದ ಗಾಂಭೀರ್ಯ ಅರಿತ ಡಿವೈಎಸ್ಪಿ ವಿ. ಲಕ್ಷ್ಮಯ್ಯ ಅವರ ಮಾರ್ಗದರ್ಶನದಲ್ಲಿ ಇನ್ಸ್‌ಪೆಕ್ಟರ್ ರವಿಕುಮಾರ್ ನೇತೃತ್ವದ ವಿಶೇಷ ತಂಡ ಕಾರ್ಯಾಚರಣೆಗೆ ಇಳಿಯಿತು. ತಾಂತ್ರಿಕ ಮಾಹಿತಿ ಮತ್ತು ಖಚಿತ ಸುಳಿವಿನ ಮೇರೆಗೆ ಇಬ್ಬರು ಪ್ರಮುಖ ಆರೋಪಿಗಳನ್ನು ದಸ್ತಗಿರಿ ಮಾಡಲಾಯಿತು.



ಕನಕರಾಜ್ @ ಕನಕ (23): ಎಳೇಸಂದ್ರ ಗ್ರಾಮ, ಮಾಲೂರು ತಾಲೂಕು.

ಕ್ಸೇವಿಯರ್ @ ಅಪ್ಪಕುಟ್ಟಿ (22): ಆಂಡ್ರಸನ್ ಪೇಟೆ, ಕೆಜಿಎಫ್.

ವಿಚಾರಣೆ ವೇಳೆ ಇವರು ಕಳವು ಮಾಡಿರುವುದನ್ನು ಒಪ್ಪಿಕೊಂಡಿದ್ದಲ್ಲದೆ, ಈ ಮಾಲನ್ನು ಕೆಜಿಎಫ್‌ನ ರಾಬರ್ಟ್‌ಸನ್ ಪೇಟೆಯ ಲೋಕೇಶ್ @ ಬುಜ್ಜು (21) ಎಂಬಾತನಿಗೆ ಮಾರಾಟ ಮಾಡಿರುವುದಾಗಿ ತಿಳಿಸಿದ್ದರು. ತಕ್ಷಣ ಕಾರ್ಯಪ್ರವೃತ್ತರಾದ ಪೊಲೀಸರು ಮಾರ್ಚ್ 31ರಂದು ಲೋಕೇಶನನ್ನು ಬಂಧಿಸಿ ಆತನ ಬಳಿಯಿದ್ದ ಮಾಲನ್ನು ವಶಪಡಿಸಿಕೊಂಡಿದ್ದಾರೆ.

ವಶಪಡಿಸಿಕೊಂಡ ಸೊತ್ತುಗಳು:

ಚಿನ್ನ: 45.5 ಗ್ರಾಂ (ನೆಕ್ಲೇಸ್, ಕಿವಿ ಓಲೆಗಳು, ಉಂಗುರ).

ಬೆಳ್ಳಿ: 1,100 ಗ್ರಾಂ (ದೀಪದ ಕಂಬಗಳು, ಬೆಳ್ಳಿ ಚೊಂಬು, ಲಕ್ಷ್ಮೀ ಮುಖವಾಡ, ಬೆಳ್ಳಿ ಹಸುವಿನ ವಿಗ್ರಹ).

ಒಟ್ಟು ಮೌಲ್ಯ: ಸುಮಾರು ರೂ. 3,70,000/–

ಆರೋಪಿಗಳನ್ನು ಬಂಧಿಸಿ ಮಾಲು ವಶಪಡಿಸಿಕೊಳ್ಳುವಲ್ಲಿ ಯಶಸ್ವಿಯಾದ ಇನ್ಸ್‌ಪೆಕ್ಟರ್ ರವಿಕುಮಾರ್ ಹಾಗೂ ಸಿಬ್ಬಂದಿಗಳಾದ ವೇಣುಗೋಪಾಲ್, ವಿಜಯ್‌ಕುಮಾರ್, ಅನಿಲ್ ಕುಮಾರ್, ಮಂಜುನಾಥ್, ಶ್ರೀನಿವಾಸ ಮತ್ತು ಮುನೇಂದ್ರ ಅವರ ತಂಡವನ್ನು ಕೆಜಿಎಫ್ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶಿವಾಂಶು ರಜಪೂತ್ ಅವರು ಮುಕ್ತಕಂಠದಿಂದ ಶ್ಲಾಘಿಸಿದ್ದಾರೆ.

# ದೊಡ್ಡೇನಹಳ್ಳಿಯಲ್ಲಿ ಕೃಷ್ಣದೇವರಾಯರ ಕಾಲದ ಶಾಸನ ಪತ್ತೆ

ವೈ.ಎನ್.ಹೊಸಕೋಟೆ

ಪಾವಗಡ ತಾಲೂಕಿನ ವೈ.ಎನ್.ಹೊಸಕೋಟೆ ಹೋಬಳಿಯ ದೊಡ್ಡೇನಹಳ್ಳಿ ಗ್ರಾಮದಲ್ಲಿ ವಿಜಯನಗರ ಸಾಮ್ರಾಜ್ಯದ ಚಕ್ರವರ್ತಿ ಶ್ರೀಕೃಷ್ಣದೇವರಾಯರ ಕಾಲಕ್ಕೆ ಸೇರಿದ ಎರಡು ಪ್ರಮುಖ ಶಿಲಾ ಶಾಸನಗಳನ್ನು ಸಂಶೋಧಕ ಹೊ.ಮ. ನಾಗರಾಜು ಸೋಮವಾರ ಪತ್ತೆಹಚ್ಚಿದ್ದಾರೆ.

ಗ್ರಾಮದ ಹೊರವಲಯದ 'ತಿರುಮಲ ದೇವರ ಗಡ್ಡೆ' ಎಂಬ ದಿಬ್ಬದ ಬಳಿ ಹೂತುಹೋಗಿದ್ದ ಎರಡು ಕಲ್ಲುಗಳನ್ನು ಜಮೀನಿನ ಮಾಲೀಕ ಆರ್.ಎಲ್. ನರಸಿಂಹಯ್ಯ ಮತ್ತು ನಿವೃತ್ತ ಅಧಿಕಾರಿ ಬಿ. ತಿಪ್ಪೇಸ್ವಾಮಿ ಅವರ ಸಹಕಾರದೊಂದಿಗೆ ಮೇಲೆತ್ತಿ ಪರಿಶೀಲಿಸಿದಾಗ, ಅವು ಅತ್ಯಮೂಲ್ಯ ಶಾಸನಗಳೆಂದು ದೃಢಪಟ್ಟಿವೆ. ಸಂಶೋಧಕರಾದ ಗುರುವೇಪಲ್ಲಿ ನರಸಿಂಹುಲು ಅವರ ನೆರವಿನೊಂದಿಗೆ ಈ ಶಾಸನಗಳನ್ನು ಓದುವ ಪ್ರಯತ್ನ ಮಾಡಲಾಗಿದೆ.



ಶಾಸನದ ವೈಶಿಷ್ಟ್ಯಗಳು:

ಭಾಷೆ ಮತ್ತು ಲಿಪಿ: ಈ ಶಾಸನವು ಸಂಪೂರ್ಣವಾಗಿ ಕನ್ನಡ ಭಾಷೆ ಮತ್ತು ಲಿಪಿಯಲ್ಲಿದೆ.

ವಿನ್ಯಾಸ: ಎರಡು ಪ್ರತ್ಯೇಕ ಗ್ರಾನೈಟ್ ಬಂಡೆಗಳ ಮೇಲೆ ಬರಹವಿದ್ದು, ಮೊದಲ ಕಲ್ಲಿನಲ್ಲಿ 26 ಸಾಲು ಹಾಗೂ ಎರಡನೇ ಕಲ್ಲಿನಲ್ಲಿ 21 ಸಾಲು ಸೇರಿ ಒಟ್ಟು 47 ಸಾಲುಗಳ ಸುದೀರ್ಘ ಬರಹವಿದೆ.



ಚಿಹ್ನೆಗಳು: ಶಾಸನದ ಮೇಲ್ಭಾಗದಲ್ಲಿ ಸೂರ್ಯ, ಚಂದ್ರ ಮತ್ತು ನಾಮಗಳ ಚಿತ್ರಗಳನ್ನು ಕೆತ್ತಲಾಗಿದೆ.

ಕಾಲ: ಶಾಸನದಲ್ಲಿ ಉಲ್ಲೇಖವಾಗಿರುವಂತೆ ಇದರ ಕಾಲ ಶಾಲಿವಾಹನ ಶಕೆ 1437 (ಯುವ ನಾಮ ಸಂವತ್ಸರ, ಭಾದ್ರಪದ ಶುಕ್ಲ 11, ಶುಕ್ರವಾರ).

ವಿಷಯ: ಇದು ವೈಷ್ಣವ ಸಂಪ್ರದಾಯದ ದಾನ ಶಾಸನವಾಗಿದ್ದು, ಕೃಷ್ಣದೇವರಾಯರು ಆಳುತ್ತಿದ್ದ ಕಾಲದಲ್ಲಿ ನಿಡುಗಲ್ಲಿನಲ್ಲಿ ಜಕ್ಕರಾಯರು ಆಳ್ವಿಕೆ ನಡೆಸುತ್ತಿದ್ದ ಬಗ್ಗೆ ಮಾಹಿತಿ ನೀಡುತ್ತದೆ.

ಮತ್ತೊಂದು ಹಳೆಯ ದೇವಾಲಯದ ಅವಶೇಷ? ಶಾಸನ ಪತ್ತೆಯಾದ 'ತಿರುಮಲ ದೇವರ ಗಡ್ಡೆ' ಎಂಬ ದಿಬ್ಬವು ಹಿಂದೆ ಅಸ್ತಿತ್ವದಲ್ಲಿದ್ದ ಒಂದು ದೇವಾಲಯದ ಅವಶೇಷವಾಗಿದೆ ಎಂದು ಗುರುತಿಸಲಾಗಿದೆ. ಇಲ್ಲಿ ಪೂರ್ವಾಭಿಮುಖವಾಗಿದ್ದ ದೇವಾಲಯದ ಕಂಬಗಳು, ಬಾಗಿಲುವಾಡಗಳು, ಪಾಣಿಪೀಠ, ತಳಪಾಯ ಮತ್ತು ವೀರಮಾಸ್ತಿಗಲ್ಲುಗಳು ಮಣ್ಣಿನ ಅಡಿಯಲ್ಲಿ ಪತ್ತೆಯಾಗಿವೆ. ಅಲ್ಲದೆ, ದೇವಾಲಯದ ಮುಂಭಾಗದಲ್ಲಿದ್ದ 'ಅರವಟ್ಟಿಗೆ' ಕಲ್ಲುಗಳ ಅವಶೇಷಗಳೂ ಇವೆ ಎಂದು ಸ್ಥಳೀಯ ಮುಖಂಡರು ಮಾಹಿತಿ ನೀಡಿದ್ದಾರೆ. ಶಾಸನದ ಅಂತ್ಯದಲ್ಲಿ ಕುತೂಹಲಕಾರಿ ಎಚ್ಚರಿಕೆಯೊಂದಿದೆ. ಈ ಶಾಸನವನ್ನು ಕೆಡಿಸಿದವರಿಗೆ ವಾರಣಾಸಿಯಲ್ಲಿ ಗೋಹತ್ಯೆ ಮತ್ತು ಪಿತೃ ಹತ್ಯೆಯ ಪಾಪ ಅಂಟಿಕೊಳ್ಳಲಿದೆ ಎಂಬ ಶಾಪಾಶಯದ ಸಾಲುಗಳೊಂದಿಗೆ ಬರಹ ಕೊನೆಗೊಳ್ಳುತ್ತದೆ. ಈ ಐತಿಹಾಸಿಕ ಪತ್ತೆಯ ಸಂದರ್ಭದಲ್ಲಿ ಗ್ರಾಮದ ಮುಖಂಡರಾದ ಬಿ. ಶಿವಪ್ಪ, ನಾಗರಾಜು, ರಾಜೇಶ, ಶ್ರೀನಿವಾಸ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಎಸ್‌ಎಸ್‌ಎಲ್‌ಸಿ ತೃತೀಯ ಭಾಷೆ ಪರೀಕ್ಷೆ ಯಶಸ್ವಿ; ಗೊಂದಲಕ್ಕೆ ತೆರೆ ಬಿದ್ದ ವಿದ್ಯಾರ್ಥಿಗಳ ಆತಂಕ

ಕೋಲಾರ

ಸರ್ಕಾರ ತೇರ್ಗಡೆಗೆ ತೃತೀಯ ಭಾಷೆ ಅಂಕ ಮಾನದಂಡವಲ್ಲ ಎಂದು ಘೋಷಿಸಿದ ಬೆನ್ನಲ್ಲೆ ಜಿಲ್ಲೆಯ 65 ಕೇಂದ್ರಗಳಲ್ಲಿ ನಡೆದ ಎಸ್ಸೆಸ್ಸೆಲ್ಸಿ ತೃತೀಯ ಭಾಷೆಗಳಾದ ಹಿಂದಿ, ಇಂಗ್ಲೀಷ್, ಕನ್ನಡದ 5ನೇ ದಿನದ ಪರೀಕ್ಷೆ ಮಂಗಳವಾರ ಯಾವುದೇ ಗೊಂದಲಗಳಿಗೆ ಅವಕಾಶವಿಲ್ಲದಂತೆ ಅತ್ಯಂತ ಯಶಸ್ವಿಯಾಗಿ ನಡೆದಿದ್ದು 203 ವಿದ್ಯಾರ್ಥಿಗಳು ಗೈರಾಗಿದ್ದಾರೆ ಎಂದು ಡಿಡಿಪಿಐ ಅಲ್ಮಾಸ್ ಫರ್ವೀನ್ ತಾಜ್ ತಿಳಿಸಿದರು.

ಪರೀಕ್ಷೆ ಮುಗಿದ ನಂತರ ಮಾಧ್ಯಮಗಳಿಗೆ ಮಾಹಿತಿ ನೀಡಿದ ಅವರು, ತೃತೀಯ ಭಾಷೆ ಪರೀಕ್ಷೆಗೆ ಹೆಸರು ನೊಂದಾಯಿಸಿದ್ದ 18768 ಹೊಸ ವಿದ್ಯಾರ್ಥಿಗಳ ಪೈಕಿ 18565 ಮಂದಿ ಹಾಜರಾಗಿದ್ದು, 203 ಮಂದಿ ಗೈರಾಗಿದ್ದರು. ಪರೀಕ್ಷೆ ಯಾವುದೇ ಗೊಂದಲಗಳಿಲ್ಲದೇ ಸುಗಮವಾಗಿ ನಡೆದಿದ್ದು, ಶೇ.98.92 ಹಾಜರಿ ಇದೆ ಎಂದು ತಿಳಿಸಿದರು.

ಸಿಸಿ ಕ್ಯಾಮರಾ,ವೆಬ್ ಕಾಸ್ಟಿಂಗ್ ಕಣ್ಗಾವಲಿನಲ್ಲಿ ನಡೆಯುತ್ತಿರುವ 4ನೇ ವರ್ಷದ ಪರೀಕ್ಷೆ ಇದಾಗಿದ್ದು, ಜಿಲ್ಲೆಯ ಎಲ್ಲ ಪರೀಕ್ಷಾ ಕೇಂದ್ರಗಳಲ್ಲೂ ಸಿಸಿ ಕ್ಯಾಮಾರ ಸುಸ್ಥಿತಿಯಲ್ಲಿಡಲಾಗಿದೆ. ಪರೀಕ್ಷಾ ಅವಧಿಯಲ್ಲಿ ವೆಬ್ ಕಾಸ್ಟಿಂಗ್ ಮೂಲಕ ಅಧಿಕಾರಿಗಳು ವೀಕ್ಷಿಸುತ್ತಿದ್ದು, ಯಾವುದೇ ಲೋಪ ಕಂಡು ಬರಲಿಲ್ಲ ಎಂದರು.

ತಾಲ್ಲೂಕುವಾರು ಹಾಜರಿ ವಿವರ:

ಬಂಗಾರಪೇಟೆ ತಾಲ್ಲೂಕಿನ 8 ಕೇಂದ್ರಗಳಲ್ಲಿ ಗಣಿತ ವಿಷಯಕ್ಕೆ 2476 ಮಂದಿ ನೊಂದಾಯಿಸಿದ್ದು, 2456 ಮಂದಿ ಹಾಜರಾಗಿ 20 ಮಂದಿ ಗೈರಾಗಿದ್ದಾರೆ, ಕೆಜಿಎಫ್ ತಾಲ್ಲೂಕಿನ 9 ಕೇಂದ್ರಗಳಲ್ಲಿ 3231 ಮಕ್ಕಳು ಹೆಸರು ನೊಂದಾಯಿಸಿದ್ದು, 3195 ಮಂದಿ ಹಾಜರಾಗಿ 36 ಮಂದಿ ಗೈರಾಗಿದ್ದಾರೆ.

ಕೋಲಾರ ತಾಲ್ಲೂಕಿನ 18 ಕೇಂದ್ರಗಳಲ್ಲಿ 4764 ಮಂದಿ ಹೆಸರು ನೊಂದಾಯಿಸಿದ್ದು, 4723 ಮಂದಿ



ಹಾಜರಾಗಿ 41 ಮಂದಿ ಗೈರಾಗಿದ್ದಾರೆ. ಮಾಲೂರು ತಾಲ್ಲೂಕಿನ 8 ಕೇಂದ್ರಗಳಲ್ಲಿ 2941 ಮಂದಿ ಹೆಸರು ನೊಂದಾಯಿಸಿದ್ದು, 2910 ಮಂದಿ ಹಾಜರಾಗಿದ್ದು, 31 ಮಂದಿ ಗೈರಾಗಿದ್ದಾರೆ.

ಮುಳಬಾಗಿಲು ತಾಲ್ಲೂಕಿನ 12 ಕೇಂದ್ರಗಳಲ್ಲಿ 2804 ಮಂದಿ ನೊಂದಾಯಿಸಿದ್ದು, 2750 ಮಂದಿ ಹಾಜರಾಗಿದ್ದು, 54 ಮಂದಿ ಗೈರಾಗಿದ್ದಾರೆ, ಶ್ರೀನಿವಾಸಪುರ ತಾಲ್ಲೂಕಿನ 10 ಕೇಂದ್ರಗಳಲ್ಲಿ 2552 ಮಂದಿ ಹೆಸರು ನೊಂದಾಯಿಸಿದ್ದು, 2531 ಮಂದಿ ಹಾಜರಾಗಿದ್ದು, 21 ಮಂದಿ ಗೈರಾಗಿದ್ದಾರೆ.

ಐದನೇ ದಿನದ ಪರೀಕ್ಷೆಯಲ್ಲಿ ಜಿಲ್ಲಾದ್ಯಂತ ಎಲ್ಲೂ ಯಾವುದೇ ಅವ್ಯವಹಾರಗಳು ನಡೆದ ಬಗ್ಗೆ ವರದಿಯಾಗಿಲ್ಲ, ಪರೀಕ್ಷೆ ಸುಗಮವಾಗಿ ನಡೆಸುವಲ್ಲಿ ಜಿಲ್ಲಾಧಿಕಾರಿಗಳು,ಜಿಪಂ ಸಿಇಒ, ಎಸ್ಪಿ ಅವರ ಮಾರ್ಗದರ್ಶನದಲ್ಲಿ ಜಿಲ್ಲಾಡಳಿತ, ಶಿಕ್ಷಣ ಇಲಾಖೆ, ಶಿಕ್ಷಕರು, ಪೋಷಕರು, ವಿದ್ಯಾರ್ಥಿಗಳು ಸಹಕಾರ ನೀಡಿದ್ದಾರೆ ಎಂದರು.

ಡಿಡಿಪಿಐ ಅಲ್ಮಾಸ್ ಫರ್ವೀನ್ ತಾಜ್, ಶಿಕ್ಷಣಾಧಿಕಾರಿ ಡಾ.ವೀಣಾ, ಎಸ್ಸೆಸ್ಸೆಲ್ಸಿ ನೋಡಲ್ ಅಧಿಕಾರಿ ಶಂಕರೇಗೌಡ, ಡಿವೈಪಿಸಿಗಳಾದ ರಾಜೇಶ್ವರಿ, ಸೈಹಿದಾ ನಾಹಿದಾ ಫಾತಿಮಾ, ಬಿಇಒಗಳಾದ ಮಧುಮಾಲತಿ ಪಡುವಣೆ, ವಿವಿಧ ತಾಲ್ಲೂಕುಗಳ ಬಿಇಒಗಳಾದ ಶಶಿಕಲಾ, ನಾರಾಯಣಸ್ವಾಮಿ, ಕೆಂಪಯ್ಯ, ರಾಮಚಂದ್ರ, ಮುನಿಲಕ್ಷ್ಮಯ್ಯ, ಎವೈಪಿಸಿ ಗಾಯತ್ರಿ, ವಿಷಯ ಪರಿವೀಕ್ಷಕರಾದ ಸಮೀವುಲ್ಲಾ, ಕ್ರಿಸ್ಟಿನಾಬಬಿತಾ, ತಾಲ್ಲೂಕು ನೋಡಲ್ ಅಧಿಕಾರಿ ಇಸಿಒ ರಾಧಾ ಮತ್ತಿತರರು ವಿವಿಧ ಕೇಂದ್ರಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದು, ನಗರದ ಅಂಜುಮಾನ್ ಶಾಲೆ ಕೇಂದ್ರದಲ್ಲಿ ಮುಖ್ಯ ಅಧೀಕ್ಷಕರಾಗಿ ವೇಣುಗೋಪಾಲ್, ಪ್ರಶ್ನೆಪತ್ರಿಕಾ ಪಾಲಕರಾಗಿ ಮಂಜುಳಾ, ಸ್ಥಾನಿಕ ಜಾಗೃತದಳ ಅಧಿಕಾರಿಯಾಗಿ ವಿ.ಮುರಳಿಮೋಹನ್ ಕಾರ್ಯನಿರ್ವಹಿಸಿದರು.

# ನರಕಕ್ಕೆ ಸಾಕ್ಷಿಯಾದ ಹೊಸಹುಡ್ಯ ಕಾಲೋನಿ: ಶೌಚ ನೀರಲ್ಲೇ ಜನರ ನಡಿಗೆ!

ಚಿಕ್ಕಬಳ್ಳಾಪುರ

ಜಿಲ್ಲಾಡಳಿತ ಭವನದಿಂದ ಕೇವಲ ನಾಲ್ಕು ಕಿಲೋಮೀಟರ್ ದೂರದಲ್ಲಿರುವ ಹೊಸಹುಡ್ಯ ಗ್ರಾಮದ ಎಡಿ ಕಾಲೋನಿಯ ಸ್ಥಿತಿ ಇಂದು ಹೇಳತೀರದಾಗಿದೆ. ಮನೆ ಬಾಗಿಲಿಗೆ ಬಂದು ನಿಲ್ಲುವ ಕೊಳಚೆ ನೀರು, ರಸ್ತೆಯಲ್ಲೇ ಹರಿಯುವ ಶೌಚಾಲಯದ ಗಲೀಜು ಮತ್ತು ಸದಾ ಮೂಗಿಗೆ ಬಡಿಯುವ ದುರ್ನಾತದ ನಡುವೆ ಇಲ್ಲಿನ ಕೂಲಿ ಕಾರ್ಮಿಕರ ಕುಟುಂಬಗಳು ಅತಂತ್ರ ಬದುಕು ದೂಡುತ್ತಿವೆ.

ಈ ಕಾಲೋನಿಯಲ್ಲಿ ಚರಂಡಿ ವ್ಯವಸ್ಥೆ ಸಂಪೂರ್ಣ ಹದಗೆಟ್ಟಿದೆ. ಚರಂಡಿಗಳಲ್ಲಿ ಕಸ–ಕಡ್ಡಿ ತುಂಬಿಕೊಂಡಿದ್ದು, ನೀರು ಸರಾಗವಾಗಿ ಹರಿಯದೆ ಮನೆಗಳ ಅಂಗಳಕ್ಕೆ ನುಗ್ಗುತ್ತಿದೆ. "ಮಳೆ ಬಂದರೆ ಸಾಕು, ಚರಂಡಿ ನೀರು ಮಾತ್ರವಲ್ಲದೆ



ಶೌಚಗುಂಡಿಯ ನೀರೂ ರಸ್ತೆಯ ಮೇಲೆ ಹರಿಯುತ್ತದೆ. ಇದರ ಮೇಲೆಯೇ ನಾವು ಸಂಚರಿಸಬೇಕಾದ ಅನಿವಾರ್ಯತೆ ಇದೆ" ಎಂದು ನಿವಾಸಿಗಳಾದ ಚಿಕ್ಕಗಂಗಪ್ಪ ಮತ್ತು ನರಸಿಂಹಯ್ಯ ಅಳಲು ತೋಡಿಕೊಂಡಿದ್ದಾರೆ.

ಈ ಕುರಿತು ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಮತ್ತು ಕಾರ್ಯದರ್ಶಿಗಳಿಗೆ ಹತ್ತಾರು ಬಾರಿ ಮೌಖಿಕವಾಗಿ ಹಾಗೂ ಲಿಖಿತವಾಗಿ ದೂರು ನೀಡಿದರೂ ಯಾವುದೇ ಪ್ರಯೋಜನವಾಗಿಲ್ಲ. "ಹತ್ತು ಬಾರಿ ಕೇಳಿದರೆ ಒಮ್ಮೆ ಬರುತ್ತೇವೆ ಎಂಬ ಸಬೂಬು ನೀಡುತ್ತಾರೆ ಹೊರತು, ಶಾಶ್ವತ ಪರಿಹಾರ ಕಲ್ಪಿಸುತ್ತಿಲ್ಲ" ಎಂದು ಕಾಲೋನಿ ನಿವಾಸಿಗಳು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಪ್ರಮುಖ ಸಮಸ್ಯೆಗಳು:

ಆರೋಗ್ಯ ಭೀತಿ: ನಿಂತ ನೀರು ಸೊಳ್ಳೆಗಳ ಉತ್ಪತ್ತಿ ಕೇಂದ್ರವಾಗಿದ್ದು, ಸಾಂಕ್ರಾಮಿಕ ರೋಗಗಳ ಭೀತಿ ಆವರಿಸಿದೆ.

ದುರ್ವಾಸನೆ: ದಿನದ 24 ಗಂಟೆಯೂ ಹರಡುವ ಕೆಟ್ಟ ವಾಸನೆಯಿಂದಾಗಿ ಜನರು ಮನೆಯಿಂದ ಹೊರಬರಲು ಹಿಂಜರಿಯುತ್ತಿದ್ದಾರೆ.

ನಾಯಿಗಳ ಕಾಟ: ಬೀದಿ ನಾಯಿಗಳ ಹಾವಳಿ ಹೆಚ್ಚಾಗಿದ್ದು, ಮಕ್ಕಳು ಮತ್ತು ವೃದ್ಧರು ರಸ್ತೆಯಲ್ಲಿ ಓಡಾಡಲು ಭಯಪಡುವಂತಾಗಿದೆ.

ಕಸ ನಿರ್ವಹಣೆ: ಗ್ರಾಮದಲ್ಲಿ ಕಸ ವಿಲೇವಾರಿ ಸಮರ್ಪಕವಾಗಿ ನಡೆಯುತ್ತಿಲ್ಲ ಎಂಬುದು ಜನರ ದೂರು.

ಜಿಲ್ಲಾ ಪಂಚಾಯಿತಿ ಎದುರು ಧರಣಿ ಎಚ್ಚರಿಕೆ: ಕೂಡಲೇ ನೀರು ನಿಂತ ಜಾಗದಲ್ಲಿ ಬ್ಲೀಚಿಂಗ್ ಪೌಡರ್ ಸಿಂಪಡಿಸಿ, ಚರಂಡಿಗಳನ್ನು ಸ್ವಚ್ಛಗೊಳಿಸಬೇಕು. ತಾಲೂಕು ಮತ್ತು ಜಿಲ್ಲಾ ಪಂಚಾಯಿತಿಯ ಮೇಲಾಧಿಕಾರಿಗಳು ಮಧ್ಯಪ್ರವೇಶಿಸಿ ಈ ನರಕಸದೃಶ ಸ್ಥಿತಿಯಿಂದ ಮುಕ್ತಿ ನೀಡಬೇಕು. ಇಲ್ಲವಾದಲ್ಲಿ ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯಿತಿ ಕಚೇರಿ ಮುಂದೆ ಬೃಹತ್ ಧರಣಿ ಹಮ್ಮಿಕೊಳ್ಳುವುದಾಗಿ ಚಿಕ್ಕಗಂಗಯ್ಯ, ವೆಂಕಟೇಶಪ್ಪ, ಮರಿಯಪ್ಪ, ರಾಜಪ್ಪ, ಕೃಷ್ಣಮ್ಮ ಸೇರಿದಂತೆ ಕಾಲೋನಿಯ ನೂರಾರು ನಿವಾಸಿಗಳು ಎಚ್ಚರಿಕೆ ನೀಡಿದ್ದಾರೆ.

# ಕಳಂಕಿತ ಅಧಿಕಾರಿಗೆ ಶಾಸಕರ ಬೆಂಬಲವೇಕೆ?



ಕುಣಿಗಲ್

"ತಾಲೂಕಿನ ಸಹಕಾರ ಸಂಘಗಳ ಚುನಾವಣೆಯಲ್ಲಿ ಭ್ರಷ್ಟಾಚಾರ, ಸ್ವಜನಪಕ್ಷಪಾತ ಹಾಗೂ ಅಕ್ರಮ ಎಸಗಲೆಂದೇ ಶಾಸಕರು ಕಳಂಕಿತ ಅಧಿಕಾರಿಯನ್ನು ಕರೆತಂದು ವಿರೋಧ ಪಕ್ಷಗಳ ಮೇಲೆ ಸುಳ್ಳು ದೂರು ದಾಖಲಿಸುತ್ತಿದ್ದಾರೆ" ಎಂದು ತಾಲೂಕು ಜೆಡಿಎಸ್ ಅಧ್ಯಕ್ಷ ಬಿ.ಎನ್. ಜಗದೀಶ್ ನಾಗರಾಜಯ್ಯ ಕಿಡಿಕಾರಿದ್ದಾರೆ.

ನಗರದ ಜೆಡಿಎಸ್ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂತೆಮಾವತ್ತೂರು ವಿಎಸ್ಎಸ್ಎನ್ ಚುನಾವಣಾ ಅಕ್ರಮದ ಕೇಂದ್ರಬಿಂದುವಾಗಿರುವ ಸಿಡಿಓ ಸುನಿಲ್ ಕುಮಾರ್ ವಿರುದ್ಧ ವಾಗ್ದಾಳಿ ನಡೆಸಿದರು.

"ಸುನಿಲ್ ಕುಮಾರ್ ಎಂಬ ಅಧಿಕಾರಿ ಈ ಹಿಂದೆ ಹಾಸನ ಮತ್ತು ಚಿಕ್ಕಮಗಳೂರು ಡಿಸಿಸಿ ಬ್ಯಾಂಕ್ ಚುನಾವಣೆಯಲ್ಲಿ ಅಕ್ರಮ ಎಸಗಿದ ಇತಿಹಾಸ ಹೊಂದಿದ್ದಾನೆ. ಮಹಿಳಾ ಅಧಿಕಾರಿಗಳ ಮೇಲೆ ದೌರ್ಜನ್ಯ ಹಾಗೂ ಸಹಿ ನಕಲು ಮಾಡಿದ ಪ್ರಕರಣಗಳಲ್ಲಿ ಭಾಗಿಯಾಗಿರುವ ಈತನನ್ನು ಯಾವುದೇ ಚುನಾವಣಾ ಕರ್ತವ್ಯಕ್ಕೆ ನೇಮಿಸಬಾರದು ಎಂಬ ಆದೇಶವಿದ್ದರೂ, ಶಾಸಕರು ಅಕ್ರಮ ವೋಟ್ ಚೂರಿ ನಡೆಸಲೆಂದೇ ಈತನನ್ನು ಕುಣಿಗಲ್‌ಗೆ ಕರೆತಂದಿದ್ದಾರೆ" ಎಂದು ಅವರು ದಾಖಲೆ ಸಮೇತ ಆರೋಪಿಸಿದರು.

ಶಾಸಕರು ತಾಲೂಕಿನ ಮೂಲ ಕಾಂಗ್ರೆಸ್ ಮುಖಂಡರನ್ನು ಮೂಲೆಗುಂಪು ಮಾಡಿದ್ದಾರೆ ಎಂದು ದೂಷಿಸಿದ ಜಗದೀಶ್ ನಾಗರಾಜಯ್ಯ, "ಮಾಜಿ ಸಂಸದ ಮುದ್ದಹನುಮೇಗೌಡರು, ಬಿ.ಬಿ. ರಾಮಸ್ವಾಮಿಗೌಡರು ಹಾಗೂ ಹುಚ್ಚಮಾಸ್ತಿಗೌಡರ ಕುಟುಂಬದವರನ್ನು ರಾಜಕೀಯವಾಗಿ ಬಳಸಿ ಈಗ ಸೈಡ್‌ಲೈನ್ ಮಾಡಲಾಗಿದೆ" ಎಂದರು.

83 ವರ್ಷದ ಹಿರಿಯ ನಾಯಕ, ಮಾಜಿ ಸಚಿವ ಡಿ. ನಾಗರಾಜಯ್ಯ ಅವರ ಮೇಲೆ ರಾಜಕೀಯ ದ್ವೇಷದಿಂದ ಸುಳ್ಳು ಪ್ರಕರಣ ದಾಖಲಿಸಲು ಸಂಚು ರೂಪಿಸಲಾಗುತ್ತಿದೆ. ಸಹಕಾರ ಕ್ಷೇತ್ರದಲ್ಲಿ ದಶಕಗಳ ಕಾಲ ಸೇವೆ ಸಲ್ಲಿಸಿದ ಅವರಿಗೆ ಸರ್ಕಾರವೇ 'ಸಹಕಾರ ರತ್ನ' ಪ್ರಶಸ್ತಿ ನೀಡಿದೆ. ಅಂತಹ ವ್ಯಕ್ತಿತ್ವದ ಮೇಲೆ ಮಸಿ ಬಳಿಯುವ ಕೆಲಸ ನಡೆಯುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಈಗಾಗಲೇ ಈ ಚುನಾವಣಾ ಅಕ್ರಮದ ಬಗ್ಗೆ ಜಿಲ್ಲಾಧಿಕಾರಿಗಳು ಹಾಗೂ ಸಹಕಾರ ಆಯುಕ್ತರಿಗೆ ದೂರು ನೀಡಿದ್ದರೂ, ಶಾಸಕರ ಒತ್ತಡದಿಂದಾಗಿ ಯಾವುದೇ ಕ್ರಮ ಕೈಗೊಳ್ಳುತ್ತಿಲ್ಲ. ಮುಂದಿನ ದಿನಗಳಲ್ಲಿ ಈ ಅಧಿಕಾರಿಯ ಕರ್ಮಕಾಂಡವನ್ನು ಜನರಿಗೆ ಮನವರಿಕೆ ಮಾಡಿಕೊಡಲಾಗುವುದು ಎಂದು ಎಚ್ಚರಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾಜಿ ಪುರಸಭಾ ಅಧ್ಯಕ್ಷ ಕೆ.ಎಲ್. ಹರೀಶ್, ಗ್ರಾ.ಪಂ. ಮಾಜಿ ಅಧ್ಯಕ್ಷ ಮಂಜುನಾಥ್, ಶ್ರೀನಿವಾಸ್ ಮೂರ್ತಿ ವಾಸು, ವಕ್ತಾರ ತರೀಕೆರೆ ಪ್ರಕಾಶ್, ಬಾಲನಾಯಕ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಜಯಂತಿ ಪೂರ್ವಭಾವಿ ಸಭೆ: ಗದ್ದಲದ ನಡುವೆ ಒಮ್ಮತದ ನಿರ್ಧಾರ!




ಶ್ರೀನಿವಾಸಪುರ

ಪಟ್ಟಣದ ಪುರಸಭೆ ಕಚೇರಿಯಲ್ಲಿ ಬಾಬು ಜಗಜೀವನ್‌ರಾಮ್ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ ಆಚರಣೆಯ ಕುರಿತು ಹಮ್ಮಿಕೊಳ್ಳಲಾಗಿದ್ದ ಪೂರ್ವಭಾವಿ ಸಭೆಯು ಆರಂಭದಲ್ಲಿ ತೀವ್ರ ಗದ್ದಲಕ್ಕೆ ಸಾಕ್ಷಿಯಾಯಿತು. ನಂತರ ಶಾಸಕರು ಹಾಗೂ ಅಧಿಕಾರಿಗಳ ಮಧ್ಯಪ್ರವೇಶದಿಂದ ಸಭೆ ಸುಸೂತ್ರವಾಗಿ ನಡೆಯಿತು.

ಸಭೆಯಲ್ಲಿ ಮಾತನಾಡಿದ ಶಾಸಕ ಜಿ.ಕೆ. ವೆಂಕಟಶಿವಾರೆಡ್ಡಿ ಅವರು, "ಬಾಬು ಜಗಜೀವನ್‌ರಾಮ್ ಹಾಗೂ ಬಿ.ಆರ್. ಅಂಬೇಡ್ಕರ್ ಅವರು ಕೇವಲ ಒಂದು ಸಮುದಾಯಕ್ಕೆ ಸೀಮಿತವಾದವರಲ್ಲ. ಅವರು ಇಡೀ ಸಮಾಜದ ಒಳಿತಿಗಾಗಿ ಹೋರಾಡಿದ ಮಹಾನ್ ಚೇತನಗಳು. ಅವರನ್ನು ಗೌರವಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯ. ಆದ್ದರಿಂದ ನಾವೆಲ್ಲರೂ ಭೇದ-ಭಾವ ಮರೆತು ಅದ್ದೂರಿಯಾಗಿ ಜಯಂತಿಗಳನ್ನು ಆಚರಿಸೋಣ" ಎಂದು ಕರೆ ನೀಡಿದರು.

ತಹಶೀಲ್ದಾರ್ ಜಿ.ಎನ್. ಸುದೀಂದ್ರ ಮಾತನಾಡಿ, "ಏಪ್ರಿಲ್ 5 ರಂದು ಬಾಬು ಜಗಜೀವನ್‌ರಾಮ್ ಜಯಂತಿ ಹಾಗೂ ಏಪ್ರಿಲ್ 14 ರಂದು ಡಾ. ಬಿ.ಆರ್. ಅಂಬೇಡ್ಕರ್ ಜಯಂತಿಯನ್ನು ಸರ್ಕಾರಿ ಶಿಷ್ಟಾಚಾರದಂತೆ ಅರ್ಥಪೂರ್ಣವಾಗಿ ಆಚರಿಸಲಾಗುವುದು. ಕಾರ್ಯಕ್ರಮದ ಯಶಸ್ಸಿಗೆ ಸಾರ್ವಜನಿಕರು ಹಾಗೂ ಸಂಘ-ಸಂಸ್ಥೆಗಳು ಕೈಜೋಡಿಸಬೇಕು. ಸಣ್ಣಪುಟ್ಟ ಲೋಪದೋಷಗಳಿದ್ದಲ್ಲಿ ಸರಿಪಡಿಸಿಕೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸೋಣ" ಎಂದು ಮನವಿ ಮಾಡಿದರು. ಸಭೆಯಲ್ಲಿ ಇಒ ಕೆ. ಸರ್ವೇಶ್, ಪುರಸಭೆ ಮುಖ್ಯಾಧಿಕಾರಿ ವಿ. ನಾಗರಾಜ್, ಸಮಾಜ ಕಲ್ಯಾಣ ಇಲಾಖೆಯ ಎನ್. ರಾಜೇಶ್ ಹಾಗೂ ಕೆಎಸ್‌ಆರ್‌ಟಿಸಿ ವ್ಯವಸ್ಥಾಪಕ ಮಾದೇಶ್ ಉಪಸ್ಥಿತರಿದ್ದರು. ಸಮುದಾಯದ ಮುಖಂಡರಾದ ಉಪ್ಪರಪಲ್ಲಿ ತಿಮ್ಮಯ್ಯ, ಚಲ್ದಿಗಾನಹಳ್ಳಿ ಈರಪ್ಪ, ಮುನಿವೆಂಕಟಪ್ಪ, ರಾಮಾಂಜಮ್ಮ ಸೇರಿದಂತೆ ಹಲವು ದಲಿತ ಪರ ಸಂಘಟನೆಗಳ ಮುಖಂಡರು ಭಾಗವಹಿಸಿ ಸಲಹೆ ಸೂಚನೆಗಳನ್ನು ನೀಡಿದರು.

# 6ರಂದು ಬಸವೇಶ್ವರರ ಪುತ್ಥಳಿ ಲೋಕಾರ್ಪಣೆ



ವಿಜಯಪುರ


ಬೆಂಗಳೂರು ಗ್ರಾಮಾಂತರ ಜಿಲ್ಲಾಡಳಿತ ಕಚೇರಿ ಸಂಕೀರ್ಣದ ಮುಂಭಾಗದಲ್ಲಿ ನೂತನವಾಗಿ ನಿರ್ಮಾಣಗೊಂಡಿರುವ ಜಗಜ್ಯೋತಿ ಬಸವೇಶ್ವರರ ಕಂಚಿನ ಪ್ರತಿಮೆಯ ಲೋಕಾರ್ಪಣೆ ಕಾರ್ಯಕ್ರಮಕ್ಕೆ ಸಚಿವ ಕೆ.ಹೆಚ್. ಮುನಿಯಪ್ಪ ಅವರಿಗೆ ಅಧಿಕೃತವಾಗಿ ಆಹ್ವಾನ ನೀಡಲಾಯಿತು.

ಜಗಜ್ಯೋತಿ ಬಸವೇಶ್ವರ ಪ್ರತಿಮೆ ನಿರ್ಮಾಣ ಸಮಿತಿಯ ಗೌರವಾಧ್ಯಕ್ಷರಾದ ವಿ. ಮಂಜುನಾಥ್ ಅವರ ನೇತೃತ್ವದ ನಿಯೋಗವು ಸಚಿವರನ್ನು ಭೇಟಿ ಮಾಡಿ, ಏಪ್ರಿಲ್ 6ರಂದು ನಡೆಯಲಿರುವ ಈ ಐತಿಹಾಸಿಕ ಕಾರ್ಯಕ್ರಮಕ್ಕೆ ಬರುವಂತೆ ಮನವಿ ಮಾಡಿತು.

ಸಾಂಸ್ಕೃತಿಕ ಮತ್ತು ಧಾರ್ಮಿಕ ಚರಿತ್ರೆಗೆ ಹೊಸ ಮೆರುಗು ನೀಡಲಿದೆ.

ಈ ಸಂದರ್ಭದಲ್ಲಿ ಪ್ರತಿಮೆ ನಿರ್ಮಾಣ ಸಮಿತಿಯ ಅಧ್ಯಕ್ಷ ಎಂ.ಎಸ್. ರಮೇಶ್, ಉಪಾಧ್ಯಕ್ಷ ಜಗದೀಶ್, ಸದಸ್ಯರಾದ ನಾಗೇಶ್, ಎಸ್.ಆರ್.ಎಸ್. ಬಸವರಾಜ್, ವಿಜಯ್ ಕುಮಾರ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದು, ಕಾರ್ಯಕ್ರಮದ ಸಿದ್ಧತೆಗಳ ಕುರಿತು ಚರ್ಚಿಸಿದರು.

# ಇಂದಿನಿಂದ ಮುತ್ತುಗದಹಳ್ಳಿ ಕೆಂಪಮ್ಮನ ದೇವಿಯ ಜಾತ್ರೆ



ತುಮಕೂರು

ತಾಲ್ಲೂಕಿನ ಮುತ್ತುಗದಹಳ್ಳಿ ಗ್ರಾಮದಲ್ಲಿ ನೆಲೆಸಿರುವ ಶಕ್ತಿ ದೇವತೆ ಶ್ರೀ ಆದಿಶಕ್ತಿ ಕೆಂಪಮ್ಮದೇವಿಯ ವಾರ್ಷಿಕ ಜಾತ್ರಾ ಮಹೋತ್ಸವವು ಏಪ್ರಿಲ್ 2ರಿಂದ 6ರವರೆಗೆ ಅತ್ಯಂತ ವೈಭವದಿಂದ ಜರುಗಲಿದೆ. ಮುತ್ತುಗದಹಳ್ಳಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಸ್ಥರ ಸಹಯೋಗದಲ್ಲಿ ಈ ಧಾರ್ಮಿಕ ಉತ್ಸವಕ್ಕೆ ಸಕಲ ಸಿದ್ಧತೆ ಮಾಡಿಕೊಳ್ಳಲಾಗಿದೆ.

ಐದು ದಿನಗಳ ಕಾರ್ಯಕ್ರಮದ ವಿವರ:

ಏಪ್ರಿಲ್ 2 (ಗುರುವಾರ): ಬೆಳಿಗ್ಗೆ 8 ಗಂಟೆಗೆ ಧ್ವಜಾರೋಹಣ, ದೀಪೋತ್ಸವ ಮತ್ತು ತೇರಿನ ಕಳಸ ಸ್ಥಾಪನೆಯೊಂದಿಗೆ ಜಾತ್ರೆಗೆ ಅಧಿಕೃತ ಚಾಲನೆ ದೊರೆಯಲಿದೆ.

ಏಪ್ರಿಲ್ 3 (ಶುಕ್ರವಾರ): ಬೆಳಿಗ್ಗೆ ಹಸಿರು ಚಪ್ಪರ ಸೇವೆ. ರಾತ್ರಿ 9 ಗಂಟೆಗೆ ದೇವಿಯ ಮಡಿತೇರು ಮೆರವಣಿಗೆ ನಡೆಯಲಿದ್ದು, ಚಿಕ್ಕಪುರ, ಬೆಂಕಿಕೆರೆ ಹಾಗೂ ಕಾಚೀಹಳ್ಳಿ ಗ್ರಾಮಸ್ಥರಿಂದ ವಿಶೇಷ ಆರತಿ ಪೂಜೆ ಸಲ್ಲಿಕೆಯಾಗಲಿದೆ.

ಏಪ್ರಿಲ್ 4 (ಶನಿವಾರ): ಇದು ಜಾತ್ರೆಯ ಪ್ರಮುಖ ದಿನ. ಸಂಜೆ 5 ಗಂಟೆಗೆ ಬಾಯಿಬೀಗ ಸೇವೆಯೊಂದಿಗೆ ಭವ್ಯ ರಥೋತ್ಸವ ನೆರವೇರಲಿದೆ. ಸಂಜೆ 6ಕ್ಕೆ ಸಿಡಿಮದ್ದು ಪ್ರದರ್ಶನ ಹಾಗೂ ರಾತ್ರಿ 7 ಗಂಟೆಗೆ ಅಗ್ನಿಕೊಂಡ ಮತ್ತು ಗಾವುಸಿಗಿತ ಕಾರ್ಯಕ್ರಮಗಳು ಭಕ್ತರ ಸಮ್ಮುಖದಲ್ಲಿ ನಡೆಯಲಿವೆ.

ಏಪ್ರಿಲ್ 5 (ಭಾನುವಾರ): ಮಧ್ಯಾಹ್ನ 3 ಗಂಟೆಗೆ ಓಕಳಿ ಮತ್ತು ದೇವಿಯ ಉಯ್ಯಾಲೋತ್ಸವ ಜರುಗಲಿದೆ. ರಾತ್ರಿ 10 ಗಂಟೆಗೆ ಸಾರ್ವಜನಿಕರ ಮನರಂಜನೆಗಾಗಿ ಅದ್ದೂರಿ ಆರ್ಕೆಸ್ಟ್ರಾ ಹಮ್ಮಿಕೊಳ್ಳಲಾಗಿದೆ.

ಏಪ್ರಿಲ್ 6 (ಸೋಮವಾರ): ಮಡಿಲಕ್ಕಿ ಉತ್ಸವದೊಂದಿಗೆ ಐದು ದಿನಗಳ ಜಾತ್ರಾ ಮಹೋತ್ಸವಕ್ಕೆ ತೆರೆಬೀಳಲಿದೆ.

ಭಕ್ತರಿಗೆ ಆಮಂತ್ರಣ: ಜಾತ್ರೆಯ ಅಂಗವಾಗಿ ಪ್ರತಿದಿನ ದೇವಿಗೆ ವಿಶೇಷ ಪೂಜೆ, ಅಲಂಕಾರ ಹಾಗೂ ಮಡೆ-ಆರತಿ ಸೇವೆಗಳು ನಡೆಯಲಿವೆ. ಈ ಎಲ್ಲಾ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಕ್ತಾಧಿಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಕೆಂಪಮ್ಮದೇವಿಯ ಕೃಪೆಗೆ ಪಾತ್ರರಾಗಬೇಕೆಂದು ಮುತ್ತುಗದಹಳ್ಳಿ ಗ್ರಾಮಸ್ಥರು ಮನವಿ ಮಾಡಿದ್ದಾರೆ.

# ದೇವರಹಳ್ಳಿಯಲ್ಲಿ ಶ್ರದ್ಧಾಭಕ್ತಿಯ ಧಾರ್ಮಿಕ ಉತ್ಸವ



ಬೇತಮಂಗಲ

ಕೆಜಿಎಫ್ ತಾಲ್ಲೂಕಿನ ದೇವರಹಳ್ಳಿ ಗ್ರಾಮದಲ್ಲಿ ಲೋಕಕಲ್ಯಾಣ ಹಾಗೂ ಗ್ರಾಮದ ಅಭಿವೃದ್ಧಿಗಾಗಿ ಹಮ್ಮಿಕೊಳ್ಳಲಾಗಿದ್ದ ಶ್ರೀ ಮುನೇಶ್ವರ ಸ್ವಾಮಿಯ ವಿಶೇಷ ಅಭಿಷೇಕ ಮತ್ತು ಅನ್ನಸಂತರ್ಪಣೆ ಕಾರ್ಯಕ್ರಮವು ಅತ್ಯಂತ ಶ್ರದ್ಧಾಭಕ್ತಿಯಿಂದ ಜರುಗಿತು.

ಕಾರ್ಯಕ್ರಮದ ಅಂಗವಾಗಿ ಕೆಜಿಎಫ್ ಶಾಸಕಿ ರೂಪಕಲಾ ಶಶಿಧರ್ ಅವರು ದೇಗುಲಕ್ಕೆ ಭೇಟಿ ನೀಡಿ ಶ್ರೀ ಮುನೇಶ್ವರ ಸ್ವಾಮಿಯ ದರ್ಶನ ಪಡೆದರು. ಗ್ರಾಮದ ಒಳಿತಿಗಾಗಿ ಹಮ್ಮಿಕೊಂಡಿರುವ ಈ ಧಾರ್ಮಿಕ ಕಾರ್ಯಕ್ರಮಕ್ಕೆ ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ವೇಳೆ ಮಾತನಾಡಿದ ಯುವ ಮುಖಂಡ ರಾಮಚಂದ್ರ ಅವರು, "ಗ್ರಾಮದ ಸರ್ವಾಂಗೀಣ ಅಭಿವೃದ್ಧಿಯಾಗಲಿ ಹಾಗೂ ಭಕ್ತರು ಬಂದು ಪೂಜೆ ಸಲ್ಲಿಸಿ ತಮ್ಮ ಹರಕೆ ತೀರಿಸಲಿ ಎಂಬ ಉದ್ದೇಶದಿಂದ ಶ್ರೀ ಮುನೇಶ್ವರ ಸ್ವಾಮಿಯ ಹಳೆಯ ವಿಗ್ರಹಕ್ಕೆ ನೂತನ ದೇಗುಲವನ್ನು ನಿರ್ಮಿಸಲಾಗಿದೆ" ಎಂದು ತಿಳಿಸಿದರು.

ವಿಶೇಷ ಪೂಜಾ ಕೈಂಕರ್ಯಗಳ ನಂತರ ಭಕ್ತಾದಿಗಳಿಗೆ ಅನ್ನಸಂತರ್ಪಣೆ ವ್ಯವಸ್ಥೆ ಮಾಡಲಾಗಿತ್ತು. ಸುತ್ತಮುತ್ತಲಿನ ನೂರಾರು ಭಕ್ತರು ಪಾಲ್ಗೊಂಡು ದೇವರ ಕೃಪೆಗೆ ಪಾತ್ರರಾದರು.

ಈ ಸಂದರ್ಭದಲ್ಲಿ ಬೇತಮಂಗಲ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಿ. ನಾಗರಾಜ್, ಮುಖಂಡರಾದ ಮುನಿರತ್ನಮ್ ನಾಯ್ಡು, ಶಂಕರಪ್ಪ ನಾಯ್ಡು, ರಾಮಚಂದ್ರ, ವಿಜಿ ಕುಮಾರ್, ಮಂಜುನಾಥ್, ಮಣಿನಾಯ್ಡು, ಬಾಬು ನಾಯ್ಡು, ತಿಮ್ಮಪುರ ಸುಬ್ರಮಣಿ ನಾಯ್ಡು, ಕೂಲೂರು ಶ್ರೀನಿವಾಸ್ ನಾಯ್ಡು, ಎಚ್.ಜಿ. ವೆಂಕಟೇಶ್, ಚಂದ್ರಶೇಖರ್, ಬುಜ್ಜಿ (ನೀಲಮ್ಮ) ಉಪಸ್ಥಿತರಿದ್ದರು.

# ಎರಡು ಗುಂಪುಗಳ ನಡುವೆ ಉದ್ವಿಗ್ನತೆ, ಪೊಲೀಸರ ದಾಳಿ



ವಿಜಯಪುರ

ಪಟ್ಟಣದ ದೇವನಹಳ್ಳಿ ಮುಖ್ಯರಸ್ತೆಯಲ್ಲಿರುವ ಶ್ರೀ ಅಭಯ ಆಂಜನೇಯಸ್ವಾಮಿ ದೇವಾಲಯದ ಮಾಲೀಕತ್ವದ ವಿಚಾರವಾಗಿ ಎರಡು ಗುಂಪುಗಳ ನಡುವೆ ತೀವ್ರ ಮಾತಿನ ಚಕಮಕಿ ನಡೆದು, ಪರಿಸ್ಥಿತಿ ವಿಕೋಪಕ್ಕೆ ತಿರುಗಿದ ಹಿನ್ನೆಲೆಯಲ್ಲಿ ಪೊಲೀಸರು ಲಾಠಿ ಪ್ರಹಾರ ನಡೆಸಿ ಜನರನ್ನು ಚದುರಿಸಿದ ಘಟನೆ ನಡೆದಿದೆ.

ದೇವಾಲಯದ ನಿರ್ಮಾತೃ ಎನ್ನಲಾದ ಪ್ರಕಾಶ್ ಎಂಬುವವರು ಮಾತನಾಡಿ, "ಭಕ್ತರ ಸಹಕಾರದಿಂದ ಕೋಟ್ಯಂತರ ರೂಪಾಯಿ ಖರ್ಚು ಮಾಡಿ ಈ ಮಂದಿರ ಕಟ್ಟಿದ್ದೇವೆ. ಪೂಜೆಗಾಗಿ ನೇಮಕಗೊಂಡಿದ್ದ ಅರ್ಚಕರು ಭಕ್ತರಿಗೆ ಜ್ಯೋತಿಷ್ಯ ಹೇಳುತ್ತಾ, ಹೋಮ-ಹವನಗಳಿಗೆ ತಲಾ 25 ಸಾವಿರ ರೂ. ನಿಗದಿಪಡಿಸಿ ಅಕ್ರಮ ಎಸಗುತ್ತಿದ್ದಾರೆ. ಅವರನ್ನು ಹೊರಹಾಕಲು ಹೋದಾಗ, ನಾವು ಮೂರ್ತಿಯನ್ನು ಸ್ಥಳಾಂತರ ಮಾಡಿ ಜಾಗ ಮಾರಲು ಯತ್ನಿಸುತ್ತಿದ್ದೇವೆ ಎಂದು ಅರ್ಚಕರು ಸುಳ್ಳು ಅಪಪ್ರಚಾರ ಮಾಡುತ್ತಿದ್ದಾರೆ" ಎಂದು ಕಿಡಿಕಾರಿದರು.

ಇನ್ನೊಂದೆಡೆ ಅರ್ಚಕ ಲೋಕನಾಥಾಚಾರ್ಯ ಅವರು ಪ್ರತಿಕ್ರಿಯಿಸಿ, "ಕಳೆದ ನಾಲ್ಕೈದು ವರ್ಷಗಳಿಂದ ಕಮಿಟಿ ಮೂಲಕ ದೇವಾಲಯ ನಡೆಸುತ್ತಿದ್ದೇವೆ. ಇದು ಪ್ರಕಾಶ್ ಅವರಿಗೆ ಸೇರಿದ ಜಾಗವಲ್ಲ, ಇದು ಸರ್ಕಾರಿ ಜಾಗವಾಗಿದೆ. ಅವರು ನಮಗೆ ಹಣ ನೀಡಿದರೆ ಬಿಟ್ಟುಕೊಡುವುದಾಗಿ ಹೇಳಿದ್ದರು ಮತ್ತು ಮೂರ್ತಿ ಸ್ಥಳಾಂತರದ ಬಗ್ಗೆಯೂ ಪ್ರಸ್ತಾಪಿಸಿದ್ದರು. ಈ ಹಿನ್ನೆಲೆಯಲ್ಲಿ ನಾವು ನ್ಯಾಯಾಲಯದಿಂದ ತಡೆಯಾಜ್ಞೆ ತಂದಿದ್ದೇವೆ. ನಮಗೆ ಪೂಜೆಗೆ ಅವಕಾಶ ನೀಡಬೇಕು" ಎಂದು ಒತ್ತಾಯಿಸಿದರು.

ವಿವಾದದ ವೇಳೆ ಎರಡೂ ಗುಂಪುಗಳ ಬೆಂಬಲಿಗರು ಜಮಾಯಿಸಿ ಪರಸ್ಪರ ಕೈಕೈ ಮಿಲಾಯಿಸುವ ಹಂತಕ್ಕೆ ತಲುಪಿದ್ದರು. ಪರಿಸ್ಥಿತಿ ಉದ್ವಿಗ್ನಗೊಂಡಿದ್ದರಿಂದ ಸ್ಥಳದಲ್ಲಿದ್ದ ಪೊಲೀಸರು ಲಾಠಿ ಚಾರ್ಜ್ ನಡೆಸಿ ಗುಂಪನ್ನು ಚದುರಿಸಿದರು. ಸದ್ಯ ದೇವಾಲಯದ ಬಳಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿದ್ದು, ಪರಿಸ್ಥಿತಿ ನಿಯಂತ್ರಣದಲ್ಲಿದೆ.

# ಆಲಿಕಲ್ಲು ಮಳೆ ಹಾನಿ ವೀಕ್ಷಿಸಿದ ಸಚಿವ ಪರಂ: ರೈತರಿಗೆ ಶೀಘ್ರ ಪರಿಹಾರ ಭರವಸೆ



ತುಮಕೂರು

ತಾಲೂಕಿನಾದ್ಯಂತ ಇತ್ತೀಚೆಗೆ ಸುರಿದ ಆಲಿಕಲ್ಲು ಮಳೆಯಿಂದಾಗಿ ತೀವ್ರ ಹಾನಿಗೊಳಗಾದ ಬೆಳೆ ಪ್ರದೇಶಗಳಿಗೆ ಗೃಹ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಜಿ. ಪರಮೇಶ್ವರ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಸಂಕಷ್ಟದಲ್ಲಿರುವ ರೈತರೊಂದಿಗೆ ನೇರವಾಗಿ ಮಾತನಾಡಿದ ಅವರು, ಶೀಘ್ರ ಪರಿಹಾರ ಒದಗಿಸುವ ಭರವಸೆ ನೀಡಿದರು.

ಆಲಿಕಲ್ಲು ಮಳೆಯ ಹೊಡೆತಕ್ಕೆ ಸಿಲುಕಿ ದಾಳಿಂಬೆ, ಅಡಿಕೆ ಹಾಗೂ ರೇಷ್ಮೆ ಬೆಳೆಗಳು ಸಂಪೂರ್ಣ ನಾಶವಾಗಿವೆ. ಸುಮಾರು 10 ಎಕರೆ ದಾಳಿಂಬೆ ಬೆಳೆ ಕಳೆದುಕೊಂಡ ರೈತ ಮಹೇಶ್ ಹಾಗೂ ಅಡಿಕೆ ಬೆಳೆ ನಾಶವಾಗಿರುವ ರೈತ ಶಿವಣ್ಣ ಸಚಿವರಿಗೆ ತಮ್ಮ ಅಳಲನ್ನು ತೋಡಿಕೊಂಡರು. ರೇಷ್ಮೆ ಬೆಳೆ ಹಾನಿಯನ್ನೂ ವೀಕ್ಷಿಸಿದ ಸಚಿವರು, ಮಳೆಯಿಂದಾದ ನಷ್ಟದ ಬಗ್ಗೆ ಅಧಿಕಾರಿಗಳಿಂದ ಸಂಪೂರ್ಣ ಮಾಹಿತಿ ಪಡೆದರು. ಪರಿಹಾರ ಪ್ರಕ್ರಿಯೆಯನ್ನು ವಿಳಂಬ ಮಾಡದೆ ತ್ವರಿತವಾಗಿ ಮಂಜೂರು ಮಾಡುವಂತೆ ಸ್ಥಳದಲ್ಲಿದ್ದ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಬೆಳೆ ಹಾನಿ ವೀಕ್ಷಣೆಯ ನಂತರ ಶಿರಾ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿದ ಸಚಿವರು, ಗರ್ಭಕಂಠ ಕ್ಯಾನ್ಸರ್ ವಿರುದ್ಧದ ಲಸಿಕಾ ಅಭಿಯಾನವನ್ನು ಉದ್ಘಾಟಿಸಿದರು. ಮಹಿಳೆಯರ ಆರೋಗ್ಯದ ದೃಷ್ಟಿಯಿಂದ ಈ ಅಭಿಯಾನ ಅತ್ಯಂತ ಮಹತ್ವದ್ದಾಗಿದೆ ಎಂದು ಅವರು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಶಾಸಕ ಟಿ.ಬಿ. ಜಯಚಂದ್ರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಚಂದ್ರಶೇಖರ್ ಸೇರಿದಂತೆ ಹಲವು ಇಲಾಖೆಯ ಅಧಿಕಾರಿಗಳು ಮತ್ತು ಸ್ಥಳೀಯ ಮುಖಂಡರು ಉಪಸ್ಥಿತರಿದ್ದರು.

# ಬೆಳ್ಳಾವೆ ಶ್ರೀಕಾರದೇಶ್ವರ ಜಾತ್ರೆಯಲ್ಲಿ ಸಾಂಸ್ಕೃತಿಕ ಮೆರುಗು



ತುಮಕೂರು

"ತಂತಿ ಮತ್ತು ಚರ್ಮದ ವಾದ್ಯಗಳಿಂದ ಹೊಮ್ಮುವ ನಾದಕ್ಕೆ ಮನುಷ್ಯನ ಮನಸ್ಸನ್ನು ಏಕಾಗ್ರಗೊಳಿಸುವ ಅದ್ಭುತ ಶಕ್ತಿಯಿದೆ. ಸಂಗೀತ ಕಲಿಯಲು ವಯಸ್ಸಿನ ಹಂಗಿಲ್ಲ, ಕೇವಲ ಆಸ್ವಾದಿಸುವ ಗುಣವಿದ್ದರೆ ಸಾಕು" ಎಂದು ಬೆಳ್ಳಾವೆ ಶ್ರೀಕಾರದೇಶ್ವರ ಮಠದ ಶ್ರೀಕಾರದ ವೀರಬಸವ ಮಹಾಸ್ವಾಮೀಜಿ ಅಭಿಪ್ರಾಯಪಟ್ಟರು.

ಶ್ರೀಕಾರದೇಶ್ವರ ಸ್ವಾಮಿಯ ಜಾತ್ರಾ ಮಹೋತ್ಸವದ ಅಂಗವಾಗಿ, ಮಲ್ಲಸಂದ್ರದ ರಂಗಕೀರ್ತನ ಸಂಪದ(ರಿ) ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ 'ಸಾಂಸ್ಕೃತಿಕ ಸಿರಿ ವೈಭವ' ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಜಾತ್ರೆಯ ಸಂದರ್ಭದಲ್ಲಿ ಸುರಿದ ಮಳೆಯ ಬಗ್ಗೆ ಹರ್ಷ ವ್ಯಕ್ತಪಡಿಸಿದ ಶ್ರೀಗಳು, "ಪ್ರತಿ ವರ್ಷ ಜಾತ್ರೆಯ ವೇಳೆ ಮಳೆಯಾಗುವುದು ವಾಡಿಕೆ. ಇದು ಇಳೆಯ ಹಸಿರು ಮತ್ತು ರೈತನ ಸಮೃದ್ಧಿಯ ಸಂಕೇತ. ಡಾ. ಲಕ್ಷ್ಮಣದಾಸ್ ಅವರಂತಹ ಕಲಾವಿದರು ಇಂದಿನ ಪೀಳಿಗೆಗೆ ನಮ್ಮ ಸಂಸ್ಕೃತಿಯನ್ನು ಪರಿಚಯಿಸುತ್ತಿರುವುದು ಹೆಮ್ಮೆಯ ವಿಚಾರ" ಎಂದರು.

ಕಾರ್ಯಕ್ರಮ ಉದ್ಘಾಟಿಸಿದ ಜಿಲ್ಲಾ ಕಸಾಪ ಅಧ್ಯಕ್ಷ ಕೆ.ಎಸ್. ಸಿದ್ದಲಿಂಗಪ್ಪ ಮಾತನಾಡಿ, "ಶಾಂತಿ ಮತ್ತು ನೆಮ್ಮದಿ ಮಾರುಕಟ್ಟೆಯಲ್ಲಿ ಸಿಗುವ ವಸ್ತುವಲ್ಲ, ಅವು ಕಲೆ ಮತ್ತು ಸಾಹಿತ್ಯದಲ್ಲಿ ಅಡಗಿವೆ. ಸಂಗೀತಕ್ಕೆ ಭಾಷೆ ಅಥವಾ ಗಡಿಗಳ ಹಂಗಿಲ್ಲ; ಲಯ ಮತ್ತು ತಾಳಕ್ಕೆ ಬದ್ಧವಾಗಿದ್ದರೆ ಅದು ಎಲ್ಲರನ್ನೂ ತಲುಪುತ್ತದೆ" ಎಂದು ತಿಳಿಸಿದರು.

ರಂಗಕೀರ್ತನ ಸಂಪದದ ಅಧ್ಯಕ್ಷ ಡಾ. ಲಕ್ಷ್ಮಣದಾಸ್ ಮಾತನಾಡಿ, ಬೆಳ್ಳಾವೆಯು ಸಾಹಿತ್ಯಿಕವಾಗಿ ಶ್ರೀಮಂತವಾಗಿದೆ. ಮೊದಲ ಚಿತ್ರಸಾಹಿತಿ ಬೆಳ್ಳಾವೆ ನರಹರಿಶಾಸ್ತ್ರಿ ಹಾಗೂ ಜಿ.ಎಸ್. ಸಿದ್ದಲಿಂಗಯ್ಯ ಅವರಂತಹ ದಿಗ್ಗಜರನ್ನು ನೀಡಿದ ಈ ಭೂಮಿಯಲ್ಲಿ ಕಳೆದ 26 ವರ್ಷಗಳಿಂದ ನಮ್ಮ ಸಂಸ್ಥೆ ಸಾಂಸ್ಕೃತಿಕ ಸೇವೆ ಸಲ್ಲಿಸುತ್ತಿದೆ ಎಂದು ಸ್ಮರಿಸಿದರು.

ವೇದಿಕೆ ಕಾರ್ಯಕ್ರಮದ ನಂತರ ನಡೆದ ಸಾಂಸ್ಕೃತಿಕ ಸಂಧ್ಯಾ ಕಾರ್ಯಕ್ರಮದಲ್ಲಿ ವೈವಿಧ್ಯಮಯ ಪ್ರದರ್ಶನಗಳು ಪ್ರೇಕ್ಷಕರ ಮನಗೆದ್ದವು.

ಡಾ. ಲಕ್ಷ್ಮಣದಾಸ್ ತಂಡ: ಭಕ್ತಿ ಮತ್ತು ಭಾವರಂಜಿನಿ.

ದಿಬ್ಬೂರು ಮಂಜು ತಂಡ: ಸುಗಮ ಸಂಗೀತ ಸಿಂಚನ.

ಡಿ. ನಾಗರಾಜು ತಂಡ: ಜಾನಪದ ಬಯಲಾಟದ ಪದಗಳು.

ರತ್ನಮ್ಮ ಹೆಚ್.ಟಿ ತಂಡ: ಗೀತಗಾಯನ ಧಾರೆ.

ಮಲ್ಲನಾಯಕನಹಳ್ಳಿ ದ್ಯಾವರಪ್ಪ ತಂಡ: ತತ್ವಪದ ಗಾಯನ.

ಅಂಜನಮೂರ್ತಿ ಮತ್ತು ಮರಿಸ್ವಾಮಿ ತಂಡ: ರಂಗಸಂಗೀತ ಹಾಗೂ ಭಜನಾವಳಿ.

ಕಸಾಪ ತಾಲೂಕು ಅಧ್ಯಕ್ಷ ಚಿಕ್ಕಬೆಳ್ಳಾವೆ ಶಿವಕುಮಾರ್, ಪೊಲೀಸ್ ಅಧಿಕಾರಿ ಸಾವಿತ್ರಿ ಸೇರಿದಂತೆ ಹಲವು ಗಣ್ಯರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

# ಭಕ್ತಿ, ಸಡಗರದಿಂದ ಹಿರೇಮಠ ಶ್ರೀಗಳ ಜನ್ಮವರ್ಧಂತಿ ಆಚರಣೆ



ತುಮಕೂರು

ನಗರದ ಹಿರೇಮಠಾಧ್ಯಕ್ಷರಾದ ಡಾ. ಶಿವಾನಂದ ಶಿವಾಚಾರ್ಯ ಸ್ವಾಮೀಜಿಗಳ 65ನೇ ಜನ್ಮವರ್ಧಂತಿಯನ್ನು ಭಾನುವಾರ ಭಕ್ತಾಧಿಗಳು ಅತ್ಯಂತ ಶ್ರದ್ಧಾಭಕ್ತಿಯಿಂದ ಆಚರಿಸಿದರು. ಶ್ರೀಮಠದಲ್ಲಿ ನಡೆದ ಈ ವಿಶೇಷ ಸಮಾರಂಭದಲ್ಲಿ ವಿವಿಧ ಧಾರ್ಮಿಕ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಜನ್ಮವರ್ಧಂತಿಯ ಅಂಗವಾಗಿ ಶಾಸಕ ಜಿ.ಬಿ. ಜ್ಯೋತಿಗಣೇಶ್ ಅವರು ಶ್ರೀಗಳ ಸನ್ನಿಧಿಯಲ್ಲಿ 65 ದೀಪಗಳನ್ನು ಬೆಳಗುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಈ ವೇಳೆ ಸ್ವಾಮೀಜಿಗಳಿಗೆ ಭಕ್ತಿ ಸಮರ್ಪಣೆ ಮಾಡಿದ ಶಾಸಕರು, ಶ್ರೀಗಳ ಆಶೀರ್ವಾದ ಪಡೆದರು. ಅದಕ್ಕೂ ಮುನ್ನ ಬೆಳಿಗ್ಗೆ ಸ್ವಾಮೀಜಿಗಳು ಶ್ರೀಮಠದ ಮಲ್ಲಿಕಾರ್ಜುನ ಸ್ವಾಮಿಗೆ ರುದ್ರಾಭಿಷೇಕ ನೆರವೇರಿಸಿದರು.

ಇದೇ ಸಂದರ್ಭದಲ್ಲಿ ನಿವೃತ್ತ ಪ್ರಾಧ್ಯಾಪಕ ಡಾ. ಎಂ.ಪಿ. ಶಂಕರಪ್ಪ ರಚಿಸಿರುವ 'ತುಮಕೂರಿನ ಆನಂದ ಶ್ರೀ ಶಿವಾಚಾರ್ಯ ಗುರುಗಳು' ಎಂಬ ಗೀತೆಯ ಧ್ವನಿಮುದ್ರಿಕೆಯನ್ನು ಬಿಡುಗಡೆ ಮಾಡಿ ಶ್ರೀಗಳಿಗೆ ಸಮರ್ಪಿಸಲಾಯಿತು. ಅಲ್ಲದೆ, ಪ್ರಸ್ತುತ ಜಗತ್ತಿನಲ್ಲಿ ನಡೆಯುತ್ತಿರುವ ಯುದ್ಧದ ದುಷ್ಪರಿಣಾಮಗಳ ಕುರಿತು ಶ್ರೀಗಳು ಬರೆದಿರುವ ಚಿಂತನಶೀಲ ಲೇಖನ ಹಾಗೂ ಅವರ 65 ವರ್ಷಗಳ ಜೀವನದ ಪೂರ್ವಭಾವಿ ಲೇಖನವನ್ನು ಲೋಕಾರ್ಪಣೆ ಮಾಡಲಾಯಿತು.

ಜನ್ಮವರ್ಧಂತಿ ನಿಮಿತ್ತ ಕಳೆದ ಬುಧವಾರದಿಂದಲೇ ಶ್ರೀಮಠದಲ್ಲಿ ನಿರಂತರವಾಗಿ ದಶವಿಧ್ದ ಗೋಷ್ಠಿಗಳು ನಡೆದವು. ಸಜ್ಜನಗೋಷ್ಠಿ, ಸದ್ಭಾವನಾಗೋಷ್ಠಿ, ಸತ್ಸಂಗಗೋಷ್ಠಿ ಸೇರಿದಂತೆ ಒಟ್ಟು ಹತ್ತು ವಿವಿಧ ಗೋಷ್ಠಿಗಳ ಮೂಲಕ ಜ್ಞಾನದಾಸೋಹ ನಡೆಯಿತು. ಶ್ರೀಗಳ ನೇತೃತ್ವದಲ್ಲಿ ಲಿಂಗಧಾರಣ ಮಹೋತ್ಸವ ಮತ್ತು ಲಿಂಗದೀಕ್ಷಾ ಕಾರ್ಯಕ್ರಮಗಳು ಅರ್ಥಪೂರ್ಣವಾಗಿ ಜರುಗಿದವು. ಕಾರ್ಯಕ್ರಮದಲ್ಲಿ ಮಾಜಿ ಸಚಿವ ಸೊಗಡು ಶಿವಣ್ಣ, ಜಿಲ್ಲಾ ಕಸಾಪ ಅಧ್ಯಕ್ಷ ಕೆ.ಎಸ್. ಸಿದ್ಧಲಿಂಗಪ್ಪ, ಪ್ರಜಾಪ್ರಗತಿ ಪತ್ರಿಕೆ ಸಂಪಾದಕ ಡಾ. ಎಸ್. ನಾಗಣ್ಣ ಸೇರಿದಂತೆ ವೀರಶೈವ ಸಮಾಜ ಸೇವಾ ಸಮಿತಿ ಹಾಗೂ ವೀರಶೈವ ಸಹಕಾರ ಬ್ಯಾಂಕಿನ ಪದಾಧಿಕಾರಿಗಳು ಭಾಗವಹಿಸಿ ಗುರುವಂದನೆ ಸಲ್ಲಿಸಿದರು. ಆಗಮಿಸಿದ್ದ ಸಾವಿರಾರು ಭಕ್ತರಿಗೆ ಪ್ರಸಾದ ವಿನಿಯೋಗ ಮಾಡಲಾಯಿತು.

# ಅಹಿಂಸೆ ಮತ್ತು ಸಮಾನತೆಯಿಂದ ಮಾತ್ರ ಸಶಕ್ತ ಸಮಾಜ ನಿರ್ಮಾಣ ಸಾಧ್ಯ: ಸಿಇಓ



ಕೋಲಾರ

"ಜಗತ್ತಿಗೆ ಶಾಂತಿ ಮತ್ತು ಅಹಿಂಸೆಯ ಪಾಠ ಬೋಧಿಸಿದ ಭಗವಾನ್ ಮಹಾವೀರರ ತತ್ವಗಳು ಇಂದಿನ ಸಂಘರ್ಷಮಯ ಸಮಾಜಕ್ಕೆ ಅತ್ಯಂತ ಪ್ರಸ್ತುತವಾಗಿವೆ. ನಾವು ಅಹಿಂಸೆಯ ಹಾದಿಯಲ್ಲಿ ಸಾಗುವುದರಿಂದ ಮಾತ್ರ ಸದೃಢ ಸಮಾಜ ಕಟ್ಟಲು ಸಾಧ್ಯ" ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಡಾ. ಪ್ರವೀಣ್ ಪಿ. ಬಾಗೇವಾಡಿ ಅಭಿಪ್ರಾಯಪಟ್ಟರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಮಂಗಳವಾರ ಹಮ್ಮಿಕೊಳ್ಳಲಾಗಿದ್ದ 'ಭಗವಾನ್ ಮಹಾವೀರ ಜಯಂತಿ' ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಹಾವೀರರ ಬದುಕೇ ಒಂದು ಮಹಾನ್ ಆದರ್ಶ:

ರಾಜಮನೆತನದಲ್ಲಿ ಜನಿಸಿದರೂ ಜನಸಾಮಾನ್ಯರ ಕಷ್ಟಕ್ಕೆ ಮಿಡಿದು, ಐಹಿಕ ಸುಖತ್ಯಜಿಸಿ ಜ್ಞಾನೋದಯ ಪಡೆದ ವರ್ಧಮಾನ ಮಹಾವೀರರ ಜೀವನ ನಮಗೆಲ್ಲರಿಗೂ ಪ್ರೇರಣೆ. ಜೈನ ಧರ್ಮದ 24ನೇ ತೀರ್ಥಂಕರರಾಗಿ ಅವರು ನೀಡಿದ ಪಂಚಶೀಲ ತತ್ವಗಳು ಮನುಕುಲದ ಏಳಿಗೆಗೆ ಪೂರಕವಾಗಿವೆ. "ತನ್ನೊಳಗಿನ ದೌರ್ಬಲ್ಯಗಳನ್ನು ಗೆಲ್ಲುವವನೇ ನಿಜವಾದ ವಿಜೇತ (ಜಿನ)" ಎಂಬ ಅವರ ಮಾತು ಇಂದಿಗೂ ಸತ್ಯ ಎಂದು ಬಣ್ಣಿಸಿದರು.

ಹಿಂಸೆಯ ಮನಸ್ಥಿತಿ ದೂರವಾಗಲಿ:

ಇಂದಿನ ಕಾಲಘಟ್ಟದಲ್ಲಿ ನಾವು ಚಲನಚಿತ್ರಗಳಲ್ಲೂ ಹಿಂಸೆಯನ್ನೇ ಇಷ್ಟಪಡುವ ಮನಸ್ಥಿತಿ ಬೆಳೆಸಿಕೊಳ್ಳುತ್ತಿದ್ದೇವೆ. ಆದರೆ ಶಾಂತಿ ನೆಲೆಸಬೇಕಾದರೆ ಅಹಿಂಸೆ ಅನಿವಾರ್ಯ. ಮಹಾವೀರ, ಬುದ್ಧ, ಬಸವಣ್ಣ, ಗಾಂಧೀಜಿ ಹಾಗೂ ಅಂಬೇಡ್ಕರ್ ಅವರಂತಹ ಮಹಾನ್ ಪುರುಷರು ಭಾರತದ ಇತಿಹಾಸವನ್ನು ಉದಾತ್ತ ತತ್ವಗಳ ಮೂಲಕವೇ ರೂಪಿಸಿದ್ದಾರೆ ಎಂದು ನೆನಪಿಸಿದರು.

ವಿವಿಧತೆಯಲ್ಲಿ ಏಕತೆಯೇ ಭಾರತದ ಸಾರ:

ಬೌದ್ಧ, ಜೈನ, ಹಿಂದೂ, ಸಿಖ್ ಸೇರಿದಂತೆ ಎಲ್ಲಾ ಧರ್ಮಗಳ ಮೂಲ ಸಾರ ಮನುಕುಲದ ಒಳಿತೇ ಆಗಿದೆ. ಈ ಎಲ್ಲಾ ಧರ್ಮಗಳ ಉತ್ತಮ ಅಂಶಗಳನ್ನು ಅಳವಡಿಸಿಕೊಂಡು ಅನ್ಯೋನ್ಯವಾಗಿ ಬಾಳುವುದೇ ನಾವು ಮಹಾನ್ ಪುರುಷರಿಗೆ ನೀಡುವ ನಿಜವಾದ ಗೌರವ ಎಂದು ಅವರು ಕರೆ ನೀಡಿದರು.

ಈ ಕಾರ್ಯಕ್ರಮದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ರವಿಚಂದ್ರ, ಸಹಾಯಕ ಯೋಜನಾಧಿಕಾರಿ ವೆಂಕಟಾಚಲಪತಿ, ಮುಖ್ಯ ಲೆಕ್ಕಾಧಿಕಾರಿ ರಘುನಾಥ ರೆಡ್ಡಿ, ಯೋಜನಾ ನಿರ್ದೇಶಕ ಮಂಜುನಾಥ್ ಸ್ವಾಮಿ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

03/04/2026
ಭಾರತ ಸಾರಥಿ
BHARATHA SARATHI KANNADA DAILY NEWS PAPER
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# 3ರಿಂದ ರಾಷ್ಟ್ರ ಸೇವಾ ದಳದ ವಸತಿ ಶಿಬಿರ



ಕೋಲಾರ

ತಾಲೂಕಿನ ಭಕ್ತರಹಳ್ಳಿಯ ಬಿಎಂವಿ ಪ್ರೌಢಶಾಲೆಯಲ್ಲಿ ವಿದ್ಯಾರ್ಥಿಗಳಿಗಾಗಿ ಏಪ್ರಿಲ್ 3ರಿಂದ 10ರವರೆಗೆ 8 ದಿನಗಳ ಕಾಲ ರಾಷ್ಟ್ರ ಸೇವಾ ದಳದ ವಸತಿ ಶಿಬಿರವನ್ನು ಆಯೋಜಿಸಲಾಗಿದೆ ಎಂದು ವಿದ್ಯಾಸಂಸ್ಥೆಯ ಸಂಸ್ಥಾಪಕ ಟ್ರಸ್ಟಿ ಎಲ್. ಕಾಲಪ್ಪ ತಿಳಿಸಿದರು.

ನಗರದ ಕಾರ್ಯನಿರತ ಪತ್ರಕರ್ತರ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, "ಬಿಎಂವಿ ಎಜುಕೇಷನ್ ಟ್ರಸ್ಟ್ ಮತ್ತು ಬೆಂಗಳೂರಿನ ಸಮಾಜವಾದಿ ಅಧ್ಯಯನ ಕೇಂದ್ರದ ಆಶ್ರಯದಲ್ಲಿ ನಡೆಯಲಿರುವ ಈ ಶಿಬಿರದಲ್ಲಿ 85 ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ," ಎಂದು ಮಾಹಿತಿ ನೀಡಿದರು.

"1941ರಲ್ಲಿ ಸಾಣೆ ಗುರೂಜಿ, ಎಸ್.ಎಂ. ಜೋಷಿ ಮತ್ತು ಎನ್.ಜಿ. ಗೋರೆ ಅವರಿಂದ ಆರಂಭವಾದ ರಾಷ್ಟ್ರ ಸೇವಾ ದಳವು ರಾಷ್ಟ್ರೀಯತೆ, ಸಮಾನತೆ ಮತ್ತು ಜಾತ್ಯಾತೀತ ತತ್ವಗಳನ್ನು ಹೊಂದಿದೆ. ಮಕ್ಕಳಲ್ಲಿ ಕಿರಿಯ ವಯಸ್ಸಿನಲ್ಲೇ ಸಮಾಜವಾದದ ಮೂಲ ಪರಿಕಲ್ಪನೆಗಳಾದ ಸ್ವಾತಂತ್ರ್ಯ, ಸಹೋದರತ್ವ ಹಾಗೂ ವೈಜ್ಞಾನಿಕ ಮನೋಭಾವವನ್ನು ಬೆಳೆಸುವುದು ಈ ಶಿಬಿರದ ಮುಖ್ಯ ಉದ್ದೇಶವಾಗಿದೆ. ಶಿಬಿರದಲ್ಲಿ ಪ್ರತಿದಿನ ಯೋಗ, ವ್ಯಾಯಾಮ, ಕವಾಯತು ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ," ಎಂದು ಅವರು ವಿವರಿಸಿದರು.

ಏಪ್ರಿಲ್ 3ರ ಶುಕ್ರವಾರ ಬೆಳಿಗ್ಗೆ 11 ಗಂಟೆಗೆ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಉಪಾಧ್ಯಕ್ಷ ಬಿ.ಆರ್. ಪಾಟೀಲ್ ಅವರು ತೆಂಗಿನ ಸಸಿಗೆ ನೀರೆರೆಯುವ ಮೂಲಕ ಶಿಬಿರ ಉದ್ಘಾಟಿಸುವರು. ಸಮಾರೋಪ ಸಮಾರಂಭಕ್ಕೆ ರಾಷ್ಟ್ರ ಸೇವಾ ದಳದ ರಾಷ್ಟ್ರೀಯ ಅಧ್ಯಕ್ಷ ಅಜಿತ್ ಶಿಂಧೆ ಪುಣೆಯಿಂದ ಆಗಮಿಸಲಿದ್ದಾರೆ.

ಶಿಬಿರದಲ್ಲಿ ಶಾಸಕ ಬಿ.ಎನ್. ರವಿಕುಮಾರ್, ಮಾಜಿ ಎಂಎಲ್‌ಸಿ ಮೋಹನ್ ಕೊಂಡಜ್ಜಿ, ವಿಶ್ರಾಂತ ಕುಲಪತಿ ಎ. ಮುರಿಗೆಪ್ಪ ಸೇರಿದಂತೆ ಹಲವು ಸಮಾಜವಾದಿ ಚಿಂತಕರು ಮತ್ತು ತಜ್ಞರು ಪಾಲ್ಗೊಂಡು ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಲಿದ್ದಾರೆ. ಪುಣೆಯ ಕೇಂದ್ರ ಕಚೇರಿಯಿಂದ ಆಗಮಿಸುವ ಬಾಬಾ ಸಾಹೇಬ್ ನದಾಫ್ ನೇತೃತ್ವದ ನಾಲ್ವರ ತಂಡ ಶಿಬಿರಾರ್ಥಿಗಳಿಗೆ ತರಬೇತಿ ನೀಡಲಿದೆ. ಎಲ್. ಕಾಲಪ್ಪ ಅವರು ಶಿಬಿರದ 'ಕ್ಯಾಂಪ್ ಕಮಾಂಡೆಂಟ್' ಆಗಿ ಕಾರ್ಯನಿರ್ವಹಿಸಲಿದ್ದಾರೆ.

# ಮಹಿಳೆ ಆರ್ಥಿಕವಾಗಿ ಸಬಲಳಾಗಬೇಕು: ಡಾ.ಬಿ.ಶಾಮಲಾ

ರಾಮನಗರ

ಮಹಿಳೆ ಸಮಾಜದ ಅವಿಭಾಜ್ಯ ಅಂಗವಾಗಿದ್ದು, ಆಕೆಯ ಸಬಲತೆ ಸಮಾಜದ ಸಮಗ್ರ ಅಭಿವೃದ್ಧಿಗೆ ಅನಿವಾರ್ಯವಾಗಿದೆ. ಮಹಿಳೆ ಕೇವಲ ಕುಟುಂಬದ ಅಡಿಪಾಯವಾಗಿರದೇ, ದೇಶದ ಆರ್ಥಿಕ ಮತ್ತು ಸಾಮಾಜಿಕ ಅಭಿವೃದ್ಧಿಗೆ ಪ್ರಮುಖ ಚಾಲಕ ಶಕ್ತಿಯಾಗಿದ್ದಾರೆ. ಈ ಹಿನ್ನೆಲೆಯಲ್ಲಿ ಮಹಿಳೆಯರು ಆರ್ಥಿಕವಾಗಿ ಹಾಗೂ ಹಾರ್ದಿಕವಾಗಿ ಸಬಲರಾಗಬೇಕು ಎಂಬುದು ಇಂದಿನ ಕಾಲದ ಅಗತ್ಯವಾಗಿದೆ ಎಂದು ಕನಕಪುರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯರಾದ ಡಾ. ಬಿ. ಶಾಮಲಾ ಅಭಿಪ್ರಾಯಪಟ್ಟರು.

ಅವರು ಕನಕಪುರದ ಪ್ರಥಮ ದರ್ಜೆ ಕಾಲೇಜಿನಲ್ಲಿ ಮಹಿಳಾ ಘಟಕದ ವತಿಯಿಂದ ಆಯೋಜಿಸಲಾದ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ಕಾರ್ಯಕ್ರಮದಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಮಹಿಳೆಯರು ತಮ್ಮ ಸ್ವಂತ ಆದಾಯವನ್ನು ಹೊಂದಿದಾಗ ಮಾತ್ರ ನಿಜವಾದ ಸ್ವಾತಂತ್ರ್ಯವನ್ನು ಅನುಭವಿಸಬಹುದು. ಆರ್ಥಿಕ ಸಬಲತೆ ಮಹಿಳೆಯರಲ್ಲಿ ಆತ್ಮವಿಶ್ವಾಸವನ್ನು ಬೆಳೆಸುವುದಲ್ಲದೆ, ಪೂರ್ವಗ್ರಹ ಪೀಡಿತ ಮನಸ್ಸುಗಳಿಂದ ಮುಕ್ತವಾಗಿ ಸ್ವತಂತ್ರ ಜೀವನವನ್ನು ನಡೆಸಲು ಸಹಕಾರಿ ಆಗುತ್ತದೆ. ಮಹಿಳೆ ತನ್ನ ನಿರ್ಧಾರಗಳನ್ನು ತಾನೇ ತೆಗೆದುಕೊಳ್ಳುವ ಸಾಮರ್ಥ್ಯವನ್ನು ಹೊಂದಿದಾಗ ಮಾತ್ರ ಆಕೆಯ ವ್ಯಕ್ತಿತ್ವವು ಸಂಪೂರ್ಣವಾಗುತ್ತದೆ ಎಂದರು. ಇದೇ ಸಂದರ್ಭದಲ್ಲಿ ಮಾತನಾಡಿದ ಇತಿಹಾಸ ವಿಭಾಗದ ಮುಖ್ಯಸ್ಥರಾದ ಪ್ರೊ. ಸಾವಿತ್ರಿ ಅವರು, ಇತಿಹಾಸದಲ್ಲಿಯೇ ಮಹಿಳೆಯರು ಹಲವಾರು ಸವಾಲುಗಳನ್ನು ಎದುರಿಸಿಕೊಂಡು ತಮ್ಮದೇ ಆದ ಸ್ಥಾನವನ್ನು ನಿರ್ಮಿಸಿಕೊಂಡಿದ್ದಾರೆ. ಇಂದಿನ ಮಹಿಳೆಯರು ಶಿಕ್ಷಣ ಮತ್ತು ಉದ್ಯೋಗದ ಮೂಲಕ ತಮ್ಮ ಬದುಕನ್ನು ಸ್ವತಂತ್ರವಾಗಿ ರೂಪಿಸಿಕೊಳ್ಳಬೇಕು ಎಂದು ಕರೆ ನೀಡಿದರು. ಕಾರ್ಯಕ್ರಮದಲ್ಲಿ ವಾಣಿಜ್ಯ ಶಾಸ್ತ್ರ ವಿಭಾಗದ ಸಿದ್ದಪ್ಪಾಜಿ, ಡಾ. ಗೀತಾಬಾಯಿ, ಡಾ. ರಾಧಿಕಾ, ಅಕ್ಷತಾ, ಪರಂಜ್ಯೋತಿ ಕುಮಾರ್, ಪ್ರಸನ್ನ ಕುಮಾರ್, ನಂಜುಂಡ ಸೇರಿದಂತೆ ಹಲವರು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಂಡರು. ಮಹಿಳೆಯರ ಶಿಕ್ಷಣ, ಉದ್ಯೋಗಾವಕಾಶಗಳು ಹಾಗೂ ಸಮಾಜದಲ್ಲಿನ ಸಮಾನತೆ ಕುರಿತು ಅವರು ವಿಸ್ತಾರವಾಗಿ ಮಾತನಾಡಿದರು. ಕಾರ್ಯಕ್ರಮದ ವಿಶೇಷ ಆಕರ್ಷಣೆಯಾಗಿ ಕಾಲೇಜಿನ ಅಂತಿಮ ವರ್ಷದ ವಿದ್ಯಾರ್ಥಿನಿಯರು ಮಹಿಳಾ ಪ್ರಾಧ್ಯಾಪಕರಿಗಾಗಿ ಹಲವು ಮನರಂಜನಾ ಕ್ರೀಡೆಗಳನ್ನು ಆಯೋಜಿಸಿದ್ದರು. ಈ ಕ್ರೀಡೆಗಳು ಕಾರ್ಯಕ್ರಮಕ್ಕೆ ಉತ್ಸಾಹವನ್ನು ಹೆಚ್ಚಿಸಿತು ಮತ್ತು ಎಲ್ಲರಲ್ಲೂ ಸಂತೋಷದ ವಾತಾವರಣವನ್ನು ನಿರ್ಮಿಸಿತು. ಒಟ್ಟಾರೆ, ಈ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ಕಾರ್ಯಕ್ರಮವು ಮಹಿಳೆಯರ ಸಬಲತೆಗೆ ಹೊಸ ದಿಕ್ಕು ತೋರಿಸುವಂತಾಯಿತು. ಮಹಿಳೆಯರು ಆರ್ಥಿಕವಾಗಿ ಹಾಗೂ ಮಾನಸಿಕವಾಗಿ ಬಲಿಷ್ಠರಾಗಿದಾಗ ಮಾತ್ರ ಸಮಾಜವು ಸಮಾನತೆ ಮತ್ತು ನ್ಯಾಯದ ಮಾರ್ಗದಲ್ಲಿ ಮುಂದುವರಿಯುತ್ತದೆ ಎಂಬ ಸಂದೇಶವನ್ನು ಕಾರ್ಯಕ್ರಮವು ಸಾರಿತು. ಕಾರ್ಯಕ್ರಮದಲ್ಲಿ ಅತಿಥಿ ಉಪನ್ಯಾಸಕ ಬಿ. ಪಿ. ಸುರೇಶ್, ಆರ್. ಡಿ. ಬಸವರಾಜು, ಕೃಷ್ಣಯ್ಯ, ಚಂದ್ರಶೇಖರ್, ಲೋಕೇಶ್, ರಾಜೀವ್, ಚಂದನ್, ಮಂಜು, ವಿನಯ್ ಮುಂತಾದವರು ಭಾಗವಹಿಸಿದ್ದರು.

# 'ಎಲ್‌ಪಿಜಿ ಕೊರತೆಯಿಲ್ಲ'

ಬೆಂಗಳೂರು

ಪೂರೈಕೆಯ ಕೊರತೆಯಿಂದಾಗಿ ಬುಧವಾರ ರಾಜಧಾನಿ ಬೆಂಗಳೂರು ಸೇರಿದಂತೆ ರಾಜ್ಯಾದ್ಯಂತ ಆಟೋ ಎಲ್‌ಪಿಜಿ ಕೊರತೆ ತೀವ್ರಗೊಂಡಿದ್ದು, ಹಲವು ಎಲ್‌ಪಿಜಿ ಬಂಕ್‌ಗಳಲ್ಲಿ ಕಿಲೋಮೀಟರ್‌ಗಟ್ಟಲೇ ಆಟೋಗಳು ಕ್ಯೂ ನಿಂತಿರುವ ದೃಶ್ಯಗಳು ಕಂಡುಬರುತ್ತಿವೆ.

ಆದರೆ ಈ ಸಮಸ್ಯೆ ಖಾಸಗಿ ತೈಲ ಕಂಪನಿಗಳ ಎಲ್‌ಪಿಜಿ ಸ್ಟೇಷನ್‌ಗಳಲ್ಲಿ ಮಾತ್ರ ಇದೆ. ಸರ್ಕಾರಿ ಸ್ವಾಮ್ಯದ ತೈಲ ಕಂಪನಿಗಳ ಎಲ್‌ಪಿಜಿ ಸ್ಟೇಷನ್‌ಗಳಲ್ಲಿ ಯಾವುದೇ ಕೊರತೆ ಇಲ್ಲ ಎಂದು ರಾಜ್ಯ ಸರ್ಕಾರ ಹೇಳಿದೆ.

"ನಾನು ಕಳೆದ ನಾಲ್ಕು ಗಂಟೆಗಳಿಂದ ನನ್ನ ಆಟೋರಿಕ್ಷಾಗೆ ಎಲ್‌ಪಿಜಿ ತುಂಬಿಸಲು ಪ್ರಯತ್ನಿಸುತ್ತಿದ್ದೇನೆ. ಆದರೆ ಎಲ್ಲಿಯೂ ಸಿಗುತ್ತಿಲ್ಲ. ನನ್ನ ಆಟೋದಲ್ಲಿ ಎಲ್ ಪಿಜಿ ಖಾಲಿಯಾಗುತ್ತಿದೆ" ಎಂದು ಆರ್‌ಟಿ ನಗರದ ಎಲ್‌ಪಿಜಿ ಸ್ಟೇಷನ್‌ನಲ್ಲಿದ್ದ ಆಟೋ ಚಾಲಕ ಅಬ್ದುಲ್ ಕರೀಮ್ ಹೇಳಿದ್ದಾರೆ.

# 'ಹೆಣ್ಣಿನ ಅಸ್ತಿತ್ವಕ್ಕೆ ಸಾಧನೆಯೇ ಸಮರ್ಥ ಉತ್ತರ'



ತುಮಕೂರು

"ಸಮಾಜದಲ್ಲಿ ಹೆಣ್ಣು ತನ್ನ ಅಸ್ತಿತ್ವವನ್ನು ಉಳಿಸಿಕೊಳ್ಳಲು ಮೊದಲು ಆದ್ಯತೆ ನೀಡಬೇಕು. ಅಸೂಯೆ ಮತ್ತು ಅಪಹಾಸ್ಯಗಳಿಗೆ ಸಾಧನೆಯ ಮೂಲಕವೇ ಸಮರ್ಥ ಉತ್ತರ ನೀಡಬೇಕು" ಎಂದು ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ನೂರುನ್ನೀಸ ಅವರು ಅಭಿಪ್ರಾಯಪಟ್ಟರು.

ನಗರದ ಕನ್ನಡ ಭವನದಲ್ಲಿ ಜಿಲ್ಲಾ ಕಸಾಪ, ಜಿಲ್ಲಾ ಲೇಖಕಿಯರ ಸಂಘ, ಮುನ್ನಡೆ ಸಾಮಾಜಿಕ ಸಂಸ್ಥೆ ಹಾಗೂ ಮಹಿಳಾ ದೌರ್ಜನ್ಯ ವಿರೋಧಿ ಒಕ್ಕೂಟದ ವತಿಯಿಂದ ಆಯೋಜಿಸಿದ್ದ ವಿಶ್ವ ಮಹಿಳಾ ದಿನಾಚರಣೆ ಮತ್ತು ದತ್ತಿ ಪ್ರಶಸ್ತಿ ಪ್ರದಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಆರ್ಥಿಕ ಸ್ವಾತಂತ್ರ್ಯ ಅತ್ಯಗತ್ಯ

"ಪ್ರತಿ ಹೆಣ್ಣಿನ ನಗುವಿನ ಹಿಂದೆ ಒಂದು ಕಥೆ ಇರುತ್ತದೆ. ಮಹಿಳೆ ಕೇವಲ ಆರ್ಥಿಕ ಸ್ವಾವಲಂಬನೆಯನ್ನು ಸಾಧಿಸಿದರೆ ಸಾಲದು, ಆರ್ಥಿಕ ಸ್ವಾತಂತ್ರ್ಯವನ್ನೂ ಹೊಂದಬೇಕು. ಆಗ ಮಾತ್ರ ಆಕೆಯ ಸ್ಥಾನ ಭದ್ರವಾಗುತ್ತದೆ. ಗಂಡಿನ ಜೊತೆಗಿನ ಸ್ಪರ್ಧೆಯು ಯಾವಾಗಲೂ ಆರೋಗ್ಯಪೂರ್ಣವಾಗಿರಲಿ" ಎಂದು ಅವರು ಮಹಿಳೆಯರಿಗೆ ಕರೆ ನೀಡಿದರು.

ದತ್ತಿ ಪ್ರಶಸ್ತಿ ಪ್ರದಾನ ಮತ್ತು ಸಂವಾದ

ಕಾರ್ಯಕ್ರಮದಲ್ಲಿ ವಿವಿಧ ಕ್ಷೇತ್ರಗಳ ಸಾಧಕಿಯರನ್ನು ಗೌರವಿಸಲಾಯಿತು.

ಲತಾ ಜಿ.ಕೆ. ಕುಲಕರ್ಣಿ ದತ್ತಿ ಪ್ರಶಸ್ತಿ: ನಳಿನಾ, ಮಧುಶ್ರೀ ಹಾಗೂ ಶ್ರೀದೇವಿ ಅವರಿಗೆ ಪ್ರದಾನ ಮಾಡಲಾಯಿತು.

ಲೇಖಕಿಯರ ಸಂಘದ ದತ್ತಿ ಪ್ರಶಸ್ತಿ: ಚಂದ್ರಕಲಾ ಅವರಿಗೆ ನೀಡಿ ಗೌರವಿಸಲಾಯಿತು.

ನಂತರ ನಡೆದ ಮಹಿಳಾ ಸಬಲೀಕರಣ ಸಂವಾದದಲ್ಲಿ 10 ಮಂದಿ ಸಾಧಕ ಮಹಿಳೆಯರೊಂದಿಗೆ ಸಮಾಲೋಚನೆ ನಡೆಸಲಾಯಿತು. ಸಭೆಯಲ್ಲಿದ್ದ ನೂರಾರು ಮಹಿಳೆಯರು ತಮ್ಮ ಅನುಭವ ಮತ್ತು ಅಭಿಪ್ರಾಯಗಳನ್ನು ಹಂಚಿಕೊಂಡರು.

ಜಿಲ್ಲಾ ಕಸಾಪ ಅಧ್ಯಕ್ಷ ಕೆ.ಎಸ್. ಸಿದ್ದಲಿಂಗಪ್ಪ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಲೇಖಕಿಯರ ಸಂಘದ ಅಧ್ಯಕ್ಷೆ ಡಾ. ಆಶಾ ಬಗ್ಗನಡು ಪ್ರಾಸ್ತಾವಿಕವಾಗಿ ಮಾತನಾಡಿದರು. ವೇದಿಕೆಯಲ್ಲಿ ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷೆ ಬಾ.ಹ. ರಮಾಕುಮಾರಿ, ಹಿರಿಯ ಸಾಹಿತಿ ಜಿ.ಕೆ. ಕುಲಕರ್ಣಿ, ಮುನ್ನಡೆ ಸಂಸ್ಥೆಯ ಯಶೋಧ ಪಿ.ಹೆಚ್., ಜಿ.ಹೆಚ್. ಮಹದೇವಪ್ಪ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಕೋಲಾರದ ಹ್ಯಾಂಡ್ ಬಾಲ್ ವೀರರು ಈಗ ರಾಷ್ಟ್ರಮಟ್ಟಕ್ಕೆ ಸಿದ್ಧ!

ಕೋಲಾರ

ಕರ್ನಾಟಕ ಹ್ಯಾಂಡ್ ಬಾಲ್ ಅಸೋಸಿಯೇಷನ್ ಬೆಂಗಳೂರು ವತಿಯಿಂದ ರಾಮನಗರದ ಕೇಂಬ್ರಿಡ್ಜ್ ಸ್ಕೂಲ್ ಆಫ್ ಎಜುಕೇಶನ್ ಮೈದಾನದಲ್ಲಿ ನಡೆದ ರಾಜ್ಯಮಟ್ಟದ ಹ್ಯಾಂಡ್ ಬಾಲ್ ಸ್ಪರ್ಧೆಯಲ್ಲಿ ಕೋಲಾರ ತಾಲೂಕಿನ ವಕ್ಕಲೇರಿ ಜವಾಹರ್ ನವೋದಯ ವಿದ್ಯಾಸಂಸ್ಥೆಯ 15 ವರ್ಷದೊಳಗಿನ ಬಾಲಕರ ತಂಡ ಐತಿಹಾಸಿಕ ಸಾಧನೆ ಮಾಡಿದೆ. ಇಡೀ ಪಂದ್ಯಾವಳಿಯಲ್ಲಿ ಒಂದೂ ಪಂದ್ಯ ಸೋಲದ 'ಅಪ್ರಜೇಯ' ತಂಡವಾಗಿ ಹೊರಹೊಮ್ಮುವ ಮೂಲಕ ಟ್ರೋಫಿ ಗೆದ್ದು ರಾಷ್ಟ್ರಮಟ್ಟಕ್ಕೆ ಆಯ್ಕೆಯಾಗಿದೆ.

ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ್ದ ಬಲಿಷ್ಠ ತಂಡಗಳ ವಿರುದ್ಧ ಸೆಣಸಿದ ಕೋಲಾರದ ತಂಡ, ಆರಂಭದಿಂದ ಅಂತ್ಯದವರೆಗೆ ಅಬ್ಬರದ ಆಟ ಪ್ರದರ್ಶಿಸಿತು. ಕರ್ನಾಟಕ ಹ್ಯಾಂಡ್ ಬಾಲ್ ಅಸೋಸಿಯೇಷನ್ ಇತಿಹಾಸದಲ್ಲೇ ಅತ್ಯಂತ ಪ್ರಭಾವಶಾಲಿ ಪ್ರದರ್ಶನ ನೀಡಿದ ಈ ತಂಡ, ಟ್ರೋಫಿಯ ಜೊತೆಗೆ ರಾಷ್ಟ್ರಮಟ್ಟದಲ್ಲಿ ಕರ್ನಾಟಕವನ್ನು ಪ್ರತಿನಿಧಿಸುವ ಅರ್ಹತೆಯನ್ನು ಗಿಟ್ಟಿಸಿಕೊಂಡಿದೆ.




ತಂಡದ ನಾಯಕ ರೋಹನ್ ಪಂದ್ಯಾವಳಿಯುದ್ದಕ್ಕೂ ಅತಿ ಹೆಚ್ಚು ಗೋಲುಗಳನ್ನು ದಾಖಲಿಸಿ ತಂಡದ ಗೆಲುವಿನಲ್ಲಿ ಸಿಂಹಪಾಲು ವಹಿಸಿದರು. ಅವರಿಗೆ ಅಷ್ಟೇ ಸಮರ್ಥವಾಗಿ ಸಾಥ್ ನೀಡಿದ ಪಂಕಜ್ ಗೌಡ ಎಂ, ತಂಡವನ್ನು ಯಶಸ್ಸಿನ ಹಾದಿಯಲ್ಲಿ ಮುನ್ನಡೆಸಿದರು. ತರಬೇತುದಾರ ಬಾಬು ಹಾಗೂ ಮೇಲ್ವಿಚಾರಕ ಸುನೀಲ್ ಅವರ ಮಾರ್ಗದರ್ಶನ ಈ ಅದ್ಭುತ ಗೆಲುವಿಗೆ ಪ್ರೇರಣೆಯಾಯಿತು.

ವಿಜೇತ ತಂಡವನ್ನು ಜವಾಹರ್ ನವೋದಯ ವಿದ್ಯಾಸಂಸ್ಥೆಯ ಪ್ರಾಂಶುಪಾಲ ಉಮಾಪತಿ ರೆಡ್ಡಿ ಅಭಿನಂದಿಸಿ, "ನಮ್ಮ ವಿದ್ಯಾರ್ಥಿಗಳು ರಾಷ್ಟ್ರಮಟ್ಟದಲ್ಲೂ ರಾಜ್ಯ ಹಾಗೂ ಜಿಲ್ಲೆಯ ಕೀರ್ತಿಯನ್ನು ಬೆಳಗಲಿ" ಎಂದು ಹಾರೈಸಿದರು.

ಕರ್ನಾಟಕ ಹ್ಯಾಂಡ್ ಬಾಲ್ ಅಸೋಸಿಯೇಷನ್ ಅಧ್ಯಕ್ಷ ರವಿ, ಜಿಲ್ಲಾ ಅಧ್ಯಕ್ಷ ನಾಸಿರ್ ಪಾಷ, ಕಾರ್ಯದರ್ಶಿ ಲಕ್ಷ್ಮೀಕಾಂತ್, ಉಪಪ್ರಾಂಶುಪಾಲೆ ಉಮಾ ಹಾಗೂ ಪೋಷಕರು ಕ್ರೀಡಾಪಟುಗಳ ಸಾಧನೆಯನ್ನು ಶ್ಲಾಘಿಸಿದ್ದಾರೆ.

# ವಿಶ್ವದ ಉದ್ವಿಗ್ನತೆಗೆ ಮಹಾವೀರರ ಅಹಿಂಸಾ ಮಂತ್ರವೇ ಮದ್ದು: ಶಾಸಕ

ತುಮಕೂರು

"ವಿಶ್ವವೇ ಹತ್ತಿ ಉರಿಯುತ್ತಿರುವ ಇಂದಿನ ದಿನಗಳಲ್ಲಿ ಭಗವಾನ್ ಮಹಾವೀರರು ಎರಡು ಸಾವಿರ ವರ್ಷಗಳ ಹಿಂದೆ ಪ್ರತಿಪಾದಿಸಿದ ಶಾಂತಿ ಮತ್ತು ಅಹಿಂಸಾ ತತ್ವಗಳನ್ನು ಪಾಲಿಸುವುದೇ ಸಕಲ ಸಮಸ್ಯೆಗಳಿಗೆ ಏಕೈಕ ಪರಿಹಾರ" ಎಂದು ನಗರ ಶಾಸಕ ಜಿ.ಬಿ. ಜ್ಯೋತಿಗಣೇಶ್ ಅಭಿಪ್ರಾಯಪಟ್ಟರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಆಯೋಜಿಸಿದ್ದ ಭಗವಾನ್ ಮಹಾವೀರರ ಜನ್ಮ ಜಯಂತೋತ್ಸವ ಕಾರ್ಯಕ್ರಮದಲ್ಲಿ ಮಹಾವೀರರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ ಅವರು ಮಾತನಾಡಿದರು.

"ಮಹಾವೀರರ ಅಹಿಂಸೆ, ಶಾಂತಿ ಮತ್ತು ಸಹಿಷ್ಣುತೆಯ ತತ್ವಗಳು ಇಂದಿನ ಪ್ರಪಂಚದ ಉದ್ವಿಗ್ನತೆಯನ್ನು ಶಮನಗೊಳಿಸುವ ಶಕ್ತಿ ಹೊಂದಿವೆ. ಸರ್ಕಾರ ರಜೆ ಘೋಷಿಸಿದ ಹಿನ್ನೆಲೆಯಲ್ಲಿ ಜಿಲ್ಲಾಡಳಿತದ ವತಿಯಿಂದ ಸರಳವಾಗಿ ಆಚರಿಸಲಾಗುತ್ತಿದೆ. ಎಲ್ಲರೂ ಒಟ್ಟಾಗಿ ಬಾಳುವಂತಹ ಸುಂದರ ವಾತಾವರಣ ನಿರ್ಮಾಣವಾಗಲಿ" ಎಂದು ಅವರು ಶುಭ ಹಾರೈಸಿದರು.



ಜಿಲ್ಲಾ ಕಸಾಪ ಅಧ್ಯಕ್ಷ ಕೆ.ಎಸ್. ಸಿದ್ದಲಿಂಗಪ್ಪ ಮಾತನಾಡಿ, "ಯುದ್ಧದಿಂದ ಮನುಕುಲ ಮತ್ತು ಮನುಷ್ಯತ್ವ ಎರಡೂ ನಾಶವಾಗಲಿವೆ. ದ್ವೇಷದಿಂದ ಯಾವುದನ್ನೂ ಗೆಲ್ಲಲು ಸಾಧ್ಯವಿಲ್ಲ, ಪ್ರೀತಿಯಿಂದ ಮಾತ್ರ ಎಲ್ಲರನ್ನೂ ಗೆಲ್ಲಬಹುದು ಎಂಬುದು ಮಹಾವೀರರ ಬೋಧನೆಯ ಸಾರ. ತುಮಕೂರು ಜಿಲ್ಲೆಯ ಗುಬ್ಬಿ, ಚೋಳೂರು ಹಾಗೂ ಮಂದರಗಿರಿಯಲ್ಲಿ ಜೈನ ಧರ್ಮದ ಐತಿಹಾಸಿಕ ಕುರುಹುಗಳು ಇಂದಿಗೂ ಸಜೀವವಾಗಿವೆ" ಎಂದರು.

ಹಿರಿಯ ಸಾಹಿತಿ ಡಾ. ಪದ್ಮಪ್ರಸಾದ್ ಮಾತನಾಡಿ, "ಮಹಾವೀರರು ಪ್ರತಿಪಾದಿಸಿದ ಅಹಿಂಸೆ, ಸತ್ಯ, ಅಸ್ತೇಯ, ಬ್ರಹ್ಮಚರ್ಯ ಮತ್ತು ಅಪರಿಗ್ರಹ ಎಂಬ ಪಂಚತತ್ವಗಳು ಆತ್ಮದ ಮುಕ್ತಿಗೆ ದಾರಿಯಾಗಿವೆ. 12 ವರ್ಷಗಳ ಕಠಿಣ ತಪಸ್ಸಿನ ಮೂಲಕ ಅವರು ಕಂಡುಕೊಂಡ ಜ್ಞಾನ ಇಂದಿನ ಸಮಾಜಕ್ಕೆ ಅತ್ಯಗತ್ಯ" ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ಎನ್. ತಿಪ್ಪೇಸ್ವಾಮಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಈಶ್ವರ್ ಕುಮಾರ್ ಮಿರ್ಜಿ, ಜೈನ ಶ್ವೇತಾಂಬರ ಸಂಘದ ಅಧ್ಯಕ್ಷ ಶಾಂತಿಲಾಲ್, ದಿಗಂಬರ ಸಮಾಜದ ಅಧ್ಯಕ್ಷ ಬಾಹುಬಲಿ ಬಾಬು ಸೇರಿದಂತೆ ಜೈನ ಸಮುದಾಯದ ಪ್ರಮುಖರು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

# ಪಾವಗಡ ಪೊಲೀಸರಿಂದ ಆಟೋ ಚಾಲಕರಿಗೆ ಕ್ಲಾಸ್: ಶಿಸ್ತಿನ ಸಂಚಾರಕ್ಕೆ ಸೂಚನೆ

ಪಾವಗಡ

"ಪಟ್ಟಣದ ಸುಗಮ ಸಂಚಾರಕ್ಕೆ ಆಟೋ ಚಾಲಕರು ಸಹಕರಿಸಬೇಕು. ರಾತ್ರಿ ಸಮಯದಲ್ಲಿ ಸಂಚರಿಸುವಾಗ ಯಾವುದೇ ಅನುಮಾನಾಸ್ಪದ ವ್ಯಕ್ತಿಗಳು ಅಥವಾ ಅಹಿತಕರ ಘಟನೆಗಳು ಕಂಡುಬಂದಲ್ಲಿ ತಕ್ಷಣ ಪೊಲೀಸರಿಗೆ ಮಾಹಿತಿ ನೀಡಬೇಕು" ಎಂದು ನಗರ ವೃತ್ತ ನಿರೀಕ್ಷಕ (ಸಿಪಿಐ) ಕೆ. ಸುರೇಶ್ ತಿಳಿಸಿದರು.

ಮಂಗಳವಾರ ಪಟ್ಟಣದ ಪೊಲೀಸ್ ಠಾಣೆ ಆವರಣದಲ್ಲಿ ಆಯೋಜಿಸಿದ್ದ ಆಟೋ ಚಾಲಕರ ಕುಂದು-ಕೊರತೆಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ನಿಯಮ ಉಲ್ಲಂಘಿಸಿದರೆ ದಂಡ ಪ್ರಯೋಗ

ಆಟೋ ಚಾಲಕರು ಪಾಲಿಸಬೇಕಾದ ಪ್ರಮುಖ ನಿಯಮಗಳ ಬಗ್ಗೆ ಸಿಪಿಐ ಕಟ್ಟುನಿಟ್ಟಿನ ಸೂಚನೆ ನೀಡಿದರು.

<u>ಸಮವಸ್ತ್ರ ಕಡ್ಡಾಯ:</u> ಪ್ರತಿಯೊಬ್ಬ ಚಾಲಕರು ಕಡ್ಡಾಯವಾಗಿ ಸಮವಸ್ತ್ರ ಧರಿಸಿಯೇ ವಾಹನ ಚಾಲನೆ ಮಾಡಬೇಕು.

<u>ದಾಖಲೆಗಳ ನಿರ್ವಹಣೆ:</u> ಚಾಲನಾ ಪರವಾನಗಿ, ಮಾಲಿನ್ಯ ತಪಾಸಣಾ ಪ್ರಮಾಣ ಪತ್ರ ಸೇರಿದಂತೆ ಎಲ್ಲಾ ದಾಖಲೆಗಳನ್ನು ಅಪ್‌ಡೇಟ್ ಆಗಿ ಇಟ್ಟುಕೊಳ್ಳಬೇಕು.

<u>ಹೆಚ್ಚುವರಿ ಪ್ರಯಾಣಿಕರು:</u> ನಿಗದಿತ ಸೀಟುಗಳಿಗಿಂತ ಹೆಚ್ಚು ಜನರನ್ನು ತುಂಬಿಕೊಂಡು ಸಂಚರಿಸುವುದು ಕಂಡುಬಂದಲ್ಲಿ ಭಾರಿ ದಂಡ ವಿಧಿಸಲಾಗುವುದು.

<u>ಪ್ರಯಾಣಿಕರ ಸುಲಿಗೆಗೆ ಅವಕಾಶವಿಲ್ಲ:</u> "ರಾತ್ರಿ ಸಮಯದಲ್ಲಿ ಪ್ರಯಾಣಿಕರಿಂದ ಹೆಚ್ಚಿನ ಹಣ ವಸೂಲಿ ಮಾಡುವ ದೂರುಗಳು ಬರಬಾರದು. ಬಸ್ ನಿಲ್ದಾಣ ಮತ್ತು ಪಟ್ಟಣದ ವಿವಿಧ ವಾರ್ಡ್‌ಗಳಲ್ಲಿ ಸಂಚರಿಸುವಾಗ ಸಾರ್ವಜನಿಕರ ಸುರಕ್ಷತೆಗೆ ಆದ್ಯತೆ ನೀಡಬೇಕು. ಸಂಚಾರಿ ನಿಯಮಗಳನ್ನು ಉಲ್ಲಂಘಿಸದೆ ಶಿಸ್ತಿನಿಂದ ವಾಹನ ಚಾಲನೆ ಮಾಡಬೇಕು" ಎಂದು ಅವರು ಸಲಹೆ ನೀಡಿದರು. ಸಭೆಯಲ್ಲಿ ಆಟೋ ಚಾಲಕರ ಸಂಘದ ಅಧ್ಯಕ್ಷ ಬೇಕರಿ ನಾಗರಾಜ್, ಪೊಲೀಸ್ ಸಿಬ್ಬಂದಿಗಳಾದ ದೀಪಕ್, ರಾಮಕೃಷ್ಣ, ನಾಗೇಶ್, ಪ್ರವೀಣ್, ಜಗದೀಶ್ ಹಾಗೂ ಆಟೋ ಚಾಲಕರಾದ ಸತೀಶ್, ಗುರು ಉಪಸ್ಥಿತರಿದ್ದರು.

# ಕಾರ್ಮಿಕ ವಿರೋಧಿ ನೀತಿ ವಿರೋಧಿಸಿ ತಹಶೀಲ್ದಾರ್ ಕಚೇರಿ ಮುಂದೆ ಧರಣಿ

ಕೋಲಾರ

ಕೇಂದ್ರ ಸರ್ಕಾರದ ಹೊಸ ಕಾರ್ಮಿಕ ಸಂಹಿತೆಗಳು ಕಾರ್ಮಿಕ ವಿರೋಧಿ ಮತ್ತು ಮಾಲೀಕರ ಪರವಾಗಿವೆ ಎಂದು ಆರೋಪಿಸಿ, ಸಿಐಟಿಯು ಕಾರ್ಯಕರ್ತರು ಬುಧವಾರ ನಗರದ ತಹಶೀಲ್ದಾರ್ ಕಚೇರಿ ಮುಂದೆ ಬೃಹತ್ ಪ್ರತಿಭಟನೆ ನಡೆಸಿದರು. ಏಪ್ರಿಲ್ 1 ರಿಂದ ಈ ಸಂಹಿತೆಗಳನ್ನು ಜಾರಿಗೆ ತರುತ್ತಿರುವುದನ್ನು ವಿರೋಧಿಸಿ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿದರು.

ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಸಿಐಟಿಯು ಜಿಲ್ಲಾ ಖಜಾಂಚಿ ಹೆಚ್.ಬಿ. ಕೃಷ್ಣಪ್ಪ, "ವ್ಯವಹಾರ ಸುಲಭೀಕರಣದ ಹೆಸರಿನಲ್ಲಿ ಕಾರ್ಮಿಕರ ಹಕ್ಕುಗಳನ್ನು ಬಲಿ ಕೊಡಲಾಗುತ್ತಿದೆ. ಈ ಸಂಹಿತೆಗಳು ಕಾರ್ಮಿಕರನ್ನು ಮತ್ತೆ ಬ್ರಿಟಿಷ್ ವಸಾಹತು ಕಾಲದ ಶೋಷಣಾತ್ಮಕ ಪರಿಸ್ಥಿತಿಗಳಿಗೆ ತಳ್ಳಲಿವೆ. ಫೆಬ್ರವರಿ 12ರಂದು ನಡೆದ ಐತಿಹಾಸಿಕ ಮುಷ್ಕರದ ನಂತರವೂ ಕೇಂದ್ರ ಸರ್ಕಾರ ಯಾವುದೇ ಸಮಾಲೋಚನೆ ನಡೆಸದೆ ಏಕಪಕ್ಷೀಯವಾಗಿ ನಿರ್ಧಾರ ಕೈಗೊಂಡಿದೆ" ಎಂದು ಆಕ್ರೋಶ ವ್ಯಕ್ತಪಡಿಸಿದರು.



"1926ರ ಟ್ರೇಡ್ ಯೂನಿಯನ್ ಕಾಯ್ದೆಯಿಂದ ಹಿಡಿದು ಇಂದಿನವರೆಗೆ ಸುಮಾರು 150 ವರ್ಷಗಳ ನಿರಂತರ ಹೋರಾಟದಿಂದ ಕಾರ್ಮಿಕರು ಕೆಲಸದ ಭದ್ರತೆ, ಪಿಂಚಣಿ, ಬೋನಸ್ ಮತ್ತು ಸಮಾನ ವೇತನದಂತಹ ಹಕ್ಕುಗಳನ್ನು ಪಡೆದಿದ್ದಾರೆ. 44 ಕೇಂದ್ರ ಕಾನೂನುಗಳನ್ನು ಮತ್ತು 150ಕ್ಕೂ ಹೆಚ್ಚು ರಾಜ್ಯ ಕಾನೂನುಗಳನ್ನು ಅಳಿಸಿ ಹಾಕಿ ನಾಲ್ಕು ಸಂಹಿತೆಗಳನ್ನಾಗಿ ರೂಪಿಸಿರುವುದು ಕಾರ್ಮಿಕರ ಬದುಕಿನ ಮೇಲೆ ಕೊಡಲಿ ಪೆಟ್ಟು ನೀಡಿದಂತಿದೆ" ಎಂದು ಅವರು ವಿವರಿಸಿದರು.

<u>ವರದಿಯ ಪ್ರಮುಖ ಮುಖ್ಯಾಂಶಗಳು:</u>

ಅಂತರರಾಷ್ಟ್ರೀಯ ಮಾನದಂಡಗಳ ಉಲ್ಲಂಘನೆ: ಕಾರ್ಮಿಕ ಸಮ್ಮೇಳನ ಕರೆಯದೆ ನಿಯಮ ರೂಪಿಸಿರುವುದು ಅಂತರರಾಷ್ಟ್ರೀಯ ಕಾರ್ಮಿಕ ಮಾನದಂಡಗಳ ಉಲ್ಲಂಘನೆಯಾಗಿದೆ ಎಂದು ಆರೋಪ.

<u>ಹಕ್ಕುಗಳ ಕಡಿತ:</u> ಕೆಲಸದ ಸುರಕ್ಷತೆ, ಮುಷ್ಕರದ ಹಕ್ಕು ಮತ್ತು ಸಾಮಾಜಿಕ ಭದ್ರತೆಗೆ ಸಂಚಕಾರ ಬರುವ ಆತಂಕ.

<u>ಕೂಡಲೇ ವಾಪಸ್ ಪಡೆಯಲು ಆಗ್ರಹ:</u> ಕಾರ್ಮಿಕ ವಿರೋಧಿ ನೀತಿಗಳನ್ನು ಕೈಬಿಡದಿದ್ದರೆ ಹೋರಾಟ ತೀವ್ರಗೊಳಿಸುವ ಎಚ್ಚರಿಕೆ.

ಪ್ರತಿಭಟನೆಯಲ್ಲಿ ಸಿಐಟಿಯು ತಾಲ್ಲೂಕು ಸಂಚಾಲಕ ಎಂ. ಭೀಮರಾಜ್, ಮುಖಂಡರಾದ ಕಲ್ಪನಾ, ಲೋಕೇಶ್ವರಿ, ಲಕ್ಷ್ಮಿದೇವಿ, ಎಸ್. ಆಶಾ, ರಾಮಚಂದ್ರಪ್ಪ, ಆರೋಗ್ಯನಾಥನ್ ಸೇರಿದಂತೆ ನೂರಾರು ಕಾರ್ಮಿಕರು ಪಾಲ್ಗೊಂಡು ತಹಶೀಲ್ದಾರ್ ಮೂಲಕ ಸರ್ಕಾರಕ್ಕೆ ಮನವಿ ಪತ್ರ ಸಲ್ಲಿಸಿದರು.

# ಕಾರಹಳ್ಳಿ ರಸ್ತೆಯ ರಾಜುಕಾಲುವೆ ಈಗ 'ಮೃತ್ಯುಕೂಪ'!

ಬಂಗಾರಪೇಟೆ

ನಗರದ ಪ್ರಮುಖ ರಸ್ತೆಗಳಲ್ಲಿ ಒಂದಾದ ಕಾರಹಳ್ಳಿ ಮುಖ್ಯರಸ್ತೆಯ ಹಳೆಯ ಪುರಸಭೆ ಪಂಪ್ ಹೌಸ್ ಸಮೀಪವಿರುವ ರಾಜುಕಾಲುವೆ ಸದ್ಯ ಸಾರ್ವಜನಿಕರ ಪಾಲಿಗೆ ಸಾವಿನ ಬಲೆಯಾಗಿ ಪರಿಣಮಿಸಿದೆ. ಯಾವುದೇ ಸುರಕ್ಷತಾ ತಡೆಗೋಡೆ ಇಲ್ಲದೆ ಅಪಾಯಕಾರಿ ಸ್ಥಿತಿಯಲ್ಲಿರುವ ಈ ಕಾಲುವೆ, ವಾಹನ ಸವಾರರು ಹಾಗೂ ಪಾದಚಾರಿಗಳ ಜೀವಕ್ಕೆ ಕಂಟಕವಾಗಿ ಪರಿಣಮಿಸಿದೆ.

ಈ ಮಾರ್ಗವು ನಗರದ ಪ್ರಮುಖ ಸಂಪರ್ಕ ಕೊಂಡಿಯಾಗಿದ್ದು, ಪ್ರತಿದಿನ ಶಾಲಾ ವಾಹನಗಳು, ನೂರಾರು ದ್ವಿಚಕ್ರ ವಾಹನಗಳು ಹಾಗೂ ಪಾದಚಾರಿಗಳು ಇಲ್ಲಿಂದಲೇ ಸಂಚರಿಸುತ್ತಾರೆ. ರಸ್ತೆಯ ಅಂಚಿನಲ್ಲೇ ಕಾಲುವೆ ಇದ್ದರೂ ಯಾವುದೇ ತಡೆಗೋಡೆ ಇಲ್ಲದಿರುವುದು ಜನರಲ್ಲಿ ತೀವ್ರ ಆತಂಕ ಮೂಡಿಸಿದೆ. ವಿಶೇಷವಾಗಿ ರಾತ್ರಿ ವೇಳೆ ಬೀದಿ ದೀಪಗಳಿಲ್ಲದೆ ಕಾಲುವೆಯ ಅಂಚು ತಿಳಿಯದೆ ಸವಾರರು ಕತ್ತಲಲ್ಲಿ ತಡಕಾಡುವಂತಾಗಿದೆ.



ಮಳೆಗಾಲದಲ್ಲಿ ಕಾಲುವೆ ತುಂಬಿ ಹರಿಯುವಾಗ ರಸ್ತೆ ಮತ್ತು ಕಾಲುವೆಯ ನಡುವಿನ ವ್ಯತ್ಯಾಸವೇ ತಿಳಿಯುವುದಿಲ್ಲ. ಈಗಾಗಲೇ ಹಲವು ಸವಾರರು ಸಣ್ಣಪುಟ್ಟ ಅವಘಡಗಳಿಂದ ಪಾರಾಗಿದ್ದು, ದೊಡ್ಡ ಮಟ್ಟದ ಪ್ರಾಣಾಪಾಯ ಸಂಭವಿಸುವ ಮುನ್ನವೇ ನಗರಸಭೆ ಮತ್ತು ಲೋಕೋಪಯೋಗಿ ಇಲಾಖೆ ಎಚ್ಚೆತ್ತುಕೊಳ್ಳಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ.

<u>ನಾಗರಿಕರ ಪ್ರಮುಖ ಬೇಡಿಕೆಗಳು:</u>

<u>ಶಾಶ್ವತ ತಡೆಗೋಡೆ:</u> ಕಲ್ಲು-ಮಣ್ಣಿನ ತೇಪೆ ಹಚ್ಚುವ ಬದಲು ಕಾಂಕ್ರೀಟ್ ಅಥವಾ ಕಬ್ಬಿಣದ ಬಲಿಷ್ಠ ತಡೆಗೋಡೆ ನಿರ್ಮಿಸಬೇಕು.


<u>ಎಚ್ಚರಿಕಾ ಫಲಕ:</u> ಅಪಾಯದ ಸ್ಥಳದಲ್ಲಿ ಪ್ರತಿಫಲಕ ಸ್ಟಿಕ್ಕರ್‌ಗಳು ಹಾಗೂ ಎಚ್ಚರಿಕಾ ಫಲಕ ಅಳವಡಿಸಬೇಕು.

<u>ಬೆಳಕಿನ ವ್ಯವಸ್ಥೆ:</u> ರಾತ್ರಿ ಸಂಚಾರಕ್ಕೆ ಅನುಕೂಲವಾಗುವಂತೆ ಹೈಮಾಸ್ಟ್ ಅಥವಾ ಬೀದಿ ದೀಪ ಅಳವಡಿಸಬೇಕು.



"ಕಾರಹಳ್ಳಿ ಮುಖ್ಯರಸ್ತೆಯಲ್ಲಿ ಈ ರಾಜುಕಾಲುವೆ ಹಲವು ದಿನಗಳಿಂದ ತಡೆಗೋಡೆ ಇಲ್ಲದೆ ಬಾಯ್ಬಿಟ್ಟಿದೆ. ರಾತ್ರಿ ವೇಳೆ ಇದು ಸ್ಪಷ್ಟವಾಗಿ ಕಾಣಿಸದೇ ದೊಡ್ಡ ಅಪಾಯ ಉಂಟಾಗುತ್ತಿದೆ. ಅನಾಹುತ ಸಂಭವಿಸುವ ಮುನ್ನವೇ ಅಧಿಕಾರಿಗಳು ಎಚ್ಚೆತ್ತುಕೊಳ್ಳಬೇಕು."

- ಜಯಂತ್ ಕುಮಾರ್,
ಸ್ಥಳೀಯ ನಿವಾಸಿ, ಬಂಗಾರಪೇಟೆ.



"ಮಳೆ ಬಂದಾಗ ರಸ್ತೆ ಮತ್ತು ಕಾಲುವೆ ಒಂದೇ ರೀತಿ ಕಾಣುತ್ತದೆ. ಸ್ವಲ್ಪ ಎಚ್ಚರ ತಪ್ಪಿದರೂ ವಾಹನ ಕಾಲುವೆಗೆ ಬೀಳುವ ಪರಿಸ್ಥಿತಿ ಇದೆ. ನಾಗರೀಕರ ಸುರಕ್ಷತೆಯ ದೃಷ್ಟಿಯಿಂದ ತಡೆಗೋಡೆ ಹಾಕಿ, ಎಚ್ಚರಿಕಾ ಫಲಕಗಳನ್ನು ಅಳವಡಿಸುವುದು ಅತ್ಯಾವಶ್ಯಕ."

- ಶ್ರೀನಿವಾಸ್, ಮರಗಲ್ ಗ್ರಾಮ.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy